ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು –140**

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಗುರುವಾರ, ದಿನಾಂಕ : ೧೨ನೇ ಫೆಬ್ರವರಿ, ೨೦೧೫**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

## ಓಕಳಿಪುರಂ ರೈಲ್ವೆ ಸ್ಟೇಷನ್ ಅಷ್ಟಪಥ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಮೇಲು ಸೇತುವೆ.

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೬೦ (೯೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ, ಓಕಳಿಪುರಂ, ರೈಲ್ವೆ ಸ್ಟೇಷನ್ ಬಳಿ ಅಷ್ಟಪಥಗಳ ರಸ್ತೆ ಕಾಮಗಾರಿ ಯಾವಾಗ ಪ್ರಾರಂಭವಾಯಿತು ; ಈ ಕಾಮಗಾರಿಗೆ ಉದ್ದೇಶಿಸಲಾಗಿರುವ ಅಂದಾಜು ವೆಚ್ಚ ಎಷ್ಟು ; ಸದರಿ ಕಾಮಗಾರಿಗೆ ಈಗಾಗಲೇ ಖರ್ಚು ಮಾಡಲಾಗಿರುವ ಹಣ ಎಷ್ಟು ; ಕಾಮಗಾರಿ ಯಾವ ಹಂತದಲ್ಲಿದೆ ; ಕಾಮಗಾರಿ ವಿಳಂಬಕ್ಕೆ ಕಾರಣವೇನು ; ಸದರಿ ಕಾಮಗಾರಿಯು ಪೂರ್ಣಗೊಳ್ಳುವುದು ಯಾವಾಗ ;

(ಆ) ಬೆಂಗಳೂರು ನಗರ, ಪದ್ಮನಾಭನಗರ, ದೇವೇಗೌಡ ಪೆಟ್ರೋಲ್ ಬಂಕ್ ಬಳಿ ಕೈಗೊಂಡಿರುವ ಕಿತ್ತೂರು ರಾಣಿಚೆನ್ನಮ್ಮ ವೃತ್ತದ ಮೇಲುಸೇತುವೆ ಕಾಮಗಾರಿ ಯಾವಾಗ ಪ್ರಾರಂಭವಾಯಿತು ; ಉದ್ದೇಶಿತ ಅಂದಾಜು ಮೊತ್ತವೆಷ್ಟು ; ಈಗಾಗಲೇ ಬಿಡುಗಡೆ ಮಾಡಿರುವ ಹಣವೆಷ್ಟು ; ಕಾಮಗಾರಿ ಯಾವ ಹಂತದಲ್ಲಿದೆ ;

(ಇ) ಕಿತ್ತೂರು ರಾಣಿಚೆನ್ನಮ್ಮ ವೃತ್ತದ ಮೇಲುಸೇತುವೆ ನಿರ್ಮಾಣಕ್ಕೆ ಅಗತ್ಯಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆಯೇ ; ಮತ್ತು ವಿದ್ಯುತ್ ಕಂಬಗಳು ಹಾಗೂ ಜಲಮಂಡಳಿಯ ನೀರು ಮತ್ತು ಯು.ಜಿ.ಡಿ. ಲೈನ್‌ಗಳನ್ನು ಸ್ಥಳಾಂತರಿಸಲಾಗಿದೆಯೇ ; ಸ್ಥಳಾಂತರಿಸಿದ್ದರೆ ಯಾವಾಗ ಸ್ಥಳಾಂತರಿಸಲಾಗಿದೆ ; ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುತ್ತದೆ ? (ವಿವರ ನೀಡುವುದು)



## ಬೆಂಗಳೂರು ನಗರ ಮಾಗಡಿ ರೋಡ್ ಕೆಳ ಸೇತುವೆ ಕಾಮಗಾರಿ

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೬೧ (೧೦೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮಾಗಡಿ ರೋಡ್ ಟೋಲ್‌ಗೇಟ್‌ನಿಂದ ಮಾಗಡಿ ರಸ್ತೆಯಲ್ಲಿ ನಿರ್ಮಿಸುತ್ತಿರುವ ಕೆಳ ಸೇತುವೆ ಕಾಮಗಾರಿ ಯಾವಾಗ ಪ್ರಾರಂಭವಾಯಿತು ; ಪ್ರಸ್ತುತ ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ ; ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲು ಉದ್ದೇಶಿಸಲಾಗಿತ್ತು ; ಕಾಮಗಾರಿ ವಿಳಂಬವಾಗಿರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಆ) ಬೆಂಗಳೂರು ನಗರ ವೆಸ್ಟ್ ಆಫ್ ಕಾರ್ಡ್ ರೋಡ್, ಮಂಜುನಾಥನಗರ, ಶಿವನಹಳ್ಳಿ ಬಳಿ ನಿರ್ಮಿಸಲು ಉದ್ದೇಶಿಸಲಾಗಿರುವ ರಸ್ತೆ ಕಾರಿಡಾರ್ ಕೆಳ ಸೇತುವೆ ಮತ್ತು ಮೇಲು ಸೇತುವೆ ಕಾಮಗಾರಿ ಯಾವ ಹಂತದಲ್ಲಿದೆ ?

## ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ ಕೆರೆ ಒತ್ತುವರಿ

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೬೨ (೧೦೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ ವಳಗೆರೆಹಳ್ಳಿ ಗ್ರಾಮದ ಸರ್ವೆ ನಂ. ೧೬ರಲ್ಲಿರುವ ಸರ್ಕಾರಿ ಮುಫ್ತಲ್ ಕಾವಲ್‌ನ ಕೆರೆ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ; ಬಂದಿದ್ದರೆ, ಎಷ್ಟು ಎಕರೆ ಜಾಗವನ್ನು ಒತ್ತುವರಿ

ಮಾಡಲಾಗಿದೆ ; ಒತ್ತುವರಿಯುನ್ನು ತೆರವುಗೊಳಿಸಲು ತೆಗೆದುಕೊಂಡಿರುವ ಕ್ರಮವೇನು ;

(ಆ) ಕೆರೆಗೆ ಯು.ಜಿ.ಡಿ. ಮೋರಿ ನೀರು ಅಪಾರ್ಟ್‌ಮೆಂಟ್‌ಗಳ ಒಳಚರಂಡಿ ನೀರು ಬಂದು ಕೆರೆಯ ಪರಿಸರ ಹಾಗೂ ಕೆರೆ ನೀರಿನ ಗುಣಮಟ್ಟ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ;

(ಇ) ಕೆರೆ ಸುತ್ತ ಬಿ.ಡಿ.ಎ ಲೇಔಟ್, ಸ್ಲಂ, ಹೌಸಿಂಗ್ ಬೋರ್ಡ್ ಮತ್ತು ಖಾಸಗಿಯವರು ಒತ್ತುವರಿದಾರರಾಗಿದ್ದು, ಇವರನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ಬೆಂಗಳೂರು ದಕ್ಷಿಣ ತಾಲ್ಲೂಕು ವಳಗೆರೆಹಳ್ಳಿ ಗ್ರಾಮ (ದುಬಾಸಿ ಪಾಳ್ಯ)ದ ಕೆರೆಯು ಸಹ ಒತ್ತುವರಿಯಾಗಿದೆ (ಸರ್ವೆ ನಂ.೪೩) ಸದರಿ ಕೆರೆಗೆ ಆರ್.ಆರ್. ಬಡಾವಣೆ/ನಾಗದೇವನಹಳ್ಳಿ, ಉಪಾಧ್ಯಾಯ ಬಡಾವಣೆಯ ಕಲುಷಿತ ನೀರು ರಾಜಕಾಲುವೆ ಮುಖಾಂತರ ಕೆರೆಗೆ ಬರುತ್ತಿದೆ. ಇದರ ಬಗ್ಗೆ BWSSB/BBMP/ BDA ಇಲಾಖೆಗಳ ನಿರ್ಲಕ್ಷತೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)

## ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ವಾರ್ಡ್‌ಗಳ ಕಾಮಗಾರಿ

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

**೮೬೩** (೧೦೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ/ಹೊಸದಾಗಿ ಸೇರ್ಪಡೆಯಾದ ಪಾಲಿಕೆಯ ವಾರ್ಡ್‌ಗಳು ಯಾವುವು ;



(ಆ) ಸೇರ್ಪಡೆಯಾದ ವಾರ್ಡ್‌ಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಒಳಚರಂಡಿ ರಿಪೇರಿ ಕೆಲಸ ಯಾವ ಯಾವ ವಾರ್ಡ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ ; ಹಾಕಿರುವ ರಸ್ತೆಯ ಡಾಂಬರೀಕರಣ ಮತ್ತು ಮೋರಿಗಳ ರಿಪೇರಿ ಕಾರ್ಯವನ್ನು ಕೈಗೊಂಡಿದ್ದು ಯಾವಾಗ ; ಯಾವಾಗ ಮಾಡಲಾಯಿತು ; ಇದಕ್ಕೆ ಮಹಾನಗರ ಪಾಲಿಕೆಯ ವತಿಯಿಂದ ಬಿಡುಗಡೆಯಾದ ಮೊತ್ತ ಎಷ್ಟು ? (ವರ್ಷವಾರು ವಿವರ ಒದಗಿಸುವುದು)

## ಬೃ.ಬೆ.ಮ.ಪಾ ವಾರ್ಡ್ ಸಂಖ್ಯೆ ೧೩೦ ವ್ಯಾಪ್ತಿಯ ಒಳಚರಂಡಿ ಹಾಗೂ ಮೋರಿ ನಿರ್ಮಾಣ ಕಾಮಗಾರಿ.

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೬೪ (೧೦೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ ೧೩೦ ವ್ಯಾಪ್ತಿಯ (ಉಲ್ಲಾಳ್ ವಾರ್ಡ್) ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಹಾಗೂ ಮೋರಿ ನಿರ್ಮಾಣದ ಕಾಮಗಾರಿಗಳನ್ನು ಮಾಡಲಾಗಿದೆಯೇ ;

(ಆ) ಯಾವಾಗ ಹಾಕಲಾಗಿದೆ (Sanitary) ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಹೇರೊಹಳ್ಳಿ ವಾರ್ಡ್ ಸಂಖ್ಯೆ ಎಲ್ಲೆಲ್ಲಿ ಒಳಚರಂಡಿ ನಿರ್ಮಾಣ ಮಾಡಲಾಗಿದೆ ? (ವರ್ಷವಾರು ಹಾಗೂ ಬಿಡುಗಡೆ ಮಾಡಿದ ಹಣದ ವಿವರ ತಿಳಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕೆರೆಗಳು.

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೮೬೫ (೯೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಪ್ರತಿ ವರ್ಷ ಮಳೆ ನೀರಿನಿಂದ ತುಂಬುತ್ತಿರುವ ಕೆರೆಗಳು ಯಾವುವು ; ಯಾವ ಯಾವ ಕೆರೆಗೆ ಎಷ್ಟೆಷ್ಟು ಪ್ರಮಾಣದಲ್ಲಿ ಕೊಳಚೆ ನೀರು ಹರಿಯುತ್ತಿದೆ ;

(ಇ) ಯಾವ ಯಾವ ಕೆರೆಯ ಕೊಳಚೆ ನೀರನ್ನು ಶುದ್ಧೀಕರಣಗೊಳಿಸಲು ಸೀಪೇಜ್ ಟ್ರೀಟ್‌ಮೆಂಟ್ ಪ್ಲಾಂಟ್ ಅಳವಡಿಸಲಾಗಿದೆ ; ಹಾಗೆ ಅಳವಡಿಸಿರುವ ಪ್ರತಿ ಟ್ರೀಟ್‌ಮೆಂಟ್ ಪ್ಲಾಂಟ್ ಸ್ಥಾಪಿಸಲು ಒದಗಿಸಲಾಗಿರುವ ಭೂಮಿ ಎಷ್ಟು ; ಇದಕ್ಕೆ ವೆಚ್ಚ ಮಾಡಿರುವ ಹಣ ಎಷ್ಟು ; ಪ್ರತಿ ಎಸ್.ಟಿ.ಪಿ. ನಿರ್ವಹಣೆಗೆ ದಿನಂಪ್ರತಿ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಈ) ಆ ಎಸ್.ಟಿ.ಪಿ. ಗಳಿಂದ ಉತ್ಪಾದನೆಯಾಗುವ ತ್ಯಾಜ್ಯವನ್ನು ಯಾವ ಪ್ರದೇಶದಲ್ಲಿ ಹಾಕಲಾಗುತ್ತಿದೆ ; (ಎಸ್.ಟಿ.ಪಿ.ವಾರು ವಿವರ ನೀಡುವುದು)

(ಉ) ಹಾಗೆ ಸ್ಥಾಪನೆಗೊಂಡಿರುವ ಎಸ್.ಟಿ.ಪಿ.ಗಳ ಪೈಕಿ ಕಾರ್ಯನಿರ್ವಹಿಸುತ್ತಿರುವುದು ಎಷ್ಟು ; ಸ್ಥಗಿತಗೊಂಡಿರುವ ಎಸ್.ಟಿ.ಪಿ.ಗಳು ಎಷ್ಟು ;



(ಊ) ಬೆಂಗಳೂರಿನ ಮತ್ಯಾವ ಕೆರೆಗಾದರು ಎಸ್.ಟಿ.ಪಿ. ಅಳವಡಿಸಲು ಸರ್ಕಾರ ತೀರ್ಮಾನಿಸಲಾಗಿದೆಯೇ ; ತೀರ್ಮಾನಿಸಿದ್ದರೆ, ಯಾವ ಯಾವ ಕೆರೆಗೆ ಯಾವ ಯಾವ ಮೊತ್ತದಲ್ಲಿ ಅಳವಡಿಸಲಾಗುವುದು ಹಾಗೂ ಎಸ್.ಟಿ.ಪಿ. ಗಳಿಗೆ ಬೇಕಾಗಿರುವ ಸೌಲಭ್ಯಗಳ ವಿವರ ನೀಡುವುದು ?

## ಹಟ್ಟಿಗೋಲ್ಡ್ ಮೈನ್ಸ್

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

**೮೬೬** (೯೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಟ್ಟಿಗೋಲ್ಡ್ ಮೈನ್ಸ್ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಉತ್ಪಾದನೆ ಮಾಡಿದ ಚಿನ್ನವೆಷ್ಟು ; ಹಾಗೂ ಚಿನ್ನದ ಒಟ್ಟು ಮೌಲ್ಯವೆಷ್ಟು ; (ಪ್ರದೇಶವಾರು, ಗಣಿವಾರು, ವರ್ಷವಾರು ವಿವರಗಳನ್ನು ನೀಡುವುದು)

(ಆ) ಹಟ್ಟಿ ಗಣಿ ಕಂಪನಿ ಹೊಂದಿರುವ ಭೂಪ್ರದೇಶವೆಷ್ಟು ; ಎಲ್ಲೆಲ್ಲಿ ಚಿನ್ನದ ಉತ್ಪಾದನೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಇ) ಹಟ್ಟಿ ಗಣಿ ಕಂಪನಿಯಲ್ಲಿರುವ ನೌಕರರ ಹಾಗೂ ಅಧಿಕಾರಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ತುಂಬಲು ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ದೇವಸ್ಥಾನಗಳು.

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೮೬೭ (೯೯೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ದೇವಸ್ಥಾನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಸ್ಥಳವಾರು ವಿವರ ನೀಡುವುದು)

(ಆ) ಅವುಗಳ ಪೈಕಿ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳು ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯ ಯಾವ ಯಾವ ದೇವಸ್ಥಾನಗಳಲ್ಲಿ ಯಾವ ಯಾವ ಜಾತಿಯ ಅರ್ಚಕರಿದ್ದಾರೆ ? (ಅವರ ಹೆಸರು ಹಾಗೂ ಸಂಬಳದ ವಿವರವನ್ನು ದೇವಸ್ಥಾನವಾರು ನೀಡುವುದು)

## ರಾಜ್ಯದಲ್ಲಿರುವ ಮಠಗಳ ವಿವರ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೮೬೮ (೯೯೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಜಾತಿ, ಧರ್ಮಗಳಿಗೆ ಸಂಬಂಧಿಸಿದ ಹಾಗೆ ಇರುವ ಮಠಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸದರಿ ಮಠಗಳ ಮಠಾಧೀಶ್ವರುಗಳು ಯಾರು ; (ವಿವರ ನೀಡುವುದು)



(ಆ) ಯಾವ ಯಾವ ಮಠಗಳು ಎಷ್ಟೆಷ್ಟು ಆಸ್ತಿಗಳನ್ನು ಹೊಂದಿದ್ದಾವೆ ; (ಮಠವಾರು ವಿವರ ನೀಡುವುದು)

(ಇ) ಯಾವ ಯಾವ ಮಠದಲ್ಲಿ ಅನ್ನ ದಾಸೋಹ, ಶಿಕ್ಷಣ ದಾಸೋಹ ನೀಡಲಾಗುತ್ತಿದೆ ; (ಪೂರ್ಣ ವಿವರ ಒದಗಿಸುವುದು)

(ಈ) ಈ ದಾಸೋಹಗಳಿಗೆ ತಗಲುವ ವೆಚ್ಚವನ್ನು ಮಠಗಳು ಯಾವ ರೀತಿ ನಿರ್ವಹಣೆ ಮಾಡುತ್ತಿವೆ ; (ವಿವರ ನೀಡುವುದು)

(ಉ) ಯಾವ ಯಾವ ಮಠಗಳಿಗೆ ಸರ್ಕಾರದಿಂದ ಅನುದಾನ ನೀಡಲಾಗುತ್ತಿದೆ ; ನೀಡಲಾಗುತ್ತಿದ್ದರೆ, ಯಾವ ಯಾವ ಉದ್ದೇಶಕ್ಕೆ ಎಷ್ಟೆಷ್ಟು ಅನುದಾನ ನೀಡಲಾಗುತ್ತಿದೆ ? (ಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರದ ಬಿ.ಡಿ.ಎ. ವಾಣಿಜ್ಯ ಸಂಕೀರ್ಣಗಳು.

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೮೬೯ (೯೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಬಿ.ಡಿ.ಎ ವತಿಯಿಂದ ಕಟ್ಟಲಾಗಿರುವ ವಾಣಿಜ್ಯ ಸಂಕೀರ್ಣಗಳು ಎಷ್ಟು ; ಅವು ಯಾವುವು ; ಎಲ್ಲೆಲ್ಲಿ ನಿರ್ಮಿಸಲಾಗಿದೆ ; ತಗಲಿರುವ ವೆಚ್ಚವೆಷ್ಟು ; ಆ ಸಂಕೀರ್ಣಗಳಲ್ಲಿ ಯಾವ ದರದಲ್ಲಿ ಯಾರಾರಿಗೆ/ಯಾವ ಯಾವ ಸಂಸ್ಥೆಗಳಿಗೆ ಜಾಗ/ಕೊಠಡಿ ನೀಡಲಾಗಿದೆ ; (ಸಂಕೀರ್ಣವಾರು ಮಾಹಿತಿ ನೀಡುವುದು)

(ಆ) ನಿರ್ಮಾಣಗೊಂಡಿರುವ ವಾಣಿಜ್ಯ ಸಂಕೀರ್ಣಗಳಲ್ಲಿ ಬಾಡಿಗೆದಾರರು ಬಿ.ಡಿ.ಎ ಅನುಮತಿ ಇಲ್ಲದೆ ಕಟ್ಟಡಗಳನ್ನು ವಿಸ್ತರಿಸಿಕೊಂಡು ಕಟ್ಟಿಕೊಂಡು ಅತಿಕ್ರಮವಾಗಿ ಸ್ವಾಧೀನ ಹೊಂದಿರುವವರ ಸಂಖ್ಯೆ ಎಷ್ಟು ; ಇದ್ದರೆ ಅಂತಹವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಜರುಗಿಸಿದೆ ?

## ಕಛೇರಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೮೭೦ (೯೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ–ಯಾವ ಇಲಾಖೆಯ ಸರ್ಕಾರಿ ಕಛೇರಿಗಳಲ್ಲಿ ಬಯೋ ಮೆಟ್ರಿಕ್ ಹಾಜರಾತಿ ಪ್ರಾರಂಭಿಸಲಾಗಿದೆ ; (ಇಲಾಖಾವಾರು ವಿವರ ನೀಡುವುದು)

(ಆ) ಹೆಚ್ಚಿನ ಇಲಾಖೆಗಳಲ್ಲಿ ಇನ್ನೂ ಬಯೋ ಮೆಟ್ರಿಕ್ ಹಾಜರಾತಿ ಪ್ರಾರಂಭಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಬಯೋ ಮೆಟ್ರಿಕ್ ಹಾಜರಾತಿ ಇಲ್ಲದ ಇಲಾಖೆ ಹಾಗೂ ಕಛೇರಿಗಳಲ್ಲಿ ಯಾವಾಗ ಪ್ರಾರಂಭಿಸಲಾಗುವುದು ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ? (ಅನುಷ್ಠಾನ ಮತ್ತು ಪ್ರಗತಿಗೆ ಸಂಬಂಧಿಸಿದಂತೆ ಜಿಲ್ಲಾವಾರು, ಇಲಾಖಾವಾರು ವಿವರ ನೀಡುವುದು)



## ಮುಜರಾಯಿ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೮೭೧ (೯೯೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಜರಾಯಿ ಇಲಾಖೆಯಲ್ಲಿನ ಸಿಬ್ಬಂದಿಗಳ ಕೊರತೆಯಿಂದಾಗಿ, ದೇವಸ್ಥಾನಗಳ ಅಭಿವೃದ್ಧಿ ಕಾರ್ಯಚಟುವಟಿಕೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಈ ಹಿಂದಿನಂತೆ ಪ್ರಥಮ ಹಾಗೂ ದ್ವಿತೀಯ ದರ್ಜೆಯ ಸಿಬ್ಬಂದಿಗಳನ್ನು ನಿಯೋಜನೆ ಮೇರೆಗೆ ಹೊಸ ಸಿಬ್ಬಂದಿಗಳ ನೇಮಕಾತಿ ಮೂಲಕ ಭರ್ತಿ ಮಾಡುವ ಯೋಚನೆ ಸರ್ಕಾರಕ್ಕಿದೆಯೇ ?

## ಕಾಮಗಾರಿಗಳಿಗೆ ಅವಶ್ಯಕತೆ ತಕ್ಕಂತೆ ಪರವಾನಿಗೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೭೨ (೧೦೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ಮತ್ತು ಅಭಿವೃದ್ಧಿ ಕಾಮಗಾರಿಗಳ ಅವಶ್ಯಕತೆ ಅನುಗುಣವಾಗಿ ಮರಳಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮರಳು ಗಣಿಗಾರಿಕೆಗೆ ಪರವಾನಿಗೆ ನೀಡಲು ಇರುವ ತೊಂದರೆಯೇನು ;

(ಇ) ಅಕ್ರಮ ಮರಳುಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಕ್ರಮ ಮರಳು ಸಾಗಾಣಿಕೆಯನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳ ಪುನಃಶ್ಚೇತನ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೭೩ (೧೦೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೈಗೊಂಡ ವಿವಿಧ ಯೋಜನೆಗಳಾವುವು ; (ಯೋಜನೆಯ ಪೂರ್ಣ ಮಾಹಿತಿಯೊಂದಿಗೆ ಸರ್ಕಾರ ಆದೇಶ ಪತ್ರವನ್ನು ಒದಗಿಸುವುದು)

(ಆ) ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳ ಪುನಃಶ್ಚೇತನಗೊಳಿಸಲು ಹಮ್ಮಿಕೊಂಡಿರುವ ಮಾರ್ಗ ಸೂಚಿಗಳ ಯೋಜನೆಗಳಾವುವು ; (ಯೋಜನಾವಾರು ವಿವರ ನೀಡುವುದು)

(ಇ) ಒಟ್ಟಾರೆ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪುನಃಶ್ಚೇತನಕ್ಕೆ ಅನ್ವಯಿಸುವ ಮಾರ್ಗಸೂಚಿ ಹಾಗೂ ಕೈಗೊಂಡ ಕ್ರಮಗಳಾವುವು ? (ಪೂರ್ಣ ವಿವರ ನೀಡುವುದು)



## ಮಹಾನಗರ ಪಾಲಿಕೆ ಮತ್ತು ನಗರ ಸಭೆಯಲ್ಲಿ ಖಾಲಿ ಇರುವ ಹುದ್ದೆಗಳು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೭೪ (೯೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಸಭೆ ಮತ್ತು ಮಹಾನಗರ ಪಾಲಿಕೆ ಇಲಾಖೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಆ ಪೈಕಿ ಭರ್ತಿ ಮಾಡಲಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ನಗರ ಸಭೆ ಮತ್ತು ಮಹಾನಗರ ಪಾಲಿಕೆವಾರು ಹುದ್ದೆವಾರು ಪ್ರತ್ಯೇಕವಾದ ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರಕ್ಕಿರುವ ತೊಂದರೆಯೇನು ;

(ಈ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಯಾವಾಗ ಖಾಲಿ ಹುದ್ದೆಗಳನ್ನು ತುಂಬಲಾಗುವುದು ? (ಪೂರ್ಣ ವಿವರ ನೀಡುವುದು)

## ಪಶು ಚಿಕಿತ್ಸಾಲಯಗಳಲ್ಲಿ ಸೌಲಭ್ಯ.

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೭೫ (೧೦೦೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯಗಳು ಸರಿಯಾಗಿ ಕಾರ್ಯನಿರ್ವಹಿಸದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಪಶು ಚಿಕಿತ್ಸಾಲಯಗಳಲ್ಲಿ ಸೂಕ್ತವಾದ ಸೌಲಭ್ಯಗಳಿಲ್ಲದೆ ಪಶು ಚಿಕಿತ್ಸೆ ಕಾರ್ಯಕ್ಕೆ ತೊಂದರೆಯಾಗಿರುವುದು ನಿಜವೇ ;

(ಇ) ಈ ಪಶು ಚಿಕಿತ್ಸಾಲಯಗಳಲ್ಲಿರುವ ಕೊರತೆಗಳು ಯಾವುವು ;

(ಈ) ಈ ಕೊರತೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸಹ ನಿಜವೇ ;

(ಉ) ಈ ಕೊರತೆಗಳನ್ನು ಯಾವ ಕಾಲಮಿತಿಯೊಳಗೆ ಪರಿಹರಿಸಲಾಗುವುದು ;

(ಊ) ಬಳ್ಳಾರಿ ಜಿಲ್ಲೆಯಲ್ಲಿರುವ ಒಟ್ಟು ಪಶು ಚಿಕಿತ್ಸಾಲಯಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಋ) ಈ ಪಶು ಚಿಕಿತ್ಸಾಲಯಗಳಲ್ಲಿ ನಿಯೋಜನೆ ಮೇರೆಗೆ ಸೇವೆ ಸಲ್ಲಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ? (ವೈದ್ಯರ ಹೆಸರು



ಯಾವ ದಿನಾಂಕದಿಂದ ಎಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂಬ ಮಾಹಿತಿಯನ್ನು ಒದಗಿಸುವುದು)

## ಬೆಂಗಳೂರು ನಗರದ ಕೆರೆ ಒತ್ತುವರಿ ನಿವೇಶನ ಅಕ್ರಮ ರಚನೆ.

**ಶ್ರೀ ಎಂ. ಶ್ರೀನಿವಾಸ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೭೬ (೧೦೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಕೆರೆ ಪ್ರದೇಶಗಳನ್ನು ಒತ್ತುವರಿ ಮಾಡಿ ಖಾಸಗಿಯವರು ನಿವೇಶನಗಳನ್ನು ನಿರ್ಮಿಸಿ ಮಾರಾಟ ಮಾಡಲಾಗಿರುವ ಪ್ರಕರಣಗಳನ್ನು ಗುರುತಿಸಲಾಗಿದೆಯೆ ; ಹಾಗಿದ್ದಲ್ಲಿ, ಅವುಗಳ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಆ) ಹಲವು ಸಂದರ್ಭಗಳಲ್ಲಿ ಬಿ.ಡಿ.ಎ ಸಹ ನಗರದ ಕೆರೆ ಪ್ರದೇಶಗಳನ್ನು ಒತ್ತುವರಿ ಮಾಡಿ ನಿವೇಶನಗಳನ್ನು ನಿರ್ಮಿಸಿ ಹಂಚಿಕೆ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳನ್ನು ಗುರುತಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಸದರಿ ಪ್ರಕರಣಗಳಲ್ಲಿ ಈಗಾಗಲೇ ನಿವೇಶನ ಪಡೆದು, ಮನೆ ನಿರ್ಮಿಸಿ ವಾಸವಾಗಿರುವ ನಾಗರೀಕರ ತೊಂದರೆ, ನಷ್ಟವನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆಯೇನು ? (ವಿವರ ನೀಡುವುದು)

## ಶೌಚಾಲಯ ವಿಲ್ಲದಿರುವ ನ್ಯಾಯಾಲಯಗಳು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೭೭ (೧೧೦೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯಾಲಯಗಳ ಸಂಖ್ಯೆ ಎಷ್ಟು ;

(ಆ) ಯಾವ ಯಾವ ರೀತಿಯ ನ್ಯಾಯಾಲಯಗಳು ಒಟ್ಟು ಎಷ್ಟೆಷ್ಟಿವೆ ;

(ಇ) ಶೌಚಾಲಯವಿಲ್ಲದಿರುವ ನ್ಯಾಯಾಲಯಗಳ ಸಂಖ್ಯೆ ಎಷ್ಟು ; (ನ್ಯಾಯಾಲಯವಾರು ಮಾಹಿತಿ ನೀಡುವುದು)

(ಈ) ಇದರಿಂದಾಗಿ ವಕೀಲರುಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಎಲ್ಲ ನ್ಯಾಯಾಲಯಗಳೂ ಶೌಚಾಲಯ ಹೊಂದುವಂತೆ ಮಾರ್ಪಡಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುತ್ತದೆ ; ಬೇಕಾಗುವ ಕಾಲಾವಧಿ ಏನು ?

## ಭೂ ಪರಿಹಾರ ಪಡೆಯದಿರುವ ರೈತರ ಜಮೀನು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೭೮ (೧೧೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ನಗರ ಭೂ ಪರಿಮಿತಿ ಕಾಯಿದೆಯನ್ನು ಯುಡಿಡಿ ೨೫ ಯುಎಲ್‌ಸಿ ೯೯ ಕ್ರಮಾಂಕದ ಸುತ್ತೋಲೆಯಂತೆ ವಾಪಸ್ಸು ಪಡೆದಿರುವುದು ನಿಜವೇ ; ನಿಜವಾಗಿದ್ದಲ್ಲಿ ವಿವರ ನೀಡುವುದು ;

(ಆ) ಈ ಕುರಿತಂತೆ ಐಎಲ್‌ಆರ್ ೨೦೦೪ ರಂತೆ ಸರ್ವೋಚ್ಚ ನ್ಯಾಯಾಲಯದಿಂದ ಭೂ ಪರಿಹಾರ ಪಡೆಯದಿರುವ ರೈತರ



ಜಮೀನು ವಾಪಸ್ಸು ನೀಡುವಂತೆ ಆದೇಶವಾಗಿರುತ್ತದೆಯೇ ; ಇದ್ದಲ್ಲಿ ವಿವರ ನೀಡಿ)

(ಇ) ಸರ್ವೋಚ್ಚ ನ್ಯಾಯಾಲಯದ ಆದೇಶವೂ ಆಗಿದ್ದು, ಸದರಿ ಕಾಯಿದೆಯನ್ನು ಹಿಂಪಡೆದಿದ್ದು, ರೈತರಿಗೆ ಭೂಪರಿಹಾರವನ್ನೂ ನೀಡದಿದ್ದ ಮೇಲೆ ಅಂತಹ ಜಮೀನುಗಳನ್ನು ಭೂ ಮಾಲೀಕರಿಗೆ ಹಿಂತಿರುಗಿಸುವ ಕುರಿತು ಸರ್ಕಾರ ಮುಂದಾಗುವುದೆ ;

(ಈ) ಈ ರೀತಿಯ ಪ್ರಕರಣಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯಲ್ಲಿ ಭೂ ಮಾಲೀಕರಿಗೆ ಹಿಂತಿರುಗಿಸಿರುವ ಪ್ರಕರಣಗಳೆಷ್ಟು ಹಾಗೂ ಹಿಂತಿರುಗಿಸದೆ ಇರುವ ಬಾಕಿ ಪ್ರಕರಣಗಳೆಷ್ಟು ; ಈ ರೀತಿಯ ಪ್ರಕರಣಗಳಲ್ಲಿ ಜಮೀನುಗಳನ್ನು ಸದರಿ ಭೂ ಮಾಲೀಕರಿಗೆ ಹಿಂತಿರುಗಿಸುವಲ್ಲಿ ಸರ್ಕಾರದ ಪೂರ್ವಾನುಮತಿ ಅನಿವಾರ್ಯವೆ ; ಇದರಿಂದ ಪ್ರಕ್ರಿಯೆ ವಿಳಂಬವಾಗಿ ರೈತರಿಗೆ ತೊಂದರೆಯಾಗುವುದಲ್ಲವೇ ;

(ಉ) ಈ ರೀತಿಯ ಪ್ರಕರಣಗಳಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಜಮೀನು ವಾಪಸ್ಸಾತಿ ಅಧಿಕಾರ ನೀಡಿದಲ್ಲಿ ಆಗುವ ವಿಳಂಬ ತಪ್ಪುವುದಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ?

## ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರ ವೇತನ ತಾರತಮ್ಯದ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೮೭೯ (೧೧೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರ ವೇತನ ತಾರತಮ್ಯದ ನಡುವಿನ ಅಂತರವೇನು ; (ವಿವರಿಸುವುದು)

(ಆ) ಈ ಅಂತರವನ್ನು ನಿವಾರಿಸಲು ಸರ್ಕಾರದಿಂದ ಇತ್ತೀಚೆಗೆ ಭರವಸೆಯನ್ನು ನೀಡಲಾಗಿದೆಯೇ ;

(ಇ) ಭರವಸೆ ನೀಡಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ವೇತನ ತಾರತಮ್ಯದ ಅಂತರವನ್ನು ನಿವಾರಿಸಲಾಗುವುದು ;

(ಈ) ಯಾವಾಗ ನಿವಾರಿಸಲಾಗುವುದು ?

## ಸರ್ಕಾರಿ ನೌಕರರಿಂದ ಬರುವ ನಿವೇಶನ ಭತ್ಯೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೮೮೦ (೧೧೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ವಸತಿ ಗೃಹಗಳಲ್ಲಿ ವಾಸಿಸುವ ರಾಜ್ಯ ಸರ್ಕಾರದ ಎಲ್ಲಾ ಸರ್ಕಾರಿ ಅಧಿಕಾರಿಗಳು / ನೌಕರರುಗಳಿಂದ ವರ್ಷಕ್ಕೆ ಬರುವ ವಸತಿ ಭತ್ಯೆಯ ಒಟ್ಟು ಮೊತ್ತವೆಷ್ಟು ;

(ಆ) ಈ ಹಣವನ್ನು ಯಾವುದಕ್ಕೆ ವಿನಿಯೋಗಿಸಲಾಗುವುದು ;

(ಇ) ಕಳೆದ ಐದು ವರ್ಷಗಳಲ್ಲಿ ಈ ಹಣವನ್ನು ಯಾವ ರೀತಿ ವಿನಿಯೋಗಿಸಲಾಗಿದೆ ? (ಒಟ್ಟಾರೆಯಾಗಿ ಅಂದಾಜುವಾರು ಅಥವಾ ಶೇಕಡಾವಾರು ವಿವರ ನೀಡುವುದು)

## ಬೆಂಗಳೂರಿನಲ್ಲಿ ದಾಖಲಾಗಿರುವ ವಂಚನೆ ಪ್ರಕರಣಗಳು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೮೮೧ (೧೦೦೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳಿಂದ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ರಿಯಲ್ ಎಸ್ಟೇಟ್‌ಗೆ ಸಂಬಂಧಿಸಿದಂತೆ ಎಷ್ಟು ವಂಚನೆ ಪ್ರಕರಣಗಳು ದಾಖಲಾಗಿವೆ ; (ವಾರ್ಷಿಕವಾರು ವಿವರಣೆ ನೀಡುವುದು)



(ಆ) ಕಳೆದ ಎರಡು ವರ್ಷಗಳಿಂದ ಈ ರೀತಿಯ ಪ್ರಕರಣಗಳು ಹೆಚ್ಚಾಗಿರುವುದು ನಿಜವೇ ; ಹಾಗಿದ್ದಲ್ಲಿ, ವಂಚನೆ ಪ್ರಕರಣಗಳನ್ನು ಕಡಿಮೆ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಾರ್ಪೊರೇಟ್ ಕಂಪನಿಗಳ ಮೇಲೆ ದಾಖಲಾಗಿರುವ ವಂಚನೆ ಪ್ರಕರಣಗಳು ಎಷ್ಟು ; ಕಳೆದ ಎರಡು ವರ್ಷಗಳಲ್ಲಿ ಕಾರ್ಪೊರೇಟ್ ಕಂಪನಿಗಳ ಮೇಲೆ ದಾಖಲಾಗಿರುವ ವಂಚನೆ ಪ್ರಕರಣಗಳು ಯಾವ ಪ್ರಮಾಣದಲ್ಲಿ ಹೆಚ್ಚಾಗಿವೆ ; ವಂಚನೆಯ ಪ್ರಕರಣಗಳಲ್ಲಿ ಯಾವ ರೀತಿಯ ಕ್ರಮ ಜರುಗಿಸಲಾಗಿದೆ ?

## ಕೊಳವೆ ನೀರು ಸರಬರಾಜು ಯೋಜನೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೮೨ (೧೦೧೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಯಲಬುರ್ಗಾ ಪಟ್ಟಣದ ಕೊಳವೆ ನೀರು ಸರಬರಾಜು ಯೋಜನೆ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು ಯಾವಾಗ ;

(ಆ) ಸದರಿ ಕಾಮಗಾರಿಗೆಂದು ಪ್ರಸಕ್ತ ಸಾಲಿನವರೆಗೂ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಸದರಿ ಕಾಮಗಾರಿಯನ್ನು ಯಾವ ಗುತ್ತಿಗೆದಾರರು ನಿರ್ವಹಿಸುತ್ತಿದ್ದಾರೆ ; ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಯಾವ ದಿನಾಂಕಕ್ಕೆ ಮುಕ್ತಾಯಗೊಳಿಸಬೇಕಿತ್ತು ;

(ಈ) ಸದರಿ ಕಾಮಗಾರಿಯ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ ; ವಿಳಂಬಕ್ಕೆ ಕಾರಣಗಳೇನು ;

(ಉ) ಪ್ರಸ್ತುತ ಯಲಬುರ್ಗಾ ಪಟ್ಟಣದಲ್ಲಿ ಕುಡಿಯುವ ನೀರಿನ ಸರಬರಾಜು ಯಾವ ರೀತಿ ನಡೆಯುತ್ತಿದೆ ?

## ಜ್ಯೂನಿಯರ್ ಡಿವಿಜನ್ ಕೋರ್ಟ್‌ನ್ನು ಸೀನಿಯರ್ ಡಿವಿಜನ್ ಕೋರ್ಟಾಗಿ ಪರಿವರ್ತನೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೮೮೩ (೧೦೧೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ತಾಲ್ಲೂಕು ಜ್ಯೂನಿಯರ್ ಡಿವಿಜನ್ ಕೋರ್ಟ್‌ನ್ನು ತಾಲ್ಲೂಕು ಸಿವಿಲ್ ಜಡ್ಜ್ ಸೀನಿಯರ್ ಡಿವಿಜನ್ ಕೋರ್ಟನ್ನಾಗಿ ಪರಿವರ್ತಿಸಲು ಯಾವ ಮಾನದಂಡಗಳನ್ನು ಪರಿಗಣಿಸಲಾಗುವುದು ; ಪರಿವರ್ತಿಸಲು ಇರುವ ಅಡೆತಡೆಗಳೇನು ? (ವಿವರ ನೀಡುವುದು)

## ಹೊಸ ಪೊಲೀಸ್ ಠಾಣೆ ಸ್ಥಾಪನೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೮೪ (೧೧೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಗೆ ಹೊಸದಾಗಿ ಸೇರಿಸಲ್ಪಟ್ಟ ಹಳ್ಳಿಗಳೂ ಮತ್ತು ಬಡಾವಣೆಗಳನ್ನು ಬೆಂಗಳೂರು ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ತರಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಪ್ರದೇಶಗಳು ೩–೪ ಜಿಲ್ಲಾ ಪೊಲೀಸ್ ವ್ಯಾಪ್ತಿಗೆ ಬರುತ್ತಿದ್ದು, ಕಾನೂನು ಸುವ್ಯವಸ್ಥೆ ಮತ್ತು ಬೀಟ್ ವ್ಯವಸ್ಥೆ ಜಾರಿಗೆ ಸೂಕ್ತ ವ್ಯವಸ್ಥೆ ಇಲ್ಲದೆ ಈ ಪ್ರದೇಶದ ನಿವಾಸಿಗಳು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ಸುಂಕದಕಟ್ಟೆಯಲ್ಲಿ ಹೊಸದಾಗಿ ಒಂದು ಪೊಲೀಸ್ ಠಾಣೆಯನ್ನು ಪ್ರಾರಂಭಿಸಿ ಸುತ್ತಮುತ್ತಲ ಪ್ರದೇಶ ಹಾಗೂ ಬಡಾವಣೆಗಳನ್ನು ಈ ಪೊಲೀಸ್ ಠಾಣೆ ವ್ಯಾಪ್ತಿಗೆ ತರುವ ಕಾರ್ಯ ಯಾವ ಹಂತದಲ್ಲಿದೆ ?

## ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೮೫ (೧೧೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಗೆ ಸೇರಿದ ಹಳ್ಳಿಗಳು ಮತ್ತು ಅವುಗಳಿಗೆ ಹೊಂದಿಕೊಂಡಂತಿರುವ ಅಧಿಕೃತ ಬಡಾವಣೆಗಳ ಸಂಖ್ಯೆ ಎಷ್ಟು ;

(ಆ) ಈ ಹಳ್ಳಿಗಳು ಮತ್ತು ಬಡಾವಣೆಗಳಿಗೆ ಕುಡಿಯುವ ನೀರು ಮತ್ತು ಒಳಚರಂಡಿ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ; ಈ ಸೌಲಭ್ಯಗಳನ್ನು ಒದಗಿಸಲು ಸಮಗ್ರ ಯೋಜನೆಯನ್ನು ಸಿದ್ಧಪಡಿಸಲಾಗಿದೆಯೇ ; (ವಿವರ ಒದಗಿಸುವುದು)

(ಇ) ಪ್ರಸಕ್ತ ಇದಕ್ಕಾಗಿ ನಿಗದಿಪಡಿಸಿರುವ ಆಯವ್ಯಯ ಎಷ್ಟು ; ಯಾವ ಯಾವ ಹಳ್ಳಿಗಳು ಮತ್ತು ಬಡಾವಣೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ ?

## ರಾಯಚೂರು ಜಿಲ್ಲೆಯಲ್ಲಿ ಕೈಗಾರಿಕಾ ಸ್ಥಾಪನೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೬ (೧೦೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಹೊಸ ಕೈಗಾರಿಕಾ ನೀತಿಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಎಷ್ಟು ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಲಾಗಿದೆ; ಯಾವ ಯಾವ ಜಾಗದಲ್ಲಿ ಮತ್ತು ಯಾರು ಯಾರಿಗೆ ನೀಡಲಾಗಿದೆ ; (ವಿವರ ನೀಡುವುದು)

(ಇ) ರಾಯಚೂರು ನಗರದಲ್ಲಿರುವ ಗ್ರೋತ್ ಸೆಂಟರಿನಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಹೊಸ ಕೈಗಾರಿಕಾ ನೀತಿ ಅನ್ವಯ ಕೈಗಾರಿಕೆಗಳ ನಿರ್ಮಾಣಕ್ಕೆ ಭೂ ಶೇಖರಣೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; (ವಿವರ ಒದಗಿಸುವುದು)

(ಉ) ಮಾನ್ವಿ ನಗರದಲ್ಲಿರುವ ಕೈಗಾರಿಕಾ ವಸಾಹತುವಿನಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)



## ಭೂ ಪರಿವರ್ತನೆ ವಿವರ

**ಶ್ರೀ ಬಿ.ಜೆ. ಪುಟ್ಟಸ್ವಾಮಿ(ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೭ (೧೦೨೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ಉದ್ದೇಶಗಳಿಗಾಗಿ ಭೂ ಪರಿವರ್ತನೆಯನ್ನು ಮಾಡಿರುವುದು ನಿಜವೇ ; ಇದ್ದಲ್ಲಿ ಯಾವ ಯಾವ ಉದ್ದೇಶಗಳಿಗೆ ಪರಿವರ್ತನೆ ಮಾಡಲಾಗುತ್ತದೆ ಹಾಗೂ ಪರಿವರ್ತನೆಗೆ ಮಾಡಲು ಅನುಸರಿಸುವ ಮಾನದಂಡವೇನು ;

(ಆ) ಹಾಗಿದ್ದರೆ, ಕಳೆದ ಎರಡು ವರ್ಷಗಳಲ್ಲಿ ಅಂದರೆ ಮೇ–೨೦೧೪ರವರೆಗೆ ಭೂ ಪರಿವರ್ತನೆ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಭೂ ಪರಿವರ್ತನೆ ಪಡೆದವರ ವಿಳಾಸ, ವಿಸ್ತೀರ್ಣ, ಭೂ ಪರಿವರ್ತನೆಯ ಉದ್ದೇಶ, ದಿನಾಂಕ ಮತ್ತು ವಿವರಗಳನ್ನು ಬೆಂಗಳೂರು ನಗರ, ಗ್ರಾಮಾಂತರ ಮತ್ತು ಇತರೆ ಜಿಲ್ಲೆಗಳನ್ನು ಒಳಗೊಂಡಂತೆ ಪೂರ್ಣ ವಿವರ ನೀಡುವುದು ?

## ಬೆಂಗಳೂರು ಮಹಾನಗರ ಪಾಲಿಕೆಯ ಆಡಿಟಿಂಗ್

**ಶ್ರೀ ಬಿ.ಜೆ. ಪುಟ್ಟಸ್ವಾಮಿ(ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೮ (೧೦೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯು ಆಡಳಿತ ಕಾರ್ಯನಿರ್ವಹಣೆ ಮಹಾ ಲೆಕ್ಕಪರಿಶೋಧಕರ ವ್ಯಾಪ್ತಿಗೆ

ಒಳಪಟ್ಟಿದೆಯೇ; ಅಥವಾ ಆಂತರಿಕ ಲೆಕ್ಕ ಪರಿಶೋಧನೆಗೆ ಒಳಪಟ್ಟಿದೆಯೇ ; (ವಿವರ ನೀಡುವುದು)

(ಆ) ಆಗಿದ್ದರೆ, ಅಂತಹ ಲೆಕ್ಕ ಪರಿಶೋಧನಾ ವರದಿಯಲ್ಲಿ ನಮೂದಿಸಿರುವ ಅವ್ಯವಹಾರಗಳ ಮುಖ್ಯಾಂಶಗಳೇನು ? (ವಿವರ ಒದಗಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಮೋರಿ ಸ್ವಚ್ಛತೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ(ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೯ (೧೦೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪ್ರತಿ ವರ್ಷ ಸಣ್ಣ, ಮಧ್ಯಮ ಮತ್ತು ದೊಡ್ಡ ಮೋರಿಗಳನ್ನು ಸ್ವಚ್ಛಗೊಳಿಸಲಾಗುತ್ತಿದೆಯೇ ;

(ಆ) ಸ್ವಚ್ಛಗೊಳಿಸಲಾಗುತ್ತಿದ್ದರೆ, ಈ ಕಾಮಗಾರಿಗೆ ಪ್ರತಿ ವರ್ಷ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವೆಚ್ಚ ಮಾಡುತ್ತಿರುವ ಹಣದ ಮೊತ್ತವೆಷ್ಟು ; (ಐದು ವರ್ಷಗಳ ಮಾಹಿತಿ ನೀಡುವುದು)

(ಇ) ಈ ಉದ್ದೇಶಕ್ಕಾಗಿ ಕೇಂದ್ರ ಮತ್ತು ರಾಜ್ಯದಿಂದ ಬಂದ ಹಣವೆಷ್ಟು; ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಖರ್ಚು ಮಾಡಿದ ಹಣವೆಷ್ಟು ? (ಐದು ವರ್ಷಗಳ ಮಾಹಿತಿ ನೀಡುವುದು)



## ಬಡಾವಣೆ ನಿರ್ಮಾಣಕ್ಕೆ ಭೂ ಸ್ವಾಧೀನ

**ಶ್ರೀ ಬಿ.ಜೆ. ಪುಟ್ಟಸ್ವಾಮಿ(ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೦ (೧೦೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರ್ಕಾವತಿ, ಕೆಂಪೇಗೌಡ, ಶಿವರಾಂ ಕಾರಂತ್ ಬಡಾವಣೆ ನಿರ್ಮಾಣ ಮಾಡಲು ಭೂ ಸ್ವಾಧೀನಕ್ಕೆ ಪ್ರಕಟಿಸಿದ ಒಟ್ಟು ವಿಸ್ತೀರ್ಣ ಎಷ್ಟು ; (ಬಡಾವಣೆ ಸಹಿತ ವಿವರ ನೀಡುವುದು)

(ಆ) ಆ ಬಡಾವಣೆಗಳಿಗೆ ಭೂ ಸ್ವಾಧೀನಕ್ಕೆ ನಿಯೋಜಿಸಿದ, ಭೂ ಸ್ವಾಧೀನವನ್ನು ಕೈಬಿಟ್ಟಿರುವ/ಭೂ ಸ್ವಾಧೀನ ಹಿಂಪಡೆದಿರುವ ವಿಸ್ತೀರ್ಣವನ್ನು ಸರ್ವೆ ನಂಬರ್ ಪ್ರಕಾರ ವಿವರ ನೀಡುವುದು ?

## ದೆಹಲಿ ಕರ್ನಾಟಕ ಭವನಕ್ಕೆ ಮಂಜೂರಾದ ಹುದ್ದೆಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೧ (೧೧೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೆಹಲಿಯ ಕರ್ನಾಟಕ ಭವನದಲ್ಲಿ ಮಂಜೂರಾದ ಹುದ್ದೆಗಳೆಷ್ಟು ಹಾಗೂ ಖಾಲಿಯಿರುವ ಹುದ್ದೆಗಳೆಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು) ದೆಹಲಿಯ ಕರ್ನಾಟಕ ಭವನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿಗೆ/ ಸಿಬ್ಬಂದಿಗಳಿಗೆ ಹಂಚಿಕೆ ಮಾಡಲಾಗಿರುವ ಕಾರ್ಯಭಾರಗಳು ಏನು ; (ಮಾಹಿತಿ ನೀಡುವುದು)

(ಆ) ೨೦೧೩ನೇ ಸಾಲಿನಲ್ಲಿ ಡಿ–ಗ್ರೂಪ್ ನೌಕರರುಗಳ ನೇಮಕಾತಿಯಲ್ಲಿ ಮತ್ತು ಬಡ್ತಿಯಲ್ಲಿ ಅನುಸರಿಸಲಾಗಿರುವ ಮಾನದಂಡಗಳು ಏನು ; (ನೇಮಕಗೊಂಡ ನೌಕರರುಗಳ ಹೆಸರು, ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರದ ಅನುಮತಿಯಿಲ್ಲದೆ ನೇರ ನೇಮಕಾತಿ ಹೊಂದಿದ ನೌಕರರುಗಳಾರು ? (ಕರ್ನಾಟಕ ಭವನದ ಅಧಿಕಾರಿಗಳು ಸರ್ಕಾರಕ್ಕೆ ನೀಡಿರುವ ವರದಿಯನ್ನಾಧರಿಸಿ ಸರ್ಕಾರ ಕೈಗೊಂಡಿರುವ ಕ್ರಮಗಳ ಸಂಪೂರ್ಣ ಮಾಹಿತಿ ನೀಡುವುದು)

## ಸ್ಮಶಾನಕ್ಕೆ ಕಾಂಪೌಂಡ್ ನಿರ್ಮಾಣ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೨ (೧೦೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ೬೯ನೇ ವಾರ್ಡಿನ ಬಸ್ ನಿಲ್ದಾಣದ ಪಕ್ಕದ ಅನಧಿಕೃತ ಸ್ಮಶಾನಕ್ಕೆ ಕಾಂಪೌಂಡ್ ನಿರ್ಮಿಸಲಾಗುವುದೆಂದು ಹಾಗೂ ಅಂದಾಜು ಪಟ್ಟಿ ತಯಾರಿಸಲಾಗಿರುತ್ತದೆಂದು ಯಾವ ಯಾವ ವರ್ಷಗಳಲ್ಲಿ ಸರ್ಕಾರವು ಉತ್ತರವನ್ನು ನೀಡಿರುತ್ತದೆ ;

(ಆ) ಕಳೆದ ೪–೫ ವರ್ಷಗಳಿಂದಲೂ ಅಧಿಕೃತವಾಗಿ ಉತ್ತರ ನೀಡಿದ್ದರೂ ಕಾಮಗಾರಿಗೆ ಹಣ ಮಂಜೂರು ಮಾಡದಿರುವ ಅಧಿಕಾರಿಗಳು ಯಾರು ಯಾರು ; ಹಾಗು ಸದರಿ ಸಂಸ್ಥೆ ಕಾಂಪೌಂಡ್ ನಿರ್ಮಿಸಲಾರದಷ್ಟು ದಿವಾಳಿಯಾಗಿದೆಯೇ ; ಕೂಡಲೇ ಕೈಗೊಳ್ಳುವ ಕ್ರಮಗಳೇನು ;



(ಇ) ಸದರಿ ಬಸ್ ನಿಲ್ದಾಣ ಪಕ್ಕದ ರಾಜಕಾಲುವೆಗೆ ಮುಚ್ಚಿದ ಡ್ರೈನೇಜ್ ನಿರ್ಮಿಸಲು ಗುತ್ತಿಗೆ ಯಾರಿಗೆ ನೀಡಲಾಗಿದೆ ; ಹಾಗೂ ನಗರ ಪಾಲಿಕೆಯಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ;

(ಈ) ಈ ಕಾಮಗಾರಿಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ; ಒಂದು ವರ್ಷದಿಂದ ಕಾಮಗಾರಿ ವಿಳಂಬ ಮಾಡಲು ಕಾರಣಗಳೇನು ; ಹಾಗೂ ಪ್ರಾರಂಭಿಸಲಾಗುವುದು ಯಾವಾಗ ? (ಮಾಹಿತಿ ಒದಗಿಸುವುದು)

## ಧರ್ಮದ ಹೆಸರಿನಲ್ಲಿ ಹೆಣ್ಣು ಮಕ್ಕಳನ್ನು ತಪ್ಪು ದಾರಿಗೆಳೆಯುತ್ತಿರುವುದು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೩ (೧೦೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುನ್ಮಾನ ಮಾಧ್ಯಮಗಳ ಮುಖಾಂತರ ಕೆಲವು ಜ್ಯೋತಿಷಿಗಳು ಮುಗ್ದ ಜನರನ್ನು ಹಾಗೂ ಅಮಾಯಕ ಹೆಣ್ಣು ಮಕ್ಕಳನ್ನು ಧರ್ಮದ ಹೆಸರಿನಲ್ಲಿ ತಪ್ಪು ದಾರಿಗೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚಿನ ದಿನಗಳಲ್ಲಿ ಮುಗ್ಧ ಜನರನ್ನು ಹಾಗೂ ಅಮಾಯಕ ಹೆಣ್ಣುಮಕ್ಕಳನ್ನು ಧರ್ಮದ ಹೆಸರಿನಲ್ಲಿ ವಂಚಿಸಿರುವ ಹಾಗೂ ಸಂಸ್ಕೃತಿಗೆ ಚ್ಯುತಿ ತರುವಂತಹ ಕೃತ್ಯಗಳಲ್ಲಿ ಭಾಗಿಯಾಗಿರುವ ಜ್ಯೋತಿಷಿಗಳ ಮೇಲೆ ಸಾರ್ವಜನಿಕರು ಮೊಕದ್ದಮೆಗಳನ್ನು ದಾಖಲಿಸಿರುವ ಬಗ್ಗೆ ಮಾಹಿತಿ ನೀಡುವುದು ;

(ಇ) ಹಾಗಿದ್ದಲ್ಲಿ, ಇಂತಹ ಜ್ಯೋತಿಷಿಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಬೆಂಗಳೂರು ಮಹಾನಗರದಲ್ಲಿ ಭ್ರಷ್ಠಾಚಾರದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೪ (೧೦೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳೆದ ೫ ವರ್ಷಗಳಿಂದೀಚೆಗೆ ಯಾವ ಯಾವ ವಾರ್ಡ್‌ಗಳ ಕಾಮಗಾರಿಗಳಲ್ಲಿ ಎಷ್ಟೆಷ್ಟು ಹಣದ ಭ್ರಷ್ಠಾಚಾರ ನಡೆದಿರುವುದು ವರದಿಯಾಗಿದೆ ; (ಪೂರ್ಣ ವಿವರ ಒದಗಿಸುವುದು)

(ಆ) ಸದರಿ ಭ್ರಷ್ಠಾಚಾರದಲ್ಲಿ ಪಾಲ್ಗೊಂಡಿರುವ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಜನಪ್ರತಿನಿಧಿಗಳು ಯಾರ್ಯಾರು ; ಹಾಗೂ ಇವರುಗಳ ಮೇಲೆ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಇತ್ತೀಚೆಗೆ ಲೋಕಾಯುಕ್ತರು ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಎಷ್ಟು ಕಡತಗಳನ್ನು ಖಾಸಗಿ ಮನೆಯೊಂದರಲ್ಲಿ ವಶಪಡಿಸಿಕೊಂಡಿರುತ್ತಾರೆ ; ಸದರಿ ಕಡತಗಳು ಯಾವ ಯಾವ ವಾರ್ಡ್‌ನ, ಯಾವ ಯಾವ ಕಾಮಗಾರಿಗಳಿಗೆ ಸೇರಿದ ಎಷ್ಟೆಷ್ಟು ಮೊತ್ತಕ್ಕೆ ಸಂಬಂಧಿಸಿದವುಗಳಾಗಿರುತ್ತವೆ ; (ನಿಖರವಾದ ಪೂರ್ಣ ಮಾಹಿತಿ ಒದಗಿಸುವುದು)

(ಈ) ಸದರಿ ಕಡತಗಳಲ್ಲಿ ಯಾವ ಯಾವ ಕಾಮಗಾರಿಗೆ ಸಂಬಂಧಿಸಿದ ನಕಲಿ ಬಿಲ್ಲುಗಳನ್ನು ತಯಾರಿಸಲಾಗಿರುತ್ತದೆ ; ಇದಕ್ಕೆ ಯಾರ್ಯಾರು ಹೊಣೆಗಾರರಾಗಿರುತ್ತಾರೆ ; ಇವರುಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;



(ಉ) ಈ ರೀತಿ ಬಿ.ಬಿ.ಎಂ.ಪಿ. ಕಡತಗಳನ್ನು ಖಾಸಗಿ ನಿವಾಸಗಳಲ್ಲಿ ವ್ಯವಹರಿಸಲು ಸರ್ಕಾರ ಅನುಮತಿ ನೀಡಿರುತ್ತದೆಯೇ; ಇಲ್ಲದಿದ್ದಲ್ಲಿ, ಸಂಬಂಧಿಸಿದವರ ಮೇಲೆ ಕೈಗೊಳ್ಳುವ ಕ್ರಮಗಳೇನು ?

## ಜ್ಞಾನಭಾರತಿ ಸರ್ವೆ ನಂಬರ್ ೭೬–೭೭ರಲ್ಲಿ ಭೂ ಸ್ವಾಧೀನ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೫ (೧೦೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜ್ಞಾನಭಾರತಿ ಸರ್ವೆ ನಂಬರ್ ೭೬–೭೭ರಲ್ಲಿ ಸ್ವಾಧೀನ ಮಾಡಿದ ಭೂಮಿ ಎಷ್ಟು ;

(ಆ) ಈ ಸರ್ವೆ ನಂಬರಿನ ಭೂಮಿ ಮುಫ್ತಲ್ ಕಾವಲ್ ಆಗಿದ್ದು, ಇದನ್ನು ಯಾವಾಗ ತಿಮ್ಮಯ್ಯ–ಗೂಳಪ್ಪ ಮುಂತಾದವರಿಗೆ ಮಂಜೂರು ಮಾಡಲಾಯಿತು ;

(ಇ) ಗ್ರಾಂಟ್ ರೂಲ್ಸ್ ಮೀರಿ ಹೇಗೆ ಮಂಜೂರು ಮಾಡಲಾಯಿತು ;

(ಈ) ಅದೇ ಭೂಮಿಯನ್ನು ಡಿ–ನೋಟಿಫೈ ಮಾಡಿದ್ದು ಸರಿಯೇ ?

## ರಾಜ್ಯದಲ್ಲಿ ಯುವತಿಯರು ಕಾಣೆಯಾಗುತ್ತಿರುವ ಪ್ರಕರಣಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೬ (೧೦೨೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯುವತಿಯರು ರಾಜ್ಯದಲ್ಲಿ ಕಾಣೆಯಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಕಾಣೆಯಾದ ಯುವತಿಯವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕಾಣೆಯಾದ ಯುವತಿಯರ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚುವ ಕಾರ್ಯದ ಪ್ರಗತಿಯು ನಿಧಾನವಾಗುತ್ತಿರುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಈ) ತ್ವರಿತವಾಗಿ ತನಿಖೆ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ಪತ್ತೆ ಹಚ್ಚಿದ ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಜನ ಅಪರಾಧಿಗಳಿಗೆ ಯಾವ ರೀತಿಯ ಶಿಕ್ಷೆ ವಿಧಿಸಲಾಗಿದೆ ? (ವಿವರ ನೀಡುವುದು)

## ಗೃಹ ಇಲಾಖೆ ಅಧಿಕಾರಿಗಳ ಮುಂಬಡ್ತಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೭ (೧೧೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ಇಲಾಖೆ ಅಧಿಕಾರಿಗಳ ಮುಂಬಡ್ತಿಯಲ್ಲಿ ೧೯೭೮ ರಿಂದ ಈಚೆಗೆ ಬಡ್ತಿ ಹೊಂದಿದ ಸಾಮಾನ್ಯ ವರ್ಗದ ಅಧಿಕಾರಿಗಳ ಸಂಖ್ಯೆಗೆ ಎಸ್.ಸಿ./ಎಸ್.ಟಿ. ಅಧಿಕಾರಿಗಳ ಸಂಖ್ಯೆ ಶೇ. ೧೫/೩ನ್ನು ಮೀರದಿದ್ದಲ್ಲಿ ಅದನ್ನು ಭರ್ತಿ ಮಾಡಲು ಏನು ಕ್ರಮ ಕೈಗೊಳ್ಳಲಾಗಿದೆ (ಪಿಐ ಮತ್ತು ಡಿವೈಎಸ್‌ಪಿ ಹುದ್ದೆಗಳಲ್ಲಿ) ಇದರ ಮಾಹಿತಿ ನೀಡುವುದು ;



(ಆ) ಜೇಷ್ಠತೆ (Seniority) ಆಧಾರದಿಂದ ಬಡ್ತಿ ಹೊಂದಿದ ಅಧಿಕಾರಿಗಳು ಯಾವುದೇ ರೋಸ್ಟರ್ ಅಡಿಯಲ್ಲಾಗಲೀ ಅಥವಾ ಬ್ಯಾಕ್‌ಲಾಗ್ ಹುದ್ದೆಗಳ ಅಡಿಯಲ್ಲಾಗಲೀ ಸೇರದೆ ನೇರವಾಗಿ ಸಾಮಾನ್ಯ ವರ್ಗದ ಅಧಿಕಾರಿಗಳೊಂದಿಗೆ ಬಡ್ತಿ ಹೊಂದಿದ್ದರೂ, ಅವರನ್ನೂ ಸಹ ಶೇಕಡಾ ೧೫ ಮತ್ತು ಶೇಕಡ ೩ ರಲ್ಲಿ ಸೇರಿಸಿಕೊಳ್ಳಲಾಗಿದೆಯೇ ; ಇದಕ್ಕೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಆಯುಕ್ತರ ಕಛೇರಿ ಆದೇಶ ಸಂಖ್ಯೆ : ಸಕನಿ/ಬಿ&ಆರ್/ಸಿಆರ್–೫೬/೨೦೧೨–೧೩, ದಿನಾಂಕ : ೨೦–೦೭–೨೦೧೩ ಮತ್ತು ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ : ೩೬೦೧೨/೪೫/೨೦೦೫–Esst. (Res.) ದಿ: ೧೦–೦೮–೨೦೧೦ ರಲ್ಲೂ ಸಹ ರೋಸ್ಟರ್ ಪದ್ಧತಿಯಲ್ಲಿ ಮೇಲ್ಕಂಡ ಅಧಿಕಾರಿಗಳನ್ನು ಸೇರಿಸಬಾರದೆಂದು ಆದೇಶವನ್ನು ಪಾಲನೆ ಮಾಡಲಾಗಿದೆಯೇ ; (ಮಾಹಿತಿಯನ್ನು ನೀಡುವುದು)

(ಇ) ೧೯೭೮ರ ತನಕ ಪಿ.ಎಸ್.ಐ. ಹುದ್ದೆಯಲ್ಲಿ ಎಷ್ಟು ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇದ್ದವು ; ಅದನ್ನು ಯಾವ ರೀತಿ ಭರ್ತಿ ಮಾಡಲಾಯಿತು ; ಹಾಗೇಯೇ ಪಿ.ಐ. ಮತ್ತು ಡಿ.ವೈ.ಎಸ್.ಪಿ. ಹುದ್ದೆಗಳಲ್ಲಿ ಡಿಪಿಎಆರ್ ಆದೇಶ ಸಂಖ್ಯೆ : ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ ೧೩ ಎಸ್‌ಆರ್‌ಆರ್ ೯೨, ದಿನಾಂಕ : ೦೧–೦೪–೧೯೨ರನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಮೇಲಿನ ರೋಸ್ಟರ್ ನಂತರ ೧೯೭೮ ರಿಂದ ನೀಡಲಾಗಿದೆಯೇ ; ನೀಡಿದ್ದಲ್ಲಿ ಮಾಹಿತಿಯನ್ನು ಒದಗಿಸುವುದು ;

(ಈ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಡಿಪಿಎಆರ್) ಸುತ್ತೋಲೆ ಸಂಖ್ಯೆ : ಸಿಆಸುಇ/೩೪/ಸೆನೆನಿ/೨೦೧೦, ದಿನಾಂಕ : ೨೮–೦೫–೨೦೧೦ ರಂದು ರೋಸ್ಟರ್ ಹಾಗೂ

ರಿಕ್ತ ಸ್ಥಾನಗಳ ರಿಜಿಸ್ಟರ್ ಅನ್ನು ನಿರ್ವಹಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದು, ಪೊಲೀಸ್ ಇಲಾಖೆಯಲ್ಲಿ ಈ ರಿಜಿಸ್ಟರ್ ಅನ್ನು ೧೯೭೮ ರಿಂದ ಇತ್ತೀಚೆಗೆ ನಿರ್ವಹಿಸಲಾಗಿದೆಯೇ ? (ಪಿಎಸ್‌ಐ, ಪಿಐ., ಡಿವೈಎಸ್‌ಪಿ)

## ರೇಷ್ಮೆ ವ್ಯವಸಾಯ ಅಭಿವೃದ್ಧಿ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೮ (೧೦೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಳೆದ ೨ ವರ್ಷಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ರೇಷ್ಮೆ ವ್ಯವಸಾಯವನ್ನು ಅಭಿವೃದ್ಧಿಪಡಿಸಲು ರೇಷ್ಮೆ ಕೃಷಿಕರಿಗೆ ಅನುಕೂಲವಾಗುವ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಎಷ್ಟು ಜನ ರೈತರಿಗೆ ಈ ಕಾರ್ಯಕ್ರಮದ ಸೌಲಭ್ಯವನ್ನು ಒದಗಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಜಮಖಂಡಿ ನಗರದಲ್ಲಿ ಮಾಸ್ಟರ್ ಪ್ಲಾನ್ ರಸ್ತೆ ಅಗಲೀಕರಣ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೯೯ (೧೦೩೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಜಮಖಂಡಿ ನಗರದಲ್ಲಿ ರಸ್ತೆ ಅಗಲೀಕರಣಕ್ಕಾಗಿ ಈಗಾಗಲೇ ಯಾವ ಯಾವ ಮಾರ್ಗದಲ್ಲಿ ಮಾಸ್ಟರ್ ಪ್ಲಾನ್ ಕೈಗೊಳ್ಳಲಾಗಿದೆ ;



(ಆ) ಮುಂದಿನ ಹಂತದಲ್ಲಿ ಇನ್ನು ಹೆಚ್ಚಿನ ರಸ್ತೆ ಮಾರ್ಗಗಳನ್ನು ಮಾಸ್ಟರ್ ಪ್ಲ್ಯಾನ್ ಅನುಸಾರ ಅಗಲೀಕರಣಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಇದ್ದಲ್ಲಿ, ಕೈಗೆತ್ತಿಕೊಳ್ಳಲಾಗುವ ಮಾರ್ಗಗಳು ಯಾವುವು ? (ಅವುಗಳ ಅಳತೆಯ ಸಹಿತ ವಿವರ ನೀಡುವುದು)

## ಕೈಗಾರಿಕೆಗಳ ಸ್ಥಾಪನೆಗೆ ಭೂ ಸ್ವಾಧೀನ

**ಶ್ರೀ ಕೆ. ಗೋವಿಂದರಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೦ (೧೦೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳ ಅವಧಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶದಿಂದ ರಾಜ್ಯದಲ್ಲಿ ಭೂ ಸ್ವಾಧೀನಪಡಿಸಿಕೊಂಡ ಜಮೀನು ಎಷ್ಟು ; (ವರ್ಷವಾರು ಜಿಲ್ಲಾವಾರು ವಿಸ್ತೀರ್ಣವಾರು, ರೈತರಿಗೆ ನೀಡಲಾದ ಪರಿಹಾರ ಮೊತ್ತ ಕುರಿತಂತೆ ಮಾಹಿತಿ ಒದಗಿಸುವುದು)

(ಆ) ಸ್ವಾಧೀಣಪಡಿಸಿಕೊಂಡ ಜಮೀನುಗಳಲ್ಲಿ ಎಷ್ಟು ಭೂಮಿಯನ್ನು ಕೈಗಾರಿಕೆಗಳಿಗೆ ಒದಗಿಸಲಾಗಿದೆ ; ಸ್ಥಾಪಿಸಲಾದ ಕೈಗಾರಿಕೆಗಳು ಯಾವುವು ; ಯಾವ ಭಾಗಗಳಲ್ಲಿ ಸ್ಥಾಪಿತವಾಗವೆ ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಪ್ರಸ್ತುತ ಲ್ಯಾಂಡ್ ಬ್ಯಾಂಕ ಯೋಜನೆಯಡಿಯಲ್ಲಿ ಕೈಗಾರಿಕೆ ಸ್ಥಾಪನೆ ಉದ್ದೇಶಕ್ಕಾಗಿ ಭೂ ಸ್ವಾಧೀನಪಡಿಸಿಕೊಂಡ ಜಮೀನನ್ನು ಅನ್ಯ ಉದ್ದೇಶಗಳಿಗೆ ಮಂಜೂರು ನೀಡಿರುವುದು ಮತ್ತು ಭೂ ವ್ಯಾಜ್ಯ ಇರುವುದು ನಿಜವೇ ; ನಿಜವಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳಾವುವು ; (ಮಾಹಿತಿ ಒದಗಿಸುವುದು)

(ಈ) ಕೊರತೆಯನ್ನು ನೀಗಿಸುವ ಸಲುವಾಗಿ ರೈತರಿಂದ ಭೂ ಸ್ವಾಧೀನ ಪಡಿಸಿಕೊಳ್ಳುವ ಉದ್ದೇಶವಿದೆಯೇ ; ಉದ್ದೇಶಿಸಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ಬೆಂಗಳೂರು ನಗರದಲ್ಲಿ ಭದ್ರತೆಯ ದೃಷ್ಟಿಯಿಂದ ಕಟ್ಟಡಗಳ ನಿರ್ಮಾಣಕ್ಕೆ ಇರುವ ನಿಬಂಧನೆಗಳ ಬಗ್ಗೆ

**ಶ್ರೀ ಕೆ. ಗೋವಿಂದರಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೧ (೧೦೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಭದ್ರತೆಯ ಹಿತದೃಷ್ಟಿಯಿಂದ ಎತ್ತರದ/ ಬಹುಮಹಡಿ ಕಟ್ಟಡಗಳ ನಿರ್ಮಾಣಕ್ಕೆ ಯಾವುದಾದರೂ ನಿಬಂಧನೆಗಳು ಇವೆಯೇ ; ಇದ್ದಲ್ಲಿ, ಈ ನಿಟ್ಟಿನಲ್ಲಿ ಯಾವ ಯಾವ ಪ್ರದೇಶ ವ್ಯಾಪ್ತಿಯನ್ನು ಗುರುತಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ವಿಧಾನಸೌಧ, ರಾಜಭವನ, ಶಾಸಕರ ಭವನ ಸುತ್ತಮುತ್ತಲಿನ ಎಷ್ಟು ಪರಿಧಿಯಲ್ಲಿ (ವ್ಯಾಪ್ತಿ) ಇಂತಹ ನಿರ್ಬಂಧ ಇದೆಯೇ ; ಈ ನಿಟ್ಟಿನಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳಾವುವು ; (ವಿವರ ಒದಗಿಸುವುದು)

(ಇ) ರಾಜಭವನ ರಸ್ತೆಯಲ್ಲಿ ಆಕಾಶವಾಣಿ ನಿಲಯದ ಸಮೀಪ ನಿರ್ಮಾಣವಾಗಿರುವ ಬೃಹತ್ ಕಟ್ಟಡದ ಒಡೆತನವು ಯಾರಿಗೆ ಸೇರಿದೆ ; ಇಲ್ಲಿ ಯಾವ ರೀತಿಯ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿವೆ ; (ಮಾಹಿತಿ ಒದಗಿಸುವುದು)



(ಈ) ಈ ಕಟ್ಟಡದಲ್ಲಿ ನಿರ್ಮಾಣಕ್ಕೆ (Prestige-Khodays) ಅನುಮತಿಸುವಲ್ಲಿ ಯಾವ ನಿಯಮಾವಳಿಯನ್ನು ಅನುಸರಿಸಲಾಗಿದೆ ; ಈ ಕಟ್ಟಡ ನಿರ್ಮಾಣದಿಂದಾಗಿ ಭದ್ರತೆ ದೃಷ್ಟಿಯಿಂದ ಆಗಿರುವ ಲೋಪವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇದುವರೆವಿಗೂ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ?

## ಪಶು ಆಸ್ಪತ್ರೆ ಹಾಗೂ ವೈದ್ಯರ ಕೊರತೆ

**ಶ್ರೀ ಕೆ. ಗೋವಿಂದರಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೨ (೧೦೩೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ; ಪಶು ವೈದ್ಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಜಾನುವಾರುಗಳ ಹಾಗೂ ಆಸ್ಪತ್ರೆಗಳ ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯರ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಕಳೆದ ೫ ವರ್ಷಗಳ ಅವಧಿಯಲ್ಲಿ ವಿವಿಧ ಕಾಯಿಲೆಗಳಿಗೆ ತುತ್ತಾಗಿ ಅಸುನೀಗಿದ ಜಾನುವಾರುಗಳ ಸಂಖ್ಯೆ ಎಷ್ಟು ; (ಅಸುನೀಗಲು ಇದ್ದ ಕಾರಣಗಳ ಸಹಿತ ಜಿಲ್ಲಾವಾರು ವಿವರ ಒದಗಿಸುವುದು)

(ಈ) ಗ್ರಾಮೀಣ ಭಾಗಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿಂದ ಜಾನುವಾರುಗಳ ತುರ್ತು ಚಿಕಿತ್ಸೆಗೆ ತೊಂದರೆಯಾಗುತ್ತಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಗುರುತಿಸಲಾಗಿರುವ ನ್ಯೂನ್ಯತೆಗಳಾವುವು ; (ಮಾಹಿತಿ ಒದಗಿಸುವುದು)

(ಉ) ಹೆಚ್ಚಿನ ಬೇಡಿಕೆ ಮತ್ತು ಅವಶ್ಯಕತೆಯಿರುವ ಪ್ರದೇಶಗಳಿಗೆ ಪಶುವೈದ್ಯ ಆಸ್ಪತ್ರೆ ಮತ್ತು ಸಿಬ್ಬಂದಿಗಳನ್ನು ಸ್ಥಳಾಂತರಿಸುವ ಕುರಿತು ಯಾವ ಯೋಜನೆಗಳನ್ನು ಸರ್ಕಾರವು ಆಲೋಚಿಸಿದೆ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳಾವುವು ? (ಮಾಹಿತಿ ಒದಗಿಸುವುದು)

## ಲೋಕಾಯುಕ್ತ ದಾಳಿ ಪ್ರಕರಣಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೯೦೩ (೧೦೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ನಡೆದ ಲೋಕಾಯುಕ್ತ ದಾಳಿ, ಟ್ರ್ಯಾಪ್ ಪ್ರಕರಣಗಳ ಸಂಖ್ಯೆ ಎಷ್ಟು ; (ದಾಳಿ ಮತ್ತು ಟ್ರ್ಯಾಪ್‌ಗೆ ಒಳಗಾದವರ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಲೋಕಾಯುಕ್ತ ಸಂಸ್ಥೆ ಸ್ಥಾಪನೆ ಲಾಗಾಯ್ತು ಈವರೆಗೆ ಲೋಕಾಯುಕ್ತ ದಾಳಿ ಮತ್ತು ಟ್ರ್ಯಾಪ್ ಪ್ರಕರಣಗಳಲ್ಲಿ ಎಷ್ಟು ಆರೋಪಿಗಳಿಗೆ ನ್ಯಾಯಾಲಯದಲ್ಲಿ ಶಿಕ್ಷೆಯಾಗಿದೆ; ಎಷ್ಟು ಆರೋಪಿಗಳು ಆರೋಪದಿಂದ ಮುಕ್ತರಾಗಿದ್ದಾರೆ ; (ಒಟ್ಟಾರೆ ಮಾಹಿತಿಗಳನ್ನು ಕ್ರೋಢೀಕರಿಸಿ, ಶೇಕಡವಾರು ವಿವರಗಳನ್ನು ನೀಡುವುದು)

(ಇ) ಲೋಕಾಯುಕ್ತಕ್ಕೆ ಹೆಚ್ಚಿನ ಅಧಿಕಾರ ನೀಡುವ ನಿಟ್ಟಿನಲ್ಲಿ ಕಾಯಿದೆಗೆ ತಿದ್ದುಪಡಿ ತರಲು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವಗಳ ಪೈಕಿ, ಯಾವುದಾದರೂ ಸರ್ಕಾರದಲ್ಲಿ ಬಾಕಿ ಇವೆಯೇ ? (ವಿವರಗಳನ್ನು ನೀಡುವುದು)



## ಗ್ರಾಮೋದ್ಯೋಗ ವಸ್ತುಗಳಿಗೆ ದೇಸಿ ಮಾರುಕಟ್ಟೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೯೦೪ (೧೦೪೦) ಮಾನ್ಯ ಮುಖ್ಯಮಂತ್ರಿಗಳು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯು ಇತ್ತೀಚೆಗೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಹಮ್ಮಿಕೊಂಡಿದ್ದ Exhibition & Sale ಕಾರ್ಯಕ್ರಮದ ಯಶಸ್ಸು ಮತ್ತು ಗ್ರಾಮೋದ್ಯೋಗ ವಸ್ತುಗಳ ಮಾರಾಟದ ಬಗ್ಗೆ ವಿವರಗಳನ್ನು ನೀಡುವುದು ;

(ಆ) ಈ ಸಂಸ್ಥೆಯ ಕಾರ್ಯಕ್ರಮವನ್ನು ಮತ್ತಷ್ಟು ಪ್ರಚಾರ ಮಾಡಿ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಆಗಾಗ್ಗೆ ಏರ್ಪಡಿಸಲು ಸರ್ಕಾರ ಚಿಂತಿಸುವುದೇ ;

(ಇ) ಈ ಮಾರಾಟ ಕಾರ್ಯಕ್ರಮಗಳಲ್ಲಿ ಸ್ತ್ರೀಶಕ್ತಿ, ಮಹಿಳಾ ಸಂಘಟನೆಗಳು ಮತ್ತು ಮಹಿಳೆಯರು ತಯಾರಿಸುವ ವಸ್ತುಗಳ ಮಾರಾಟಕ್ಕೆ ಹೆಚ್ಚು ಪ್ರೋತ್ಸಾಹ ನೀಡಲು ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸುವುದೇ ?

## ಹೈನುಗಾರಿಕೆ ಅಭಿವೃದ್ಧಿ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೯೦೫ (೧೦೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಶುಸಂಗೋಪನೆ ವೃತ್ತಿಯಲ್ಲಿ ತೊಡಗಿರುವ ಮಹಿಳೆಯರ ಪ್ರಮಾಣವೆಷ್ಟು ; ಈ ಪ್ರಮಾಣವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕೃಷಿಗೆ ಮನ್ನಣೆ ನೀಡುವಂತೆ, ಹೈನುಗಾರಿಕೆಗೂ ಕೂಡ ಮಾನ್ಯತೆಗಳನ್ನು ನೀಡಬೇಕೆಂದು ಸರ್ಕಾರದ ಮುಂದೆ ಬೇಡಿಕೆಗಳಿವೆಯೇ ; ಇದ್ದಲ್ಲಿ ವಿವರಗಳನ್ನು ಒದಗಿಸುವುದು ;

(ಇ) ಹೈನುಗಾರಿಕೆಯ ಅಭಿವೃದ್ಧಿ ಬಗ್ಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ?

## 'ಸ್ಮಾರ್ಟ್ ಸಿಟಿ ಯೋಜನೆ' ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ) :–**

೯೦೬ (೧೦೩೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ 'ಸ್ಮಾರ್ಟ್ ಸಿಟಿ ಯೋಜನೆ' ಯಡಿ ಅಭಿವೃದ್ಧಿಪಡಿಸಲು ಯಾವ ಯಾವ ನಗರಗಳನ್ನು ಗುರುತಿಸಿ, ಭಾರತ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸಲಾಗಿದೆ ;

(ಆ) ಈ ಯೋಜನೆಯ ರೂಪುರೇಶೆಗಳೇನು ;

(ಇ) ರಾಜ್ಯದಲ್ಲಿ ಈ ಯೋಜನೆ ಜಾರಿಗೊಳ್ಳಲಿರುವುದು ಯಾವಾಗ ?

## ಗಣಿ ಅಕ್ರಮದಲ್ಲಿ ಭಾಗಿಯಾಗಿರುವವರು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ) :–**

೯೦೭ (೧೦೪೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಡೆದಿರುವ ಗಣಿಗಾರಿಕೆಯಲ್ಲಿ ಲೂಟಿ ಮತ್ತು ಅಕ್ರಮ ಪ್ರಕರಣಗಳಲ್ಲಿ ಭಾಗಿಯಾದವರ ಸಂಖ್ಯೆ ಎಷ್ಟು ; (ಹೆಸರಿನೊಂದಿಗೆ ವಿವರಗಳನ್ನು ಒದಗಿಸುವುದು)



(ಆ) ಇವರ ವಿರುದ್ಧ ಜರುಗಿಸಲಾಗಿರುವ ಕಾನೂನು ಕ್ರಮಗಳಾವುವು ; ತನಿಖೆಯ ಪ್ರಗತಿ ಯಾವ ಹಂತದಲ್ಲಿದೆ ;

(ಇ) ತನಿಖೆಯಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಿ, ತಪ್ಪಿತಸ್ಥರ ವಿರುದ್ಧ ಶೀಘ್ರವಾಗಿ ಕಟ್ಟುನಿಟ್ಟಿನ ಕಾನೂನು ಕ್ರಮಗಳನ್ನು ಜರುಗಿಸುವುದೇ ?

## ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಮತ್ತು ಮಹಾನಗರ ಪಾಲಿಕೆಗಳಲ್ಲಿ ಸ್ವಚ್ಛತೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೮ (೧೦೪೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ವಚ್ಛ ಭಾರತ ಅಭಿಯಾನ ಯೋಜನೆ ಜಾರಿಗೆ ಬಂದಿದ್ದು ಅದರಂತೆ ಪಟ್ಟಣ ಪಂಚಾಯಿತಿ, ಪುರಸಭೆ, ನಗರ ಸಭೆ ಹಾಗೂ ಮಹಾನಗರ ಪಾಲಿಕೆಗಳಲ್ಲಿ ಸ್ವಚ್ಛತೆ ಬಗ್ಗೆ ರಾಜ್ಯ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಹಾಗಿದ್ದಲ್ಲಿ, ಸರ್ಕಾರ ಸ್ವಚ್ಛತೆ ಕಾಯ್ದುಕೊಳ್ಳಲು ಏನು ಕ್ರಮ ಕೈಗೊಂಡಿದೆ ;

(ಇ) ಇದಕ್ಕಾಗಿ ಎಷ್ಟು ಪೌರ ಕಾರ್ಮಿಕರನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ ;

(ಈ) ಸಾರ್ವಜನಿಕರಲ್ಲಿ ಆರೋಗ್ಯದ ಬಗ್ಗೆ ತಿಳುವಳಿಕೆ ತರಲು ಯಾವ ಯಾವ ರೀತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ?

## ಮರಳು ನೀತಿಯಿಂದ ಲಕ್ಷಾಂತರ ಕಾರ್ಮಿಕರು ನಿರುದ್ಯೋಗಿಗಳಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೯ (೧೦೪೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೂತನ ಮರಳು ನೀತಿಯಿಂದ ಮರಳು ದೊರೆಯದೆ ಇರುವುದರಿಂದ ಕಟ್ಟಡ ಕಾರ್ಮಿಕರಿಗೆ ಮತ್ತು ಮರಳು ಗಣಿಗಳ ಕಾರ್ಮಿಕರಿಗೆ ಕೆಲಸವಿಲ್ಲದೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿಯೇ ಅತೀ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಬೆಳಗಾವಿ ಜಿಲ್ಲೆಯಲ್ಲಿ ಸುಮಾರು ಒಂದು ಲಕ್ಷ ಜನ ಕಾರ್ಮಿಕರು ಈ ಕೆಲಸವನ್ನು ನಂಬಿಕೊಂಡು ಜೀವನ ಸಾಗಿಸುತ್ತಿರುವ ವಿಚಾರ ಸರ್ಕಾರದ ಗಮನದಲ್ಲಿದೆಯೇ ;

(ಇ) ಈ ನೂತನ ಮರಳು ನೀತಿಯಿಂದ ಬಡ ಕಾರ್ಮಿಕರಿಗೆ ಆರ್ಥಿಕವಾಗಿ ಅನಾನುಕೂಲವಾಗಿ ಗ್ರಾಮಗಳನ್ನು ತೊರೆದು ಬೇರೆ ಉದ್ಯೋಗ ಅರಸಿ ಗುಳೆ ಹೋಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನಗರೋತ್ಥಾನ ಯೋಜನೆಯಡಿ ಒಳಪಡುವ ನಗರಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೦ (೧೦೪೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯ ನಗರಗಳ ಅಭಿವೃದ್ಧಿಗೆ ಸರ್ಕಾರ ತಂದಿರುವ ಹಲವಾರು ಯೋಜನೆಗಳಡಿಯಲ್ಲಿ ನಗರೋತ್ಥಾನ ಯೋಜನೆಯಡಿ ಒಳಪಡುವ ನಗರಗಳು ಎಷ್ಟು ; ಅವು ಯಾವುವು ;



(ಆ) ಈ ಯೋಜನೆಯಡಿ ಆಯ್ಕೆಯಾದ ನಗರಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಇ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡಿದೆ ; (ಕಾಮಗಾರಿವಾರು ಹೆಸರು, ನಗರ ಹಾಗೂ ಖರ್ಚು ಮಾಡಿದ ಅನುದಾನದ ವಿವರ ಒದಗಿಸುವುದು)

(ಈ) ಖರ್ಚು ಮಾಡದೇ ಬಾಕಿ ಉಳಿದಿರುವ ಅನುದಾನ ಎಷ್ಟು ; ಸದರಿ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಉಪಯೋಗಿಸಲಾಗುವುದು ?

## ಕಲಬುರಗಿ ನಗರವನ್ನು 'ಬಿ' ನಗರವೆಂದು ಘೋಷಣೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತದಿಂದ ಚುನಾಯಿತರಾದವರು) :–**

೯೧೧ (೧೦೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಪ್ರಮುಖ ನಗರವಾದ ಕಲಬುರಗಿ ನಗರದ ಜನಸಂಖ್ಯೆ ೦೫.೫೦ ಲಕ್ಷ ಮೇಲ್ಪಟ್ಟಿರುವುದರಿಂದ ಹಲವಾರು ಸಂದರ್ಭಗಳಲ್ಲಿ ಹಾಗೂ ಸದನದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಕಲಬುರಗಿ ನಗರವನ್ನು "ಬಿ" ನಗರವೆಂದು ಮಾನ್ಯತೆ ನೀಡಲು ಕ್ರಮಕೈಗೊಳ್ಳುವ ಆಶ್ವಾಸನೆ ನೀಡಿರುವುದನ್ನು ಜಾರಿಗೆ ತರಲು ಇಲ್ಲಿಯವರೆವಿಗೂ ಯಾವುದೇ ಕ್ರಮಕೈಗೊಳ್ಳದಿರುವುದಕ್ಕೆ ಕಾರಣಗಳೇನು ;

(ಆ) ಈ ತಾರತಮ್ಯದಿಂದ ಕಲಬುರಗಿ ನಗರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರು ಮನೆ ಬಾಡಿಗೆ ಭತ್ಯೆ ೧೦% (ತಾಲ್ಲೂಕು ಪಟ್ಟಣಗಳಿಗೆ ಸರಿಸಮನಾದ) ಪಡೆಯುತ್ತಿದ್ದು, ಜೀವನ ನಿರ್ವಹಣೆ ದುಬಾರಿಯಾಗಿರುವ ಕಲಬುರಗಿ ಮಹಾನಗರದಲ್ಲಿ ಸರ್ಕಾರಿ ನೌಕರರ ದುಬಾರಿ ಮನೆ ಬಾಡಿಗೆ ಹಾಗೂ ದೈನಂದಿನ ಜೀವನ ನಿರ್ವಹಣೆ ಕಷ್ಟಕರವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ;

(ಇ) ಹಾಗಿದ್ದರೆ, ಈ ನಿಟ್ಟಿನಲ್ಲಿ ಕಲಬುರಗಿ ಮಹಾನಗರವನ್ನು "ಬಿ" ನಗರವೆಂದು ಘೋಷಣೆ ಮಾಡುವುದು ಯಾವಾಗ ; ಒಂದು ವೇಳೆ "ಬಿ" ನಗರವೆಂದು ಘೋಷಣೆ ಮಾಡಲು ವಿಳಂಬ ಆಗುವುದಾದರೆ, ಕಲಬುರಗಿ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಮನೆ ಬಾಡಿಗೆ ಭತ್ಯೆ ೧೦% ರಿಂದ ೧೫% ರಷ್ಟು ಹೆಚ್ಚಳ ಮಾಡಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ಬೀದರ್‌ನಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೧೨ (೧೦೫೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್‌ನಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪನೆಯಾಗಿದ್ದು ಯಾವಾಗ ; ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷಾವಾರು, ಯೋಜನೆವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ಖರ್ಚಾದ ಹಾಗೂ ಬಾಕಿ ಉಳಿದ ಮೊತ್ತ ಎಷ್ಟು ; (ವರ್ಷಾವಾರು, ಯೋಜನೆವಾರು ಮಾಹಿತಿ ನೀಡುವುದು)



(ಇ) ಮಹಾಗಾಂವದಲ್ಲಿ ಸ್ಥಾಪಿಸಲಾದ ಹೈನುಗಾರಿಕೆ ವಿಜ್ಞಾನ ಸಂಸ್ಥೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಆ ಪೈಕಿ ಖರ್ಚಾದ ಮೊತ್ತ ಎಷ್ಟು ? (ಕಳೆದ ೩ ವರ್ಷಗಳ ವರ್ಷವಾರು ವಿವರ ನೀಡುವುದು)

## ಪಿ.ಎಸ್.ಐ ಪ್ರಶ್ನೆ ಪತ್ರಿಕೆಗಳ ಗೊಂದಲ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೧೩ (೧೦೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಎಸ್.ಐ (ಸಿವಿಲ್) ಮತ್ತು ಸಿ.ಎ.ಆರ್. / ಡಿ.ಎ.ಆರ್. ಹುದ್ದೆಗಳ ನೇಮಕಕ್ಕೆ ಕಳೆದ ಜನವರಿ ೧೧ ರಂದು ರಾಜ್ಯಾದ್ಯಂತ ಲಿಖಿತ ಪರೀಕ್ಷೆ ನಡೆಸಲಾಗಿದೆಯೇ ;

(ಆ) ಈ ಪರೀಕ್ಷೆಯಲ್ಲಿ ಕೊಟ್ಟ ೧ ಪ್ರಶ್ನೆಗಳಿಗೆ ಕೀ ಉತ್ತರ ತಪ್ಪಾಗಿರುವುದು ನಿಜವೇ ;

(ಇ) ಪ್ರಶ್ನೆ ಪತ್ರಿಕೆಯಲ್ಲಿ ಗೊಂದಲ ಉಂಟಾಗಲು ಕಾರಣವೇನು ;

(ಈ) ಇದಕ್ಕೆ ಕಾರಣಕರ್ತರಾರು ಈ ಗೊಂದಲದಿಂದ ತೊಂದರೆ ಉಂಟಾಗಿರುವ ಅಭ್ಯರ್ಥಿಗಳಿಗೆ ನೀಡುವ ಪರಿಹಾರವೇನು ?

## ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಖಾಲಿ ಹುದ್ದೆಗಳ ಭರ್ತಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೧೪ (೧೦೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿನ ಸರ್ಕಾರಿ ಇಲಾಖೆಗಳಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು

ಇಲಾಖಾವಾರು ಹಾಗೂ ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು ;

(ಇ) ೩೭೧ (ಜೆ) ಅಡಿಯಲ್ಲಿ ಮೀಸಲ್ಪಟ್ಟ ಹುದ್ದೆಗಳ ಸಂಖ್ಯೆ ಎಷ್ಟು ? (ಇಲಾಖಾವಾರು, ವೃಂದವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನ ಭೂಸ್ವಾಧೀನ ಪ್ರಕ್ರಿಯೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೧೫ (೧೦೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ತಾಲ್ಲೂಕಿನ ಅಧಿಸೂಚನೆಯನ್ನು ಹೊರಡಿಸಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಗಾಗಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; (ಅಧಿಸೂಚನೆ ದಿನಾಂಕ: ಸ್ವಾಧೀನ ಉದ್ದೇಶ ಸ್ವಾಧೀನಪಡಿಸಿದ ಜಮೀನಿನ ವಿವರ, ಪ್ರತಿ ಎಕರೆಗೆ ಕೊಟ್ಟ ಪರಿಹಾರದ ಮೊತ್ತ ಸಂಪೂರ್ಣ ವಿವರ ನೀಡುವುದು)

(ಆ) ಹಲವಾರು ವರ್ಷ ಕಳೆದರು ಭೂಸ್ವಾಧೀನ ಪ್ರಕ್ರಿಯೆ ನೆನಗುದಿಗೆ ಬಿದ್ದು ರೈತರು ತಮ್ಮ ಅಮೂಲ್ಯವಾದ ಭೂಮಿಯನ್ನು ಕಳೆದುಕೊಂಡ ಹಾಗೂ ಯೋಗ್ಯವಾದ ಪರಿಹಾರ ದೊರೆಯದೆ ಜಮೀನು ಅಭಿವೃದ್ಧಿ ಹಾಗೂ ಕುಟುಂಬದ ಅಗತ್ಯಗಳಿಗಾಗಿ ಮಾರಾಟ ಮಾಡಲಿಕ್ಕು ಆಗದೆ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು) ರೈತರ ಕಂಗೆಟ್ಟ



ಪರಿಸ್ಥಿತಿಯನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದೆ ಇರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸ್ವಾಧೀನ ಪಡಿಸಿಕೊಂಡ ಸಾವಿರಾರು ಎಕರೆ ಪ್ರದೇಶದಲ್ಲಿ ಯಾವುದೇ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಆಗದೆ ಯಾವುದೇ ಕೈಗಾರಿಕೆಯನ್ನು ಸ್ಥಾಪಿಸದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ, ವಿವರ ನೀಡುವುದು ; ಜಮೀನಿನ ಸದ್ಬಳಕೆ ಮಾಡುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ?

## ರಾಜ್ಯದ ಸರ್ಕಾರಿ ಸ್ವಾಮ್ಯದಲ್ಲಿರುವ ನಿಗಮ ಮಂಡಳಿಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೬ (೧೦೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯದಲ್ಲಿರುವ ನಿಗಮ ಮಂಡಳಿಗಳು ಯಾವುವು ;

(ಆ) ಈ ನಿಗಮ ಮಂಡಳಿಗಳಲ್ಲಿ ಸರ್ಕಾರಿ ನೌಕರರಿಗೆ ಅನ್ವಯಿಸುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಳವಡಿಸಲಾಗಿದೆಯೇ; ಯಾವ ಯಾವ ನಿಗಮಗಳಲ್ಲಿ ಅಳವಡಿಸಲಾಗಿದೆ;

(ಇ) ಈ ನಿಗಮ ಮಂಡಳಿಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಳವಡಿಸುವಾಗ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಿಗೆ ಅನ್ವಯವಾಗುವ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆಯೇ; ಯಾವ ಯಾವ ನಿಗಮಗಳು ಮೀಸಲಾತಿ ನಿಯಮಗಳನ್ನು ಅನ್ವಯಿಸಿಲ್ಲ;

(ಈ) ಮೀಸಲಾತಿ ನಿಯಮಗಳನ್ನು ಅಳವಡಿಸದಿರುವ ನಿಗಮ ಮಂಡಳಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ?

## ಸರ್ಕಾರದ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ದಿನಗೂಲಿ ನೌಕರರು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೭ (೧೦೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು; ಯಾವ ಯಾವ ಹುದ್ದೆಗಳಲ್ಲಿ ಈ ನೌಕರರು ಕೆಲಸ ಮಾಡುತ್ತಿದ್ದಾರೆ;

(ಆ) ದಿನಗೂಲಿ ನೌಕರರ ಖಾಯಂಯಾತಿಗಾಗಿ ಸರ್ಕಾರ ಕಾನೂನು ತಂದಿದೆಯೇ; ಈ ಕಾನೂನಿನ ಅನ್ವಯ ಯಾವ ಯಾವ ಇಲಾಖೆಯಲ್ಲಿ ಎಷ್ಟೆಷ್ಟು ದಿನಗೂಲಿ ನೌಕರರನ್ನು ಖಾಯಂ ಮಾಡಲಾಗಿದೆ;

(ಇ) ಸರ್ಕಾರದ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಯಾವ ಯಾವ ಇಲಾಖೆಯಲ್ಲಿ ಎಷ್ಟಷ್ಟು ನೌಕರರು ಕೆಲಸ ಮಾಡುತ್ತಿದ್ದಾರೆ ;

(ಈ) ಈ ಇಲಾಖೆಯಲ್ಲಿ ಯಾವ ದರ್ಜೆಯ ಎಷ್ಟೆಷ್ಟು ಹುದ್ದೆಗಳು ಖಾಲಿ ಇವೆ; ಖಾಲಿಯಿರುವ ಹುದ್ದೆಗಳಿಗೆ ದಿನಗೂಲಿ ನೌಕರರನ್ನು ನೇಮಿಸಿಕೊಳ್ಳಲಾಗುವುದೇ ? (ವಿವರ ನೀಡುವುದು)



## ಲೋಕಾಯುಕ್ತ ಪ್ರಕರಣಗಳು ಬಾಕಿ ಇರುವ ಅಧಿಕಾರಿಗಳಿಗೆ ಬಡ್ತಿ ನೀಡಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೮ (೧೦೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕಾಯುಕ್ತ ತನಿಖೆಗೆ ಒಳಪಟ್ಟಿರುವ ಎಷ್ಟು ಅಧಿಕಾರಿಗಳಿಗೆ ಬಡ್ತಿ ನೀಡಲಾಗಿದೆ; ಯಾರು ಯಾರಿಗೆ ಯಾವ ಯಾವ ಹುದ್ದೆಗೆ ಬಡ್ತಿ ನೀಡಲಾಗಿದೆ; ಲೋಕಾಯುಕ್ತ ತನಿಖೆ ಮುಕ್ತಾಯ ಆಗದೆ, ಇಂತಹ ಅಧಿಕಾರಿಗಳಿಗೆ ಬಡ್ತಿ ನೀಡುವ ಅವಕಾಶ ನಿಯಮಗಳಲ್ಲಿ ಇದೆಯೇ ;

(ಆ) ಲೋಕಾಯುಕ್ತ ಪ್ರಕರಣ ಇರುವ ಅಧಿಕಾರಿ/ನೌಕರರು ಪ್ರಸ್ತುತ ಈ ಸರ್ಕಾರದ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಶೇಷ ಕರ್ತವ್ಯಾಧಿಕಾರಿ (ಒ.ಎಸ್.ಡಿ) ಆಪ್ತ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿದ್ದು, ಅಂತಹ ಅಧಿಕಾರಿಗಳ ಹೆಸರು, ಕಚೇರಿಯ ವಿವರ ನೀಡುವುದು ;

(ಇ) ಲೋಕಾಯುಕ್ತ ಪ್ರಕರಣ ಬಾಕಿಯಿರುವ ಎಷ್ಟು ಅಧಿಕಾರಿಗಳು ಇಲಾಖೆಯ ಮುಖ್ಯಸ್ಥರಾಗಿದ್ದಾರೆ ? (ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿ, ಆಯುಕ್ತರು, ನಿರ್ದೇಶಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅರಣ್ಯ ಇಲಾಖೆಯ ಮುಖ್ಯ ಸಂರಕ್ಷಣಾಧಿಕಾರಿ ಹುದ್ದೆಯಿಂದ ಜಿಲ್ಲಾ ಸಂರಕ್ಷಣಾಧಿಕಾರಿಗಳು, ಇವರುಗಳ ಹೆಸರು ಮತ್ತು ಹುದ್ದೆ ವಿವರ ನೀಡುವುದು)

## ನಗರಾಭಿವೃದ್ಧಿ ಪ್ರಾಧಿಕಾರಗಳು ನಿರ್ಮಿಸಿರುವ ಬಡಾವಣೆಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧೯ (೧೦೫೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳು ಇದುವರೆಗೆ ನಿರ್ಮಿಸಿರುವ ಬಡಾವಣೆಗಳು ಎಷ್ಟು ; ಈ ಬಡಾವಣೆಗಳಲ್ಲಿ ವಿತರಿಸಲಾದ ನಿವೇಶನ ಹಾಗೂ ಮನೆಗಳೆಷ್ಟು ;

(ಆ) ಇವುಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಗಳಿಗೆ ನೀಡಲಾದ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿನ ಮರಳುಗಾರಿಕೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೦ (೧೦೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮರಳುಗಾರಿಕೆ ಮತ್ತು ಸಾಗಾಣಿಕೆ ಬಗ್ಗೆ ರಾಜ್ಯ ಸರ್ಕಾರ ಸ್ಪಷ್ಟವಾದ ನೀತಿಯನ್ನು ಪ್ರಕಟಿಸದೇ ಇರಲು ಕಾರಣವೇನು ;

(ಆ) ಅಕ್ರಮ ಮರಳು ಸಾಗಾಣಿಕೆ ಮತ್ತು ದಾಸ್ತಾನು ಮಾಡುತ್ತಿರುವುದರಿಂದ ದರದಲ್ಲಿ ಏರಿಳಿತದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಕ್ರಮ ಮರಳುಗಾರಿಕೆ ಬಗ್ಗೆ ೨೦೧೩ನೇ ವರ್ಷದಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು;



(ಈ) ಅಕ್ರಮ ಮರಳು ದಾಸ್ತಾನು ಮಾಡಿರುವುದರ ಮೇಲೆ ದಾಳಿ ಮಾಡಿ ವಶಪಡಿಸಿಕೊಂಡಿರುವ ವಾಹನಗಳ ಸಂಖ್ಯೆ ಎಷ್ಟು; (ಪ್ರಕರಣವಾರು ಜಿಲ್ಲಾವಾರು ವಿವರ ನೀಡುವುದು)

(ಉ) ಹಾವೇರಿ ಜಿಲ್ಲೆಯಲ್ಲಿ ಮರಳು ನಡೆಸುತ್ತಿರುವ ಬಗ್ಗೆ ಜಿಲ್ಲಾಡಳಿತ ಯಾವ ಕ್ರಮ ಕೈಗೊಂಡಿದೆ ; ಜಿಲ್ಲಾಡಳಿತದ ಆದೇಶ ಮೀರಿ ಅಕ್ರಮ ಮರಳುಗಾರಿಕೆ ಮಾಡುತ್ತಿರುವುದನ್ನು ತಡೆಯಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು ;

(ಊ) ಅಕ್ರಮ ಮರಳುಗಾರಿಕೆಯನ್ನು ತಡೆಯಲು ಇಲಾಖೆ, ವಿಫಲವಾಗಿದೆಯೇ ; ಇಲಾಖೆಯಲ್ಲಿ ಅಧಿಕಾರಿಗಳ ಕೊರತೆಯಿಂದ ಕಾನೂನನ್ನು ಪಾಲಿಸಲು ಆಗುತ್ತಿಲ್ಲ ಎಂಬ ವಿಚಾರ ಸರ್ಕಾರದ ಗಮನದಲ್ಲಿದೆಯೇ ?

## ಹಾವೇರಿ ಜಿಲ್ಲೆಯಲ್ಲಿ ೨೪/೭ ಸಮಗ್ರ ಯೋಜನೆಯಲ್ಲಿ ಕುಡಿಯುವ ನೀರು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೧ (೧೦೬೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಡಿಯುವ ನೀರಿನ ೨೪/೭ ಸಮಗ್ರ ಯೋಜನೆಯಂತೆ ಹಾವೇರಿ ನಗರ ಪ್ರದೇಶಗಳಲ್ಲಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆ ;

(ಆ) ಈ ಯೋಜನೆಗಳನ್ನು ಕಾರ್ಯಗತಗೊಳಿಸಲು ಸರ್ಕಾರವು ಈಗಾಗಲೇ ಯಾವ ಕ್ರಮವನ್ನು ಕೈಗೊಂಡಿದೆ ;

(ಇ) ಪ್ರಸ್ತುತ ಈ ಯೋಜನೆಗಳ ಸ್ಥಿತಿಗತಿಗಳೇನು ?

## ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೨ (೧೦೬೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನವನ್ನು ನೀಡಲಾಗಿದೆಯೆ ; (ನೀಡಿದ್ದಲ್ಲಿ ಹಾವೇರಿ ಜಿಲ್ಲಾ ತಾಲ್ಲೂಕುವಾರು ವಿವರ ನೀಡುವುದು)

(ಆ) ಎಷ್ಟು ಪ್ರಮಾಣದ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ ನೀಡಲಾಗುತ್ತದೆ ? (ಸಂಪೂರ್ಣ ವಿವರ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿನ ಪೊಲೀಸ್ ವಸತಿ ಗೃಹಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೩ (೧೦೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿನ ಪೊಲೀಸ್ ವಸತಿ ಗೃಹಗಳ ಅವ್ಯವಸ್ಥೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಹಾವೇರಿ ಜಿಲ್ಲೆಯ ಪೊಲೀಸ್ ಸಿಬ್ಬಂದಿಗೆ ಹೊಸ ವಸತಿ ಗೃಹ ನಿರ್ಮಿಸಲು ಯೋಜಿಸಲಾಗಿದೆಯೇ ;

(ಇ) ಇದಕ್ಕಾಗಿ ಮೀಸಲಿಡಲಾಗಿರುವ ಹಣ ಎಷ್ಟು ;



(ಈ) ಹೊಸ ಪೊಲೀಸ್ ವಸತಿ ಗೃಹಗಳನ್ನು ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣ ಮಾಡಲಾಗುವುದು ;

(ಉ) ಹೊಸ ವಸತಿ ಗೃಹಗಳ ನಿರ್ಮಾಣದಿಂದ ಎಷ್ಟು ಪೊಲೀಸ್ ಸಿಬ್ಬಂದಿಗಳಿಗೆ ಸೌಕರ್ಯ ಒದಗಿಸದಂತಾಗುತ್ತದೆ ?

## ಬೆಂಗಳೂರಿನ ವಾರ್ಡ್ ನಂ.೭ರಲ್ಲಿನ ಒಳಚರಂಡಿ ಅವ್ಯವಸ್ಥೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೪ (೧೦೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಯಲಹಂಕ ಹೋಬಳಿ ಯಶೋಧನ ನಗರ ವಾರ್ಡ್ ನಂ.೭ (ಜಕ್ಕೂರು ಏರೋಡ್ರೋಮ್)ನಲ್ಲಿ ಒಳಚರಂಡಿ ವ್ಯವಸ್ಥೆ ಸಮರ್ಪಕವಾಗಿಲ್ಲದೆ ಇಲ್ಲಿನ ತೆರೆದ ಮೋರಿಗಳಿಂದಾಗಿ ನಾಗರೀಕರು ಅಪಘಾತಕ್ಕೆ ಒಳಗಾಗುವುದಲ್ಲದೆ ಕೊಳಚೆ ನೀರು ಸಮರ್ಪಕವಾಗಿ ಹರಿಯುದೆ ನೀರು ಅಲ್ಲೇ ನಿಂತು ಕೆಟ್ಟವಾಸನೆಯಿಂದ ಸೊಳ್ಳೆಗಳ ಹಾವಳಿ ಹೆಚ್ಚಾಗಿ ಡೆಂಗ್ಯೂ ಮಲೇರಿಯಾದಂಥ ಅಪಾಯಕಾರಿ ಖಾಯಿಲೆಗಳಿಗೆ ಒಳಗಾಗುವ ಗಂಭೀರ ವಾತವರಣ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ತೆರೆದ ಮೋರಿಯನ್ನು ಸಮರ್ಪಕ ರೀತಿಯಲ್ಲಿ ದುರಸ್ತಿ ಮಾಡಿ, ಕೊಳಚೆ ನೀರು ನಿಲ್ಲದಂತೆ ಕ್ರಮ ವಹಿಸಿ ನಾಗರೀಕರಿಗೆ ಆಗಿರುವ ತೊಂದರೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳಿಗೆ ಅನುದಾನ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೫ (೧೦೬೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಮುಜರಾಯಿ/ಧಾರ್ಮಿಕ ದತ್ತಿ ಇಲಾಖೆಯ ದೇವಸ್ಥಾನಗಳು ಯಾವುವು ; (ವಿಧಾನಸಭಾ ಮತ ಕ್ಷೇತ್ರವಾರು ಮಾಹಿತಿ ಕೊಡುವುದು)

(ಆ) ದಿ: ೦೧.೦೪.೨೦೦೮ ರಿಂದ ಇಲ್ಲಿಯವರೆಗೆ ಯಾವ ಯಾವ ದೇವಸ್ಥಾನಗಳಿಗೆ ಎಷ್ಟೆಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಖರ್ಚಾಗಿರುವ ಮೊತ್ತವೆಷ್ಟು ;

(ಇ) ಇಲಾಖೆಯ ದೇವಸ್ಥಾನಗಳನ್ನು ಹೊರತುಪಡಿಸಿ ಬೇರೆ ದೇವಸ್ಥಾನಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ;

(ಈ) ಅನುದಾನವನ್ನು ಬಿಡುಗಡೆ ಮಾಡಲು ಯಾವ ಮಾನದಂಡವನ್ನು ಅನುಸರಿಸಲಾಗಿದೆ ?

## ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯ ಯೋಜನೆಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೬ (೧೦೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಎಷ್ಟು ಯೋಜನೆಗಳು ವಿದೇಶಿ ಬ್ಯಾಂಕ್‍ಗಳ ಮೂಲಕ ಅನುದಾನ ಪಡೆದಿವೆ ; ಇದುವರೆವಿಗೂ ಆರಂಭವಾಗಿರುವ ಯೋಜನೆಗಳು ಎಷ್ಟು ;



(ಆ) ಕಳೆದ ೨ ವರ್ಷಗಳಲ್ಲಿ ಯಾವ ಯಾವ ಯೋಜನೆಗಳನ್ನು ವಿದೇಶಿ ಬ್ಯಾಂಕ್‍ಗಳಿಗೆ ನೀಡಲಾಗಿದೆ; ಇದರ ಮೊತ್ತವೆಷ್ಟು ;

(ಇ) ಈ ಯೋಜನೆಗಳಿಗಾಗಿ ಕರೆದಿದ್ದ ಟೆಂಡರ್ ಮೊತ್ತವೆಷ್ಟು ; ನಂತರ ಮೂಲ ಮೊತ್ತಕ್ಕಿಂತ ಹೆಚ್ಚುವರಿ ಖರ್ಚಾಗಿರುವ ಮೊತ್ತಕ್ಕೆ ಕಾರಣವೇನು ?

## ಪ್ರಮುಖ ಸರ್ಕಾರಿ ಆದೇಶಗಳ ಸಂಕಲನಗಳನ್ನು ಒದಗಿಸುವ ಬಗ್ಗೆ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೭ (೧೦೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ ರಾಜ್ಯ ಸರ್ಕಾರದ ಪ್ರಮುಖ ಸರ್ಕಾರಿ ಆದೇಶಗಳ ಸಂಕಲನಗಳನ್ನು ಯಾವ ಯಾವ ಇಲಾಖೆಗಳು ಹೊರಡಿಸಿವೆ ;

(ಆ) ಈ ಸಂಕಲನಗಳನ್ನು ಯಾವ ಯಾವ ವೆಬ್‍ಸೈಟ್‍ಗಳಲ್ಲಿ ಅಪ್‍ಲೋಡ್ ಮಾಡಲಾಗಿದೆ ;

(ಇ) ಇಲಾಖಾವಾರು ಸಂಕಲನಗಳ ಸಾಫ್ಟ್ ಕಾಪಿಯನ್ನು ಶಾಸಕರಿಗೆ ಎಂದಿನಿಂದ ತಲುಪಿಸಲಾಗುವುದು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೮ (೧೦೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ದಕ್ಷಿಣ ವಲಯಕ್ಕೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ೨೦೧೨–೧೩, ೨೦೧೩–೧೪ನೇ ಸಾಲಿನಲ್ಲಿ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ? (ಯೋಜನಾವಾರು, ವಾರ್ಡುವಾರು, ವರ್ಷವಾರು ವಿವರಗಳನ್ನು ನೀಡುವುದು ಹಾಗೂ ಈ ಯೋಜನೆಗಳನ್ನು ನಿರ್ವಹಿಸಿದ ಗುತ್ತಿಗೆದಾರರ ವಿವರಗಳನ್ನು ನೀಡುವುದು)

## ಕರ್ನಾಟಕ ರಾಜ್ಯದ ಮಹಾನಗರ ಪಾಲಿಕೆಗಳಲ್ಲಿನ ವಾಹನಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೯೨೯ (೧೦೭೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ ರಾಜ್ಯದಲ್ಲಿರುವ ಮಹಾನಗರ ಪಾಲಿಕೆಯಲ್ಲಿರುವ ವಾಹನಗಳು ಎಷ್ಟು ; (ಜೆ.ಸಿ.ಬಿ, ಟಿಪ್ಪರ್, ಕಾರು, ಟ್ರ್ಯಾಕ್ಟರ್, ಮೆಟಾಡೋರ್, ಡೋಜರ್, ಟ್ರೈಲರ್, ಆಟೋ, ಜೀಪು, ಆ್ಯಂಬುಲೆನ್ಸ್, ಶವ ಸಾಗಿಸುವ ವಾಹನ ಮುಂತಾದವುಗಳನ್ನು ಮಹಾನಗರ ಪಾಲಿಕೆವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಮಹಾನಗರ ಪಾಲಿಕೆ ಸ್ವಂತವಾಗಿ ಹೊಂದಿರುವ ವಾಹನಗಳು ಎಷ್ಟು; ಖಾಸಗಿಯವರಿಂದ ಗುತ್ತಿಗೆ ಪಡೆದಿರುವ ವಾಹನಗಳ ಸಂಖ್ಯೆ ಎಷ್ಟು ; (ಮಹಾನಗರ ಪಾಲಿಕೆವಾರು ವಿವರ ನೀಡುವುದು)

(ಇ) ಮಹಾನಗರ ಪಾಲಿಕೆಯ ವಾಹನಗಳಲ್ಲಿ ಎಷ್ಟು ವಾಹನಗಳು ಸುಸ್ಥಿತಿಯಲ್ಲಿದೆ; ಎಷ್ಟು ದುರಸ್ಥಿಯಲ್ಲಿದೆ ; ಎಷ್ಟು ವಾಹನಗಳಿಗೆ ವಿಮೆ ಮಾಡಿಸಲಾಗಿದೆ ? (ಮಹಾನಗರ ಪಾಲಿಕೆವಾರು ವಿವರ ನೀಡುವುದು)



## ೨೦೧೪–೧೯ರ ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೯೩೦ (೧೦೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೯ರ ರಾಜ್ಯ ಕೈಗಾರಿಕಾ ನೀತಿ ಎಂದಿನಿಂದ ಜಾರಿಗೆ ಬಂದಿದೆ ; ನೀತಿಯ ಪ್ರಮುಖಾಂಶಗಳೇನು ;(ವಿವರ ನೀಡುವುದು)

(ಆ) ಈ ಕೈಗಾರಿಕಾ ನೀತಿಗೆ ಸಂಬಂಧಿಸಿದಂತೆ ಈವರೆವಿಗೆ ಎಷ್ಟು ಆದೇಶಗಳು ಜಾರಿಗೆ ಬಂದಿದೆ ; (ವಿವರ ನೀಡುವುದು) ಇನ್ನೂ ಬರಬೇಕಾಗಿರುವ ಆದೇಶಗಳು ಯಾವುವು ; ಅವುಗಳನ್ನು ಎಂದಿನಿಂದ ಜಾರಿಗೊಳಿಸುವ ಯೋಚನೆ ಸರ್ಕಾರಕ್ಕೆ ಇದೆ ?

## ಕರ್ನಾಟಕ ರಾಜ್ಯದಲ್ಲಿನ ರೋಗಗ್ರಸ್ಥ ಸಣ್ಣ ಕೈಗಾರಿಕೆಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೯೩೧ (೧೦೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಹಾಲಿ ಎಷ್ಟು ಸಣ್ಣ ಕೈಗಾರಿಕೆಗಳು ರೋಗಗ್ರಸ್ಥ ಎಂದು ಗುರುತಿಸಲ್ಪಟ್ಟಿದೆ ; (ಕೈಗಾರಿಕೆವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಜಾರಿಯಿರುವ ರೋಗಗ್ರಸ್ಥ ಕೈಗಾರಿಕೆಗಳ ಪುನಶ್ಚೇತನ ನೀತಿ ಯೋಜನೆಯ ಪ್ರಮುಖ ಅಂಶಗಳೇನು ;

(ಇ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಕೈಗಾರಿಕಾ ಪುನಶ್ಚೇತನ ಯೋಜನೆಯಡಿಯಲ್ಲಿ

ಪುನಶ್ಚೇತನಗೊಳಿಸಲಾಗಿದೆ ; (ಜಿಲ್ಲಾವಾರು, ಕೈಗಾರಿಕೆವಾರು ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ಇದಕ್ಕಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯ ಮುಜರಾಯಿ ದೇವಾಲಯಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೯೩೨ (೧೦೭೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯಾದ್ಯಂತ ಇರುವ ಮುಜರಾಯಿ ಇಲಾಖೆಯ ಎಷ್ಟು ದೇವಾಲಯಗಳಲ್ಲಿ ಪೂಜೆ–ಪುನಸ್ಕಾರಗಳು ನಡೆಯುತ್ತಿವೆ ; (ದೇವಾಲಯವಾರು, ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಎಷ್ಟು ದೇವಾಲಯುಗಳಲ್ಲಿ ಪೂಜೆಗಳು ನಡೆಯುತ್ತಿಲ್ಲ ; (ದೇವಾಲಯವಾರು, ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು) ಈ ರೀತಿ ಪೂಜೆ ನಡೆಯದಿರಲು ಕಾರಣಗಳೇನು ?

## ಗುತ್ತಿಗೆದಾರನ ನಕಲಿ ಬಿಲ್‌ಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೯೩೩ (೧೦೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಕೇಂದ್ರ ಸರ್ಕಾರದ ಆದಾಯ ತೆರಿಗೆ ಅಧಿಕಾರಿಗಳು ಬೆಂಗಳೂರಿನ ಒಬ್ಬ ಗುತ್ತಿಗೆದಾರರ ಮನೆ ಮೇಲೆ ನಡೆಸಿದ



ದಾಳಿಯಲ್ಲಿ ಸಿಕ್ಕಿದ ದಸ್ತಾವೇಜಿನಲ್ಲಿ ೧೩೦೦ ಕೋಟಿ ರೂಪಾಯಿಗಳ ಗುತ್ತಿಗೆ ವಿವರ ಹಾಗೂ ಕಸ ವಿಲೇವಾರಿಯ ೪೦೦.೦೦ ಕೋಟಿ ರೂಪಾಯಿಗಳ ನಕಲಿ ದಾಖಲೆಗಳು ಮತ್ತು ಹಲವಾರು ನಕಲಿ ದಾಖಲೆಗಳು ಹಾಗೂ ಬಿ.ಬಿ.ಎಂ.ಪಿ. ಯ ನಕಲಿ ಬಿಲ್‌ಗಳು ಸಿಕ್ಕಿಬಿದ್ದಿರುವುದು ನಿಜವೇ ;

(ಆ) ಈ ಗುತ್ತಿಗೆದಾರರು ಯಾರು, ರಾಜ್ಯಾದ್ಯಂತ ಸದರಿ ಗುತ್ತಿಗೆದಾರ ನಿರ್ವಹಿಸಿರುವ ಇತರೆ ಕಾಮಗಾರಿಗಳು ಯಾವುವು ;

(ಇ) ಈ ಗುತ್ತಿಗೆದಾರನಿಗೆ ಸಂಬಂಧಿಸಿದಂತೆ, ರಾಜ್ಯಾದ್ಯಂತ ಇಂತಹ ಎಷ್ಟು ನಕಲಿ ಬಿಲ್ಲುಗಳು ಸಿಕ್ಕಿವೆ ; (ಪ್ರಕರಣವಾರು ವಿವರ ನೀಡುವುದು)

(ಈ) ಆದಾಯ ತೆರಿಗೆ ಇಲಾಖೆಯಿಂದ ಸರ್ಕಾರವು ಸೂಕ್ತ ದಾಖಲೆಗಳನ್ನು ರಾಜ್ಯ ಸರ್ಕಾರವು ಪಡೆದಿದೆಯೇ ? (ವಿವರ ನೀಡುವುದು)

## ಹದಗೆಟ್ಟಿರುವ ರಸ್ತೆಗಳ ಗುಂಡಿ ಮುಚ್ಚುವ ಕುರಿತು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೪ (೧೦೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ರಸ್ತೆಗಳ ತುಂಬಾ ಗುಂಡಿ ಬಿದ್ದು ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗುಂಡಿ ಬಿದ್ದು ಹದಗೆಟ್ಟಿರುವ ರಸ್ತೆಗಳು ಯಾವುವು ; (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ನಗರದ ರಸ್ತೆಗಳು, ಗುಂಡಿ ಮುಚ್ಚಿ ದುರಸ್ಥಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಇ) ಈವರೆಗೆ ಎಷ್ಟು ರಸ್ತೆಗಳ ದುರಸ್ಥಿ ಮಾಡಲಾಗಿದೆ ; ಇದಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು ; (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ಇದಕ್ಕಾಗಿ ನಿಗದಿಪಡಿಸಿದ ಕಾಲಮಿತಿ ಏನು ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ರಸ್ತೆಗಳನ್ನು ಸರಿಪಡಿಸಲಾಗುವುದು ; ಇಲ್ಲದಿದ್ದಲ್ಲಿ, ನಿರ್ವಹಣೆ ಮಾಡದ ಅಧಿಕಾರಿಗಳ ಮೇಲೆ ಕೈಗೊಂಡಿರುವ ಕ್ರಮಗಳೇನು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಅಕ್ರಮಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೫ (೧೦೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಇದುವರೆವಿಗೂ ನಡೆದ ಅಕ್ರಮಗಳು ಯಾವುವು ;

(ಆ) ಈ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳಾವುವು ; (ಇದರಲ್ಲಿ ಭಾಗಿಯಾಗಿರುವ ನೌಕರರು/ ಅಧಿಕಾರಿಗಳ ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಆರ್ಥಿಕವಾಗಿ ಅತ್ಯಂತ ನಷ್ಟದಲ್ಲಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;



(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ನಷ್ಟಕ್ಕೆ ಇಲ್ಲಿ ಕಾರ್ಯನಿರ್ವಹಿಸುತ್ತಿರುವವರ ಲಂಚಕೋರರ ಹಾವಳಿ ಪ್ರಮುಖವಾಗಿರುವುದು ನಿಜವೇ ; ನಿಜವಾದಲ್ಲಿ, ಇವರುಗಳ ಅಕ್ರಮ ಆಸ್ತಿ ಪತ್ತೆ ಹಚ್ಚಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಭರಿಸಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ಪಶುಸಂಗೋಪನೆ ಇಲಾಖೆಯ ಸೌಲಭ್ಯಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೬ (೧೦೭೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮೀಣ ಪ್ರದೇಶದ ರೈತರಿಗೆ ಪಶುಸಂಗೋಪನೆ ಇಲಾಖೆಯ ಯೋಜನೆಗಳ ಕುರಿತು ಮಾಹಿತಿ ಇದೆಯೇ ; ಇಲ್ಲದಿದ್ದಲ್ಲಿ, ರೈತರಿಗೆ ಮಾಹಿತಿಯನ್ನು ತಲುಪಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಆ) ಹಾಗಿದ್ದಲ್ಲಿ, ಇಲಾಖೆಯಲ್ಲಿ ಪಶುವೈದ್ಯರು ನಿರ್ವಹಿಸಬೇಕಾಗಿರುವ ಕರ್ತವ್ಯಗಳೇನು ; (ವಿವರ ನೀಡುವುದು)

(ಇ) ಪಶುಸಂಗೋಪನೆ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳು/ ಯೋಜನೆಗಳಾವುವು ; (ವಿವರ ನೀಡುವುದು)

(ಈ) ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರದ ಎರಡು ತಾಲ್ಲೂಕುಗಳಲ್ಲಿ ಪಶುವೈದ್ಯಾಧಿಕಾರಿಗಳ ಕೊರತೆ ಇದೆಯೇ ; ಕೊರತೆ ನಿವಾರಣೆಗೆ ಯಾವ ಕ್ರಮ ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಉ) ಪಶುಗಳಿಗೆ ಸಂಜೆ ೬ರ ನಂತರ ಉಂಟಾಗುವ ಸಮಸ್ಯೆಗಳಿಗೆ ಹಾಗೂ ಅವುಗಳ ಚಿಕಿತ್ಸೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಪಶುವೈದ್ಯರು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿಯೇ ವಾಸಿಸಬೇಕೆಂಬ ನಿಯಮ ಜಾರಿಗೊಳಿಸಲು ಸಾಧ್ಯವಿಲ್ಲವೇ ? (ವಿವರ ನೀಡುವುದು)

## ರೇಷ್ಮೆ ಇಲಾಖೆಯ ಸೌಲಭ್ಯಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೭ (೧೦೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೇಷ್ಮೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ದೊರಕದೆ ಯೋಜನೆಗಳ ಪ್ರಯೋಜನಗಳನ್ನು ರೈತರು ಪಡೆಯಲಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರೇಷ್ಮೆ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಕುರಿತು ರೈತರಿಗೆ ಮಾಹಿತಿಯನ್ನು ನೀಡಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರದ ಎರಡು ತಾಲ್ಲೂಕುಗಳಲ್ಲಿ ಯಾವ ಯಾವ ರೈತರಿಗೆ ಏನೇನು ಸೌಲಭ್ಯಗಳನ್ನು ಇಲಾಖೆಯಿಂದ ನೀಡಲಾಗಿದೆ ? (ವಿವರ ಒದಗಿಸುವುದು)



## ವಿಜಯಪುರದಲ್ಲಿ ಮಾಸ್ಟರ್ ಪ್ಲ್ಯಾನ್ ಜಾರಿಗೊಳಿಸುವ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೯೩೮ (೧೦೪೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದಲ್ಲಿ ಮಾಸ್ಟರ್ ಪ್ಲ್ಯಾನ್ ಜಾರಿಗೊಳಿಸಲಾಗಿದೆಯೇ ;

(ಆ) ಯಾವ ಯಾವ ರಸ್ತೆಗಳನ್ನು ಅಗಲೀಕರಣಗೊಳಿಸಲಾಗುತ್ತಿದೆ ; ಪ್ರತಿ ರಸ್ತೆಯ ಅಗಲ ಎಷ್ಟು ;

(ಇ) ರಸ್ತೆ ಅಗಲೀಕರಣದಲ್ಲಿ ಯಾವ ಯಾವ ರಸ್ತೆಯ ಯಾವ ಯಾವ ಕಟ್ಟಡಗಳು ಎಷ್ಟು ಪ್ರಮಾಣದಲ್ಲಿ ತೆರವುಗೊಳಿಸಬೇಕಾಗುತ್ತದೆ ಹಾಗೂ ಅದಕ್ಕೆ ನಿಗದಿಪಡಿಸಿದ ಪರಿಹಾರ ಎಷ್ಟು ; (ಪ್ರತಿಯೊಂದು ಆಸ್ತಿವಾರು ವಿವರ ನೀಡುವುದು)

(ಈ) ಈ ಕಾರ್ಯ ಯಾವ ಹಂತದಲ್ಲಿದೆ ; ಈ ಕಾರ್ಯಕ್ಕಾಗಿ ಇಲ್ಲಿಯವರೆಗೂ ಒಟ್ಟು ಒದಗಿಸಿರುವ ಹಣ ಎಷ್ಟು ;

(ಉ) ಒದಗಿಸಬೇಕಾಗಿರುವ ಹಣ ಎಷ್ಟು ; ಪರಿಹಾರ ನೀಡಿಕೆಯಲ್ಲಿ ತಾರತಮ್ಯ ದೂರುಗಳು ಬಂದಿವೆಯೇ ;

(ಊ) ಈ ಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಸಿಂದಗಿ ನಗರದ ಕುಡಿಯುವ ನೀರಿನ ಯೋಜನೆ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೯೩೯ (೧೦೮೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಿಂದಗಿ ನಗರದ ಕುಡಿಯುವ ನೀರಿನ ಯೋಜನೆಗೆ ಸಮೀಪದ ಓಬಲೇಶ್ವರ ಕೆರೆಯಿಂದ ನೀರು ಸರಬರಾಜು ಮಾಡುವ ಯೋಜನೆಯ ಪ್ರಸ್ತಾವನೆಯನ್ನು ನೀರು ಸರಬರಾಜು ಮಂಡಳಿ ತಯಾರಿಸಲಾಗುತ್ತಿದೆಯೇ ;

(ಆ) ಈ ಕಾರ್ಯ ಯಾವ ಹಂತದಲ್ಲಿದೆ ;

(ಇ) ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ?

## ಪೊಲೀಸ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಭತ್ಯೆ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೯೪೦ (೧೦೮೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಶ್ರೇಣಿ ಹಾಗೂ ಭತ್ಯೆಗಳು ತೃಪ್ತಿಕರವಾಗಿಲ್ಲವೆಂದು ಸರ್ಕಾರ ಗಮನಿಸಿದೆಯೇ ; ಮಹಾರಾಷ್ಟ್ರ, ಆಂಧ್ರ ಪ್ರದೇಶ, ಕೇರಳ, ತಮಿಳು ನಾಡು ರಾಜ್ಯಗಳ ಸಿಬ್ಬಂದಿ ವೇತನಕ್ಕೆ ಹೋಲಿಕೆಯ ವಿವರ ನೀಡಿ ;

(ಆ) ಕರ್ತವ್ಯ ನಿರತ ಸಂದರ್ಭದಲ್ಲಿ ನಿರ್ವಹಿಸಿದ ಕರ್ತವ್ಯಗಳಿಗೆ ಯಾವ ಯಾವ ಎಷ್ಟು ಭತ್ಯೆಗಳನ್ನು ನೀಡಲಾಗುತ್ತಿದೆ ? (ಪ್ರಯಾಣ ಭತ್ಯೆ, ದಿನ ಭತ್ಯೆ, ಹೊರ ರಾಜ್ಯ ಪ್ರವಾಸದ ಭತ್ಯೆ, ಅಪರಿಚಿತ ಶವ ಹೂಳುವ ಭತ್ಯೆ, ಖೈದಿಗಳ ಜೊತೆ ಪ್ರಯಾಣಿಸುವಾಗ ಖೈದಿಗಳ ಊಟದ ಭತ್ಯೆ, ಇತ್ಯಾದಿಗಳ ವಿವರ ನೀಡುವುದು)



## ಗುಪ್ತಚರ ಇಲಾಖೆಯನ್ನು ಬಲಪಡಿಸುವ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೯೪೧ (೧೦೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಯುವಕರನ್ನು ಭಯೋತ್ಪಾದಕ ಸಂಘಟನೆಗಳು, ನಕ್ಸಲೇಟ್ ಸಂಘಟನೆಗಳು ಸೆಳೆಯುವ ಕಾರ್ಯದಲ್ಲಿ ಕ್ರಿಯಾಶೀಲರಾಗಿರುವ ವರದಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾನೂನು ಸುವ್ಯವಸ್ಥೆ ಪಾಲನೆಗೆ ಹಾಗೂ ಈ ರೀತಿಯ ಸಂಘಟನೆಗಳ ಚಟುವಟಿಕೆಗಳು ರಾಜ್ಯದ ಗುಪ್ತಚರ ಇಲಾಖೆಗೆ ಮಾಹಿತಿ ಇದೆಯೇ ;

(ಇ) ಈ ನಿಟ್ಟಿನಲ್ಲಿ ಗುಪ್ತಚರ ಇಲಾಖೆಯನ್ನು ಬಲಪಡಿಸುವ ಅಗತ್ಯತೆ ಬಗ್ಗೆ ಸರ್ಕಾರ ಮನಗಂಡಿದೆಯೇ; ಈ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ?

## ರಾಜ್ಯದಲ್ಲಿರುವ ಐ.ಎ.ಎಸ್. ಕೆ.ಎ.ಎಸ್. ಅಧಿಕಾರಿಗಳ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೯೪೨ (೧೦೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಐ.ಎ.ಎಸ್. ಮತ್ತು ಕೆ.ಎ.ಎಸ್. ಹುದ್ದೆಗಳನ್ನು ಸೃಷ್ಟಿಸಲಾಗಿದೆ ಆ ಪೈಕಿ ಖಾಲಿ ಇರುವ ಹುದ್ದೆಗಳು ಯಾವುವು ; (ವಿವರ ಒದಗಿಸುವುದು)

(ಆ) ಐ.ಎ.ಎಸ್. ಮತ್ತು ಕೆ.ಎ.ಎಸ್. ಅಧಿಕಾರಿಗಳ ಕೊರತೆ ಇದೆಯೇ ; ಇದ್ದರೆ ಇದರ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಪಶು ಚಿಕಿತ್ಸಾಲಯಗಳ ಕಾರ್ಯನಿರ್ವಹಣೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೯೪೩ (೧೯೯೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ಆಸ್ಪತ್ರೆ ಹಾಗೂ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; (ಗ್ರಾಮವಾರು ವಿವರ ನೀಡುವುದು)

(ಆ) ಈ ಪಶು ಆಸ್ಪತ್ರೆ ಹಾಗೂ ಚಿಕಿತ್ಸಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಈ ಜಿಲ್ಲೆಗಳಲ್ಲಿ ಯಾವ ಪಶು ಚಿಕಿತ್ಸಾಲಯುಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಿದೆ ;

(ಉ) ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ?



## ಮಹಾನಗರ ಪಾಲಿಕೆಗಳಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹಾಗೂ "ಡಿ" ವರ್ಗದ ನೌಕರರ ಹುದ್ದೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೯೪೪ (೧೯೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಮಹಾನಗರ ಪಾಲಿಕೆ ಹಾಗೂ ನಗರ ಪಾಲಿಕೆಗಳಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹಾಗೂ "ಡಿ" ವರ್ಗದ ನೌಕರರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಹುದ್ದೆಗಳ ನೇಮಕಾತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಹಾಗಿದ್ದಲ್ಲಿ, ಈ ಹುದ್ದೆಗಳ ನೇಮಕಾತಿಗೆ ನಿಗಧಿಪಡಿಸಿದ ವಿದ್ಯಾರ್ಹತೆಗಳೇನು ;

(ಈ) ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹಾಗೂ "ಡಿ" ವರ್ಗದ ನೌಕರರ ಎಷ್ಟು ಹುದ್ದೆಗಳು ಖಾಲಿ ಇವೆ ;

(ಉ) ಈ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮುಜರಾಯಿ ಇಲಾಖೆಯ ದೇವಾಲಯಗಳ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೯೪೫ (೧೯೯೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ದೇವಾಲಯಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ದೇವಾಲಯಗಳ ನಿರ್ವಹಣೆ, ನಿರ್ಮಾಣ ಹಾಗೂ ದುರಸ್ತಿಗಾಗಿ ವಾರ್ಷಿಕವಾಗಿ ಖರ್ಚು ಮಾಡುವ ಹಣ ಎಷ್ಟು ;

(ಈ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ದೇವಾಲಯಗಳ ನಿರ್ವಹಣೆ, ನಿರ್ಮಾಣ ಹಾಗೂ ದುರಸ್ತಿಗಾಗಿ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನ ಎಷ್ಟು ?

## ಸಂಚಾರಿ ಪಶು ಚಿಕಿತ್ಸಾಲಯಗಳ ಕಾರ್ಯನಿರ್ವಹಣೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೯೪೬ (೧೮೯೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಸಂಚಾರಿ ಪಶು ಚಿಕಿತ್ಸಾಲಯಗಳ ಸೌಲಭ್ಯ ಒದಗಿಸುವ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು ; ಹಾಲಿ ಯಾವ ಯಾವ ತಾಲ್ಲೂಕುಗಳಲ್ಲಿ ಈ ವ್ಯವಸ್ಥೆ ಅಳವಡಿಸಲಾಗಿದೆ ;

(ಆ) ಈಗ ಒಟ್ಟು ಎಷ್ಟು ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಲಿವೆ ;

(ಇ) ಸಂಚಾರಿ ಪಶು ಚಿಕಿತ್ಸಾಲಯಗಳು ತಾಂತ್ರಿಕ ತೊಂದರೆ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಸರಿಯಾಗಿ ಕಾರ್ಯನಿರ್ವಹಿಸ –ದಿರುವುದು ನಿಜವೇ ;



(ಈ) ಹಾಗಿದ್ದಲ್ಲಿ, ರೈತರ ಜಾನುವಾರುಗಳ ಆರೋಗ್ಯ ರಕ್ಷಣೆಯಲ್ಲಿ ಸಂಜೀವಿನಿಯಾಗಿ ಕೆಲಸ ಮಾಡಬಲ್ಲ ಸಂಚಾರಿ ಪಶು ಚಿಕಿತ್ಸಾಲಯಗಳು ಸುಸಜ್ಜಿತವಾಗಿ ಕಾರ್ಯನಿರ್ವಹಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಮುಜರಾಯಿ ದೇವಸ್ಥಾನಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೯೪೭ (೧೮೯೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಡದ ದೇವಸ್ಥಾನಗಳು ಎಷ್ಟು ;

(ಇ) ಮುಜರಾಯಿ ಇಲಾಖೆ ದೇವಸ್ಥಾನಗಳ ಅಭಿವೃದ್ಧಿಗಾಗಿ ೨೦೧೪–೧೫ ರಲ್ಲಿ ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು ? (ಸದರಿ ಅನುದಾನವನ್ನು ಸಮರ್ಪಕವಾಗಿ ವಿನಿಯೋಗಿಸಿರುವ ಕುರಿತು ಜಿಲ್ಲಾವಾರು ಮಾಹಿತಿ ನೀಡುವುದು)

## ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೯೪೮ (೧೦೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ರಿಂದ ಇಲ್ಲಿಯವರೆಗೆ ಕರ್ನಾಟಕ ರಾಜ್ಯದಲ್ಲಿ ಸ್ಥಾಪನೆಯಾಗಿರುವ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಹೆಸರು ಮತ್ತು ಯೋಜನಾ ವಿವರ ನೀಡುವುದು)

(ಆ) ಇವುಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಕೈಗಾರಿಕೆಗಳೆಷ್ಟು ;

(ಇ) ಈ ಮೇಲ್ಕಂಡ ಕಾರ್ಖಾನೆಗಳಿಂದ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಸಿ.ಸಿ.ಬಿ.ಯ ಕಾರ್ಯವ್ಯಾಪ್ತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೯೪೯ (೧೦೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಗೃಹ ಇಲಾಖೆಯಲ್ಲಿ ಸಿ.ಸಿ.ಬಿ.ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಖ್ಯೆ ಎಷ್ಟು ; (ಪದನಾಮ/ಹುದ್ದೆವಾರು ಮಾಹಿತಿ ನೀಡುವುದು)

(ಆ) ಸಿ.ಸಿ.ಬಿ.ಯ ಕಾರ್ಯವ್ಯಾಪ್ತಿಯೇನು ;

(ಇ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೂ ಸಿ.ಸಿ.ಬಿ.ಯವರು ಪತ್ತೇ ಹಚ್ಚಿರುವ ಪ್ರಕರಣಗಳೆಷ್ಟು ; (ಪ್ರಕರಣವಾರು ವಿವರ ನೀಡುವುದು)



(ಈ) ಸಿ.ಸಿ.ಬಿ.ಯವರ ಕಾರ್ಯಕ್ಷಮತೆಯ ಶೇಕಡ ಪ್ರಮಾಣ ಎಷ್ಟು ;

(ಉ) ಬೆಂಗಳೂರು ನಗರದಲ್ಲಿ ಸಿ.ಸಿ.ಬಿ. ವ್ಯಾಪ್ತಿಗೆ ಬರುವ ಅಪರಾಧಗಳ ಸಂಖ್ಯೆ ಇಳಿಮುಖವಾಗಿದೆಯೇ (ವಿವರ ನೀಡುವುದು) ?

## ಮಹಿಳಾ ದೌರ್ಜನ್ಯ ಪ್ರಕರಣಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೯೫೦ (೧೦೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ದಾಖಲಾಗಿರುವ ಮಹಿಳಾ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಕಳೆದ ೨ ವರ್ಷಗಳಿಂದ ಬಿಡುಗಡೆಯಾಗಿರುವ ತಪ್ಪಿತಸ್ಥರ ಸಂಖ್ಯೆ ಎಷ್ಟು ; ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಶಿಕ್ಷೆಯಾಗಿರುವ ಪ್ರಕರಣಗಳಲ್ಲಿ ವಿಧಿಸಲಾಗಿರುವ ಶಿಕ್ಷೆಯ ಪ್ರಮಾಣ ಎಷ್ಟು ; (ಪ್ರಕರಣವಾರು ಮಾಹಿತಿ ನೀಡುವುದು)

(ಈ) ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ರೈತರಿಂದ ಸಹಕಾರಿ ಸಂಘಗಳು ಹಾಲು ಖರೀದಿಸಲು ಇರುವ ಅವಧಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೧ (೧೧೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಹಾಲು ಉತ್ಪಾದಕರ ಸಹಕಾರಿ ಸಂಘಗಳು ರೈತರಿಂದ ಹಾಲು ಖರೀದಿಗೆ ಬೆಳಿಗ್ಗೆ ಹಾಗೂ ಸಂಜೆ ನಿಗದಿ ಪಡಿಸಲಾದ ಅವಧಿ ಎಷ್ಟು ; ಮತ್ತು ಈ ಅವಧಿಯ ಜಿಲ್ಲೆಯಿಂದ ಜಿಲ್ಲೆಗೆ ವ್ಯತ್ಯಾಸವಿರುವ ಕಾರಣವೇನು ; (ತಾಲ್ಲೂಕುವಾರು ಅವಧಿಯ ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಹಾಲು ಉತ್ಪಾದಕರ ಸಹಕಾರಿ ಸಂಘಗಳು ರೈತರಿಂದ ಹಾಲನ್ನು ಲೀಟರ್ ಮಾಪನದಲ್ಲಿ ಖರೀದಿಸುತ್ತಿದ್ದು, ಸಹಕಾರಿ ಸಂಘಗಳು ಕೆ.ಎಂ.ಎಫ್.ಗೆ ಕಿಲೋ ಗ್ರಾಂನಲ್ಲಿ ಮಾರಾಟ ಮಾಡುವುದರಿಂದ ರೈತರಿಗೆ ನಷ್ಟ ಹಾಗೂ ಸಹಕಾರಿ ಸಂಘಗಳಿಗೆ ಆಗುವ ಲಾಭದ ಪ್ರಮಾಣವೆಷ್ಟು ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ಇಲಾಖೆಯ ದೇವಸ್ಥಾನಗಳ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೨ (೧೧೦೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ಇಲಾಖೆಗೆ ಒಳಪಟ್ಟ ಎ ಮತ್ತು ಬಿ ದರ್ಜೆಯ ದೇವಸ್ಥಾನಗಳಲ್ಲಿ



ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ದೇವಸ್ಥಾನವಾರು, ಸಿಬ್ಬಂದಿವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ಇಲಾಖೆಗೆ ಒಳಪಟ್ಟ ಎ ಮತ್ತು ಬಿ ದರ್ಜೆಯ ದೇವಸ್ಥಾನಗಳಲ್ಲಿ ಜಿಲ್ಲಾಧಿಕಾರಿ ಮತ್ತು ಮುಜರಾಯಿ ಕಮಿಷನರ್ ಅನುಮತಿಯೊಂದಿಗೆ ರೋಸ್ಟರ್ ಪದ್ಧತಿಯಂತೆ ಸೇವೆಗೆ ಸೇರಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಇನ್ನೂ ಸೇವಾ ಖಾಯಂಯಾತಿ ಮಾಡದಿರಲು ಕಾರಣವೇನು ; ಸೇವಾ ಖಾಯಂಯಾತಿ ಯಾದವರಿಗೆ ನೀಡುತ್ತಿರುವ ಹಿಂದಿನ ಮತ್ತು ಇಂದಿನ ವೇತನಕ್ಕೆ ತಾರತಮ್ಯವೇಕೆ ; ಮತ್ತು ಈ ತಾರತಮ್ಯವನ್ನು ಸರಿಪಡಿಸಲಾಗುವುದೇ ?

## ರಾಜ್ಯದ ಗ್ರಾಮಾಂತರ ಪ್ರದೇಶದ ಐದು ಸೆಂಟ್ಸ್ ಜಾಗದಲ್ಲಿ ಮನೆ ನಿರ್ಮಿಸಲು ಇರುವ ತೊಡಕುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೩ (೧೧೦೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಐದು ಸೆಂಟ್ಸ್ ಸ್ಥಳದಲ್ಲಿ ಮನೆ ನಿರ್ಮಿಸಲು ಅವಕಾಶ ನೀಡದ ನಗರಾಭಿವೃದ್ಧಿ ಪ್ರಾಧಿಕಾರದ ನೀತಿಯ ವಿರುದ್ಧ ಜನ ರೊಚ್ಚಿಗೇಳುವ ಪೂರ್ವದಲ್ಲಿ ನೀತಿ, ನಿಯಮಗಳನ್ನು ರೂಪಿಸಿ ಸರಿಪಡಿಸಲಾಗುವುದೇ; ಇಲ್ಲವಾದಲ್ಲಿ ಇದಕ್ಕೆ ಜವಾಬ್ದಾರರು ಯಾರು ;

(ಆ) ತಲತಲಾಂತರದಿಂದ ಅನುಭವಿಸಿಕೊಂಡು ಬಂದಿರುವ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ನಗರಾಭಿವೃದ್ಧಿ ಪ್ರಾಧಿಕಾರದ ನೀತಿಯಿಂದ ವಿನಾಯಿತಿ ನೀಡಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದಲ್ಲಿ ವಿವಿಧ ಇಲಾಖಾಧಿಕಾರಿಗಳ ಮತ್ತು ಸಿಬ್ಬಂದಿಗಳ ಮೇಲೆ ದಾಖಲಾದ ದೂರಿನ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೪ (೧೧೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಅಧಿಕಾರಿಗಳ ಮತ್ತು ಸಿಬ್ಬಂದಿಗಳ ಮೇಲೆ ೧೦೧೪–೧೫ನೇ ಸಾಲಿನಲ್ಲಿ ದಾಖಲಾದ ದೂರುಗಳು ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಅಧಿಕಾರಿಗಳ ಮತ್ತು ಸಿಬ್ಬಂದಿಗಳ ಮೇಲೆ ೨೦೧೪–೧೫ನೇ ಸಾಲಿನಲ್ಲಿ ದಾಖಲಾದ ದೂರುಗಳಲ್ಲಿ ತನಿಖೆ ನಡೆಸಿ ಕಾನೂನು ಪ್ರಕಾರ ಕ್ರಮ ಕೈಗೊಂಡ ಪ್ರಕರಣಗಳೆಷ್ಟು;

(ಇ) ತಪ್ಪಿತಸ್ಥರ ಮೇಲೆ ತೆಗೆದುಕೊಂಡ ಕ್ರಮಗಳೇನು ; ಪ್ರಕರಣಗಳ ತನಿಖೆಯಿಂದ ತಪ್ಪಿತಸ್ಥರಲ್ಲರೆಂದು ಮುಕ್ತಾಯಗೊಳಿಸಲಾದ ಪ್ರಕರಣಗಳೆಷ್ಟು ? (ಜಿಲ್ಲಾವಾರು ಪ್ರಕರಣವಾರು, ಪ್ರತ್ಯೇಕವಾಗಿ ವಿವರ ನೀಡುವುದು)



## ಸರ್ಕಾರದ ಕಾಯಿದೆ, ಕಾನೂನುಗಳ ರಚಿತವಾಗುವಾಗ ಜನರಿಗೆ ಮನವರಿಕೆ ಮಾಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೫ (೧೧೮೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಸಿಂಗಲ್ ಲೇಔಟ್ (Single Layout) ಮತ್ತು ಲೇಔಟ್ (Layout) ಗಳಿಗೆ ಅನುಮತಿ ಪಡೆಯಲು ಯಾವ, ಯಾವ ದಾಖಲೆಗಳನ್ನು ನಿರ್ಮಿಸಿ ಅನುಮತಿಯನ್ನು ಪಡೆಯಬೇಕಾಗಿದೆ ;

(ಆ) ಸರಕಾರ ಜನಪರವಾದ ಉದ್ದೇಶದಿಂದ ಯಾವುದೇ ಕಾಯಿದೆ, ಕಾನೂನುಗಳನ್ನು ಮಾಡುವಾಗ ಅದನ್ನು ಜನಸಾಮಾನ್ಯರಿಗೆ ಮನವರಿಕೆ ಮಾಡುವ ಹೊಣೆ ಯಾರದ್ದು; ಮತ್ತು ಆ ಹೊಣೆಯನ್ನು ನಿಭಾಯಿಸಲಾಗಿದೆಯೇ ;

(ಇ) ಜನಸಾಮಾನ್ಯರಿಗೆ ಮನವರಿಕೆ ಮಾಡಲು ಸಾಧ್ಯವಾದ ಕಾಯಿದೆ ಕಾನೂನುಗಳು ಜನವಿರೋಧವಾಗಿದ್ದು, ಕರಾಳವಾಗಿರುತ್ತವೆ ಎನ್ನುವ ಅರಿವು ತಮ್ಮ ಅಧಿಕಾರಿಗಳಿಗೆ ಇದೆಯೇ ; ಇಲ್ಲವಾದಲ್ಲಿ ಸರಿಪಡಿಸಲಾಗುವುದೇ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ವ್ಯಕ್ತಿಗಳಿಗೆ ಪೋಲೀಸ್ ವೈಯಕ್ತಿಕ ಭದ್ರತೆ ನೀಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೬ (೧೧೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ವ್ಯಕ್ತಿಗಳಿಗೆ ವೈಯಕ್ತಿಕ ಪೋಲೀಸ್ (Police gunman) ಭದ್ರತೆಯನ್ನು ನೀಡಲಾಗಿದೆ ; ಎಷ್ಟು ಸಮಯದಿಂದ ನೀಡಲಾಗಿದೆ ; (ವಿವರ ನೀಡುವುದು)

(ಆ) ಪೋಲೀಸ್ ಭದ್ರತೆಯನ್ನು ಒದಗಿಸಿದ್ದಲ್ಲಿ ಸದರಿ ಪೋಲೀಸರ ವೆಚ್ಚವನ್ನು ಸರ್ಕಾರ ಭರಿಸುತ್ತದೆಯೇ ; ಅಥವಾ ಭದ್ರತೆ ಪಡೆದವರೇ ಭರಿಸುತ್ತಾರೆಯೇ ; ಈ ಭದ್ರತೆಯನ್ನು ಒದಗಿಸಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ; (ವಿವರ ನೀಡುವುದು)

(ಇ) ಪೋಲೀಸ್ ರಕ್ಷಣೆಯನ್ನು ಪಡೆದ ವ್ಯಕ್ತಿಗಳು ಕ್ರಿಮಿನಲ್ ಚಟುವಟಿಕೆಗಳಲ್ಲಿ ಭಾಗವಹಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ವಿವರ ನೀಡುವುದು ; ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಮಂಗಳೂರು ನಗರದ ಪುರಭವನವನ್ನು ದುರಸ್ಥಿಗಾಗಿ ನವೀಕರಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೭ (೧೧೧೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದ ಪುರಭವನವನ್ನು ದುರಸ್ಥಿಗಾಗಿ ನವೀಕರಣಗೊಳಿಸಲು ತಯಾರಿಸಿದ ಅಂದಾಜು ಮೊತ್ತ ಎಷ್ಟು; ಕೆಲಸವನ್ನು ಪೂರ್ಣಗೊಳಿಸಲು ನಿಗದಿ ಮಾಡಿದ ಸಮಯ ಎಷ್ಟು ; (ವಿವರ ನೀಡುವುದು)



(ಆ) ಮಂಗಳೂರು ಪುರಭವನದಲ್ಲಿ ನಗರದ ಎಲ್ಲಾ ಸಾಂಸ್ಕೃತಿಕ ಚಟುವಟಿಕೆಗಳಾದ ನಾಟಕ, ಯಕ್ಷಗಾನ, ವಿಚಾರಗೋಷ್ಠಿ, ನಡೆಯುವ ಅತ್ಯಂತ ಕಡಿಮೆ ಬಾಡಿಗೆ ದರದ ಸಭಾಭವನವಾಗಿದ್ದು, ನವೀಕೃತಗೊಳ್ಳುವವರೆಗೆ ಈ ಕಾರ್ಯಕ್ರಮಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಮಂಗಳೂರು ಪುರಭವನವನ್ನು ನವೀಕೃತಗೊಳಿಸಿ ದಿನಾಂಕ ೩೧-೧೨-೨೦೧೪ ರಂದು ಸಾರ್ವಜನಿಕರಿಗೆ ಬಿಟ್ಟು ಕೊಡುವುದಾಗಿ ಹೇಳಿದರೂ ಈವರೆಗೂ ಕಾಮಗಾರಿಯನ್ನು ಪೂರ್ಣಗೊಳಿಸಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ನವೀಕೃತ ಪುರಭವನವು ಎಂದು ಸಾರ್ವಜನಿಕರ ಉಪಯೋಗಕ್ಕೆ ನೀಡಲಾಗುವುದು ; ಮತ್ತು ನವೀಕರಣಗೊಳ್ಳಲಿರುವ ಹೊಸ ಯೋಜನೆಯ ಬಗ್ಗೆ ವಿವರ ನೀಡುವುದು ?

## ಬಿಬಿಎಂಪಿಯ ೮ ವಲಯಗಳಿಗೆ ಅನಧಿಕೃತ ಜಾಹಿರಾತು ತೆರವುಗೊಳಿಸಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೮ (೧೧೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಬಿಎಂಪಿಯ ೮ ವಲಯಗಳಲ್ಲಿ ಅನಧಿಕೃತ ಜಾಹಿರಾತುಗಳು ತೆರವುಗೊಳಿಸಲು ನೇಮಕ ಮಾಡಿರುವ ಗುತ್ತಿಗೆದಾರರ ೨೦೧೨-೧೩, ೨೦೧೩-೧೪, ೨೦೧೪-೨೦೧೫ ರಲ್ಲಿ ಎಷ್ಟು

ನಾಮಫಲಕಗಳನ್ನು ತೆರವುಗೊಳಿಸಿರುತ್ತಾರೆ ; ತೆರವುಗೊಳಿಸಿದಲ್ಲಿ ಸಾಮಗ್ರಿಗಳನ್ನು ಎಲ್ಲಿ ಶೇಖರಣೆ ಮಾಡಲಾಗಿದೆ ;

(ಆ) ಅನಧಿಕೃತ ಜಾಹಿರಾತುದಾರರಿಂದ ಎಷ್ಟು ದಂಡ ವಸೂಲು ಮಾಡಲಾಗಿದೆ ; (ದಂಡ ವಸೂಲು ಮಾಡದೇ ಇದ್ದಲ್ಲಿ ಕಾರಣಕರ್ತರಾದ ಸಿಬ್ಬಂದಿ ಮತ್ತು ಅಧಿಕಾರಿಗಳ ಬಗ್ಗೆ ವಿವರ ನೀಡುವುದು)

(ಇ) ಅನಧಿಕೃತ ಜಾಹಿರಾತುಗಳಿಂದ ಬಿಬಿಎಂಪಿ ಬೊಕ್ಕಸಕ್ಕೆ ಉಂಟಾದ ಆದಾಯ/ನಷ್ಟ ಎಷ್ಟು ; ಈ ನಷ್ಟವನ್ನು ಭರಿಸಲು ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳ ರಚನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೯ (೧೧೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳ ರಚನೆ ಸಂದರ್ಭದಲ್ಲಿ ಸರ್ಕಾರ ವಕೀಲರುಗಳಿಗೆ ಮತ್ತು ಸಾಕ್ಷಿದಾರರಿಗೆ ಕಟ್ಟಡದಲ್ಲಿ ವ್ಯವಸ್ಥೆ ಮಾಡದೇ ಇರಲು ಕಾರಣಗಳೇನು ; ಮಂಗಳೂರಿನ ಜಿಲ್ಲಾ ಕೋರ್ಟ್ ಸಂಕೀರ್ಣದಲ್ಲಿ ಸಾಕ್ಷಿದಾರರಿಗೆ ಮತ್ತು ಸರ್ಕಾರಿ ಅಭಿಯೋಜಕರಿಗೆ ಸ್ಥಳಾವಕಾಶ ನೀಡದೇ ಇರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲಾಗುವುದೇ ; (ವಿವರ ನೀಡುವುದು)



(ಆ) ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರಿನಲ್ಲಿ ಸರ್ಕಾರಿ ವಕೀಲರುಗಳ ಸಂಕೀರ್ಣವು ಉಪಯೋಗಕ್ಕೆ ಯೋಗ್ಯವಿಲ್ಲವೆಂದು ಲೋಕೋಪಯೋಗಿ ಇಲಾಖೆಯು ೩ ವರ್ಷಗಳ ಹಿಂದೆಯೇ ಅಭಿಪ್ರಾಯ ನೀಡಿದ್ದರೂ, ಇನ್ನೂ ಆ ಕಟ್ಟಡದಲ್ಲಿ ಸರ್ಕಾರಿ ವಕೀಲರು ಕರ್ತವ್ಯ ನಿರ್ವಹಿಸುತ್ತಿರುವುದು ಕಾನೂನು ಬದ್ಧವೇ;

(ಇ) ಮಂಗಳೂರಿನಲ್ಲಿ ರೂ. ೪೮ ಕೋಟಿ ವೆಚ್ಚದಲ್ಲಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣ ನಿರ್ಮಿಸಿದ್ದರು, ಸಾಕ್ಷಿದಾರರಿಗೆ ಮತ್ತು ವಕೀಲರುಗಳಿಗೆ ಅದರಲ್ಲಿ ಸ್ಥಳ ಅವಕಾಶ ಮಾಡದೇ ಇರಲು ಕಾರಣವೇನು ; ಈ ವಿಭಾಗವನ್ನು ನಿರ್ಲಕ್ಷಿಸಲಾಗಿದೆಯೇ ; (ವಿವರ ನೀಡುವುದು)

(ಈ) ಜಿಲ್ಲಾ ನ್ಯಾಯಾಲಯದ ಸಂಪರ್ಕ ರಸ್ತೆಯನ್ನು ಅಭಿವೃದ್ಧಿಪಡಿಸಲು ಇಲಾಖೆ ಮುಂದಿರುವ ಪ್ರಸ್ತಾವನೆಗಳು ಯಾವುವು ?

## ಮಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಖೈದಿಗಳ ಹೊಡೆದಾಟ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೬೦ (೧೧೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಪ್ರತಿದಿನ ಖೈದಿಗಳ ಹೊಡೆದಾಟದ ಬಗ್ಗೆ ಕೇಸುಗಳು ದಾಖಲಾಗಿರುವ ಬಗ್ಗೆ ಕೈಗೊಂಡ ಕ್ರಮಗಳೇನು ; ಅಕ್ರಮ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ ; ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಕಾರಾಗೃಹದಲ್ಲಿ ಜಾಮಾರ್ ವ್ಯವಸ್ಥೆ ಜಾರಿಯಲ್ಲಿದೆಯೇ ;

(ಆ) ಖೈದಿಗಳಿಗೆ ಭದ್ರತೆಯನ್ನು ಒದಗಿಸಲು ಇಲಾಖೆ ವಿಫಲಗೊಂಡಿದೆಯೇ; (ವಿವರ ನೀಡುವುದು) ಖೈದಿಗಳು ಹೊಡೆದಾಟದಲ್ಲಿ ಭಾಗವಹಿಸದಂತೆ ಕಾರಾಗೃಹದಲ್ಲಿ ಭದ್ರತೆ ವ್ಯವಸ್ಥೆಯನ್ನು ಒದಗಿಸಲು ಅಸಾಧ್ಯವೆ ; ಹೊಡೆದಾಟಗಳು ಯಾವ ಯಾವ ಉದ್ದೇಶಕ್ಕಾಗಿ ನಡೆಯುತ್ತದೆ ; (ವಿವರ ನೀಡುವುದು)

(ಇ) ಮಂಗಳೂರು ಕಾರಾಗೃಹದಲ್ಲಿ ನಿಗದಿತ ಸಂಖ್ಯೆಗಿಂತ ಹೆಚ್ಚುವರಿ ಖೈದಿಗಳನ್ನು ಇಟ್ಟುಕೊಂಡಿರುವುದು ಹೊಡೆದಾಟಕ್ಕೆ ಕಾರಣಗಳೇ; ಪ್ರಸ್ತುತ ಹೆಚ್ಚುವರಿಯಾಗಿರುವ ಖೈದಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಬೆಳಗಾವಿ ವಾಹನ ದಟ್ಟಣೆ ಸಂಚಾರ ಸಮಸ್ಯೆಗೆ ಬೆಲಟ್ರಾಕ್ ಯೋಜನೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೬೧ (೧೧೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಟ್ರಾಫಿಕ್ ಜಾಮ್‌ದಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ವಾಹನ ದಟ್ಟಣೆಯ ಸಮಸ್ಯೆಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು;

(ಆ) ಸುಮಾರು ೪೦ ಕೋಟಿ ರೂ ವೆಚ್ಚದಲ್ಲಿ "ಬೆಲಟ್ರಾಕ್" ಯೋಜನೆಯನ್ನು ಕೈಗೊಳ್ಳುವ ಸಲುವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿದ ಸಂಗತಿ ನಿಜವೇ; (ಈ ಯೋಜನೆಯ ವಿವರ ನೀಡುವುದು) ಈಗ ಆ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ;



(ಇ) ಬೆಳಗಾವಿ ಜಿಲ್ಲೆಯಲ್ಲಿ ಕುಸಿಯುತ್ತಿರುವ ಕಾನೂನು ಸುವ್ಯವಸ್ಥೆ ಹೆಡೆ ಬಿಚ್ಚುತ್ತಿರುವ ಸಮಾಜಘಾತುಕ ಶಕ್ತಿಗಳು ಹೆಚ್ಚುತ್ತಿರುವ ಅಪರಾಧ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು;

(ಈ) ಕಾರುಗಳಲ್ಲಿ ಡ್ರೈವರ್ ಹಾಗೂ ಮುಂದೆ ಕುಳಿತವರು ಬೆಲ್ಟ್ ಹಾಕದೇ ಇದ್ದರೂ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದೇ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

## ಜಿನಿಂಗ್ ಮತ್ತು ಪ್ರೆಸ್ಸಿಂಗ್ ಫ್ಯಾಕ್ಟರಿ ಸ್ಥಾಪಿಸಲು ಆರ್ಥಿಕ ಸಹಾಯ ಮತ್ತು ಪರವಾನಿಗೆ ನಿರ್ದಿಷ್ಟ ಅವಧಿ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೬೨ (೧೧೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಬಾಗಲಕೋಟೆ, ವಿಜಯಪೂರ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಹೆಚ್ಚಾಗಿ ಹತ್ತಿಯನ್ನು ಮುಖ್ಯ ವಾಣಿಜ್ಯ ಬೆಳೆಯನ್ನಾಗಿ ಬೆಳೆಯುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಜಮೀನುಗಳು ಮಲಪ್ರಭಾ, ಘಟಪ್ರಭಾ ಮತ್ತು ಕೃಷ್ಣಾ ನದಿಗಳ ಕಮಾಂಡ್ ಏರಿಯಾದಲ್ಲಿ ಬರುತ್ತಿದ್ದು, ಈ ಭಾಗದಲ್ಲಿ ಹತ್ತಿಯನ್ನು ಹೆಚ್ಚಾಗಿ ಬೆಳೆಯುತ್ತಿದ್ದರೂ ಆಧುನಿಕ ಜಿನ್ನಿಂಗ್ ಮತ್ತು ಪ್ರೆಸ್ಸಿಂಗ್ ಫ್ಯಾಕ್ಟರಿಗಳು ಕಡಿಮೆ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಇವುಗಳನ್ನು ಸ್ಥಾಪಿಸಲು ಸರ್ಕಾರದವರು ಆರ್ಥಿಕ ಸಹಾಯ ಹಾಗೂ ಸಿಂಗಲ್ ವಿಂಡೋ ಯೋಜನೆ ಅಡಿಯಲ್ಲಿ

ಅವಶ್ಯವಿರುವ ಪರವಾನಿಗೆಯನ್ನು ನಿರ್ದಿಷ್ಟ ಕಾಲಮಿತಿ ಅವಧಿಯೊಳಗಾಗಿ ಕೊಡಲು ಕ್ರಮ ಕೈಗೊಳ್ಳಲಾಗುವುದೇ;

(ಈ) ಜಿನ್ನಿಂಗ್ ಮತ್ತು ಪ್ರೆಸ್ಸಿಂಗ್ ಫ್ಯಾಕ್ಟರಿಗಳು ಈ ಜಿಲ್ಲೆಗಳಲ್ಲಿ ಬಹಳ ಕಡಿಮೆ ಇರುವುದರಿಂದ ಸಿ.ಸಿ.ಆಯ್. ದವರಿಗೆ ಜಿನ್ನಿಂಗ್ ಮಾಡಿಸಲು ತೊಂದರೆ ಆಗುತ್ತಿರುವದರಿಂದ ಅವರು ಈ ಜಿಲ್ಲೆಗಳಲ್ಲಿ ಬಹಳ ಕಡಿಮೆ ಹತ್ತಿಯನ್ನು ಖರೀದಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಜಿನ್ನಿಂಗ್ ಹಾಗೂ ಪ್ರೆಸ್ಸಿಂಗ್ ಫ್ಯಾಕ್ಟರಿ ಸ್ಥಾಪಿಸಿ ರೈತರಿಗೆ ಕಾಟನ್ ಕಾರ್ಪೊರೇಷನ್ ಆಫ್ ಇಂಡಿಯಾದವರಿಂದ ಯೋಗ್ಯ ಬೆಲೆ ಬರುವಂತೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ;

(ಉ) ಯಾವ-ಯಾವ ಜಿಲ್ಲೆಗಳಲ್ಲಿ ಎಷ್ಟು-ಎಷ್ಟು ಅರ್ಜಿಗಳು ಮಂಜೂರಾತಿಗಾಗಿ ಬಾಕಿ ಇದೆ; (ತಾಲ್ಲೂಕುವಾರು ಮತ್ತು ಪುರಸಭೆವಾರು ವಿವರ ನೀಡುವುದು) ಕೆಲವೊಂದು ಕಡೆ ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇನ್ನು ಎಷ್ಟು ದಿನಗಳೊಳಗಾಗಿ ಮಂಜೂರಾತಿಯನ್ನು ನೀಡಲಾಗುವುದು; (ಅರ್ಜಿ ಸಲ್ಲಿಸಿರುವ ಕಂಪನಿಗಳ ಅರ್ಜಿಗಳ ಸಂಪೂರ್ಣ ವಿವರ ನೀಡುವುದು)

(ಊ) ಜಿಲ್ಲಾಧಿಕಾರಿಗಳ ಮತ್ತು ಪುರಸಭೆಗಳಲ್ಲಿ ಮಂಜೂರಾತಿಗೆ ಕಾಯ್ದಿರುವ ಅರ್ಜಿಗಳನ್ನು ಕೂಡಲೇ ಮಂಜೂರಾತಿ ನೀಡುವಂತೆ ಆದೇಶ ನೀಡಲಾಗುವುದೇ?



## ಬೆಳಗಾವಿ ನಗರದಲ್ಲಿ ಜರ್ಮನ್ ಸರ್ಕಾರದ ನೆರವಿನಿಂದ SEWAGE TREATMENT ಪ್ಲಾಂಟ್.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೯೬೩ (೧೧೧೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿ ಜರ್ಮನ್ ಸರ್ಕಾರದ ನೆರವಿನಿಂದ SEWAGE TREATMENT ಪ್ಲಾಂಟ್ ನಿರ್ಮಿಸಬೇಕು ಎಂದು ತೀರ್ಮಾನ ಕೈಗೊಂಡ ಸಂಗತಿ ನಿಜವೇ; (ವಿವರ ನೀಡುವುದು)

(ಆ) ಈಗ ಈ ಪ್ರಸ್ತಾವನೆ ಯಾವ ಹಂತದಲ್ಲಿದೆ;

(ಇ) ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿದ ಸಂಗತಿ ನಿಜವೇ;

(ಈ) ಈ ಕೆಲಸವನ್ನು ಯಾರು ನಿರ್ವಹಿಸುವವರು; ಇದರ ನೀಲಿ ನಕ್ಷೆ, ಅಂದಾಜುವೆಚ್ಚ ಪತ್ರಿಕೆ ತಯಾರಿಸಲಾಗಿದೆಯೇ; (ವಿವರ ನೀಡುವುದು)

(ಉ) ಈಗ ಬೆಳಗಾವಿ SEWAGE ನೀರನ್ನು ಬಳ್ಳಾರಿ ನಾಲಾಕ್ಕೆ ಬಿಡುಗಡೆ ಮಾಡಲಾಗುತ್ತಿದ್ದು ಮುಂದೆ ನೀರು ಮಾರ್ಕಂಡೆಯ ನದಿಗೆ ಕೊಡುತ್ತಿರುವ ಸಂಗತಿ ನಿಜವೇ;

(ಊ) ಈ ನೀರು ಬೆಳೆ ಬೆಳೆಯಲು ಸಹ ಯೋಗ್ಯವಿರುವುದಿಲ್ಲವೆಂದು ಪರಿಸರ ಇಲಾಖೆಯವರು ಅಭಿಪ್ರಾಯ ಪಟ್ಟ ಸಂಗತಿ ನಿಜವೇ;

(ಋ) ಬೆಳಗಾವಿ ನಗರವನ್ನು ಅಭಿವೃದ್ಧಿಪಡಿಸಲು ಬೆಳಗಾವಿ ಕಾರ್ಪೊರೇಷನ್‌ನಿಂದ ಯಾವ-ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇದಕ್ಕೆ ಅಂದಾಜಿಸಲಾದ ಮೊತ್ತ ಎಷ್ಟು; ಯಾವ ಮೂಲದಿಂದ ಸಂಗ್ರಹಿಸಲಾಗುವುದು; (ವಿವರ ನೀಡುವುದು)

(ಋ) ಬೆಳಗಾವಿ ನಗರದ ರಸ್ತೆಯ ಮೇಲೆ ಅಡೆ–ತಡೆಗಳನ್ನು ಅವೈಜ್ಞಾನಿಕವಾಗಿ ನಿರ್ಮಿಸಿದ್ದು, ಇದರಿಂದ ಅಪಘಾತಗಳು ಹೆಚ್ಚಾಗುತ್ತಿದ್ದು ಧಾರವಾಡ ತಾಲ್ಲೂಕಿನ ತಡೆಗೋಡ ರಸ್ತೆ ಮೇಲೆ ಹಾಕಿದ ಪ್ರಕಾರ ವೈಜ್ಞಾನಿಕವಾಗಿ ಅಡೆ–ತಡೆ ಗೋಡೆಗಳನ್ನು ರಸ್ತೆ ಮೇಲೆ ಹಾಕಲು ಕ್ರಮ ಕೈಗೊಳ್ಳಲಾಗುವುದೇ?

## ಶಿವಯೋಗಿಮಂದಿರದಲ್ಲಿ ಕಾರ್ಯಗಾರ ನಿರ್ಮಾಣ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೬೪ (೧೧೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಶಿವಯೋಗಿಮಂದಿರದಲ್ಲಿ ಜನರು ತಮಗೆ ಸಾಕಲು ಆಗದೇ ಇರುವ ಜವಾರಿ ಆಕಳುಗಳನ್ನು ಕಟುಕರಿಗೆ ಕೊಡಬಾರದೆಂಬ ಉದ್ದೇಶದಿಂದ ಶಿವಯೋಗಿಮಂದಿರದ ಗೋಶಾಲೆಗೆ ಬಿಟ್ಟು ಹೋಗುತ್ತಿರುವ ಸಂಗತಿ ನಿಜವೇ ;

(ಆ) ಈ ಗೋಶಾಲೆಯಲ್ಲಿ ಐದುನೂರಕ್ಕಿಂತ ಹೆಚ್ಚಿಗೆ ಜವಾರಿ ಆಕಳುಗಳು ಇದ್ದ ಸಂಗತಿ ನಿಜವೇ ;

(ಇ) ರಾಜ್ಯದಲ್ಲಿ ಆಕಳ ಗೋಮೂತ್ರದಿಂದ ಕಸ ನಾಶಕ ಔಷಧ, ಗೋಅರ್ಕ ಹಾಗೂ ಫಿನಾಯಲ್ ಇದನ್ನು ಆದಿಚುಂಚನಗಿರಿ ಕ್ಷೇತ್ರದ ಶ್ರೀ ಬಾಲಗಂಗಾಧರ ಸ್ವಾಮಿಗಳ ಮಠದಲ್ಲಿ ತಯಾರಿಸುತ್ತಿದ್ದು, ತದನಂತರ ಶಿವಯೋಗ ಮಂದಿರದಲ್ಲಿ ಮಾತ್ರ ತಯಾರಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಶಿವಯೋಗಿಮಂದಿರದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ತರಬೇತಿಗಾಗಿ ಬಂದ ಜನರಿಗೆ ಗೋಮೂತ್ರದಿಂದ ಕಸ ನಾಶಕ ಔಷಧ, ಗೋಅರ್ಕ



ಹಾಗೂ ಫಿನಾಯಲ್ ತಯಾರಿಸುವ ಕೋರ್ಸುಗಳನ್ನು ನಡೆಸುತ್ತಿದ್ದು, ಅವರು ತಮ್ಮ ಕೋರ್ಸ್ ಮುಗಿದ ನಂತರ ಬೇರೆ ಬೇರೆ ಸ್ಥಳಗಳಲ್ಲಿ ಚಿಕ್ಕ ಉದ್ದಿಮೆ ಸ್ಥಾಪಿಸುತ್ತಿದ್ದು, ಅವರಿಗೆ ವರ್ಕ್‌ಶೆಡ್ ಹಾಗೂ ಯಂತ್ರೋಪಕರಣಗಳ ಅವಶ್ಯಕತೆಯಿದ್ದು, ಅದನ್ನು ವಿಶ್ವ ಯೋಜನೆಯಡಿಯಲ್ಲಿ ಅಥವಾ (SDP) ಯೋಜನೆಯಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದೇ ;

(ಉ) ಮುಂದಿನ ವರ್ಷದ ಆಯವ್ಯಯದಲ್ಲಿ ಮೂರು ಕಾರ್ಯಾಗಾರಕ್ಕೆ ಒಂದು ಕೋಟಿ ಐವತ್ತು ಲಕ್ಷ ರೂ. ಹಾಗೂ ಯಂತ್ರೋಪಕರಣಕ್ಕಾಗಿ ಐವತ್ತು ಲಕ್ಷ ರೂ. ಒಟ್ಟು ಎರಡು ಕೋಟಿ ರೂ.ಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಪ್ರಾರ್ಥನಾ ಮಂದಿರಗಳಲ್ಲಿ ಧ್ವನಿವರ್ಧಕಗಳನ್ನು ಉಪಯೋಗಿಸಿರುವ ಮಾನದಂಡಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬೫ (೧೧೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾರ್ಥನಾ ಮಂದಿರಗಳಲ್ಲಿ ಧ್ವನಿವರ್ಧಕಗಳನ್ನು ಉಪಯೋಗಿಸಲು ಇರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತಿದೆಯೇ;

(ಇ) ಜನಬಿಡ ನಗರ ಪ್ರದೇಶಗಳಲ್ಲಿ ಮುಂಜಾವಿನಲ್ಲಿ ಅನೇಕ ಪ್ರಾರ್ಥನಾ ಮಂದಿರಗಳು ಏಕ ಕಾಲದಲ್ಲಿ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗುವಂತೆ ಕಾನೂನನ್ನು ಉಲ್ಲಂಘಿಸಿ ತೊಂದರೆ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಕುರಿತಾಗಿ ಸರ್ಕಾರ ಧ್ವನಿವರ್ಧಕ ಬಳಕೆಯನ್ನು ನಿಯಂತ್ರಿಸಲು ಏನು ಕ್ರಮ ಕೈಗೊಂಡಿದೆ?

## ಪಶುಸಂಗೋಪನಾ ಇಲಾಖೆ ಪುನರಚನೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬೬ (೧೧೨೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖಾ ಪುನರಚನೆಯ ಬಗ್ಗೆ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಆ ಸಮಿತಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ;

(ಆ) ಸಲ್ಲಿಸಿದ್ದರೆ ಸರ್ಕಾರ ಈ ವರದಿಯನ್ನು ಅನುಷ್ಠಾನಗೊಳಿಸಲು ಕೈಗೊಂಡ ಕ್ರಮಗಳೇನು;

(ಇ) ಒಂದು ವೇಳೆ ಅನುಷ್ಠಾನಗೊಳಿಸದಿದ್ದಲ್ಲಿ ಇದಕ್ಕೆ ಕಾರಣಗಳೇನು; ಹಾಗೂ ಯಾವಾಗ ಇದನ್ನು ಜಾರಿಗೆ ತರಲಾಗುವುದು;

(ಈ) ಈ ವರದಿಯ ಮುಖ್ಯಾಂಶಗಳಾವುವು?

## ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಮಂಜೂರಾದ ಪೇದೆಗಳ ಹಾಗೂ ಇತರೆ ವರ್ಗದ ಅಧಿಕಾರಿಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬೭ (೧೧೨೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಒಟ್ಟು ಮಂಜೂರಾದ ಪೇದೆಗಳ ಹಾಗೂ ಇತರೆ ವರ್ಗದ ಅಧಿಕಾರಿಗಳ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)



(ಆ) ಈಗ ಹಾಲಿ ಕಾರ್ಯನಿರ್ವಹಿಸುತ್ತಿರುವ ಪೇದೆಗಳು ಹಾಗೂ ಇತರೆ ಅಧಿಕಾರಿಗಳ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕೈಗಾರಿಕೆಗಾಗಿ ಬಳಸಿಕೊಂಡಿರುವ ಕೃಷಿ ಭೂಮಿ ಕುರಿತು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬೮ (೧೧೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆಗೆ ಸರಕಾರ ಕಳೆದ ೧೦ ವರ್ಷಗಳಲ್ಲಿ ವಶಪಡಿಸಿಕೊಂಡ ಕೃಷಿ ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ವಶಪಡಿಸಿಕೊಂಡು ಕೈಗಾರಿಕೆಗಾಗಿ ಬಳಸಿಕೊಂಡ ಭೂಮಿಯ ವಿಸ್ತೀರ್ಣ ಎಷ್ಟು ; ಬಳಕೆಯಾಗದ ಭೂಮಿ ಎಷ್ಟು; (ಕೈಗಾರಿಕೆ ಸ್ಥಾಪನೆ ಮಾಡದೇ ಉಳಿದಿರುವ ಭೂಮಿಯ ಜಿಲ್ಲಾವಾರು ವಿವರ ನೀಡುವುದು)

(ಇ) ಕೃಷಿ ಯೋಗ್ಯವಲ್ಲದ ಭೂಮಿಯನ್ನು ಗುರುತಿಸಿ ಅಲ್ಲಿ ಕೈಗಾರಿಕೆ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ ? (ಇದ್ದಲ್ಲಿ ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಅಪರಾಧಗಳನ್ನು ನಿಯಂತ್ರಿಸುವ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬೯ (೧೧೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರಕ್ಕೆ ಒಟ್ಟು ಮಂಜೂರಾದ ಪೊಲೀಸ್ ಪೇದೆಗಳ ಹಾಗೂ ಇತರೆ ವರ್ಗದ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಪೊಲೀಸ್ ಇಲಾಖೆಯ ಮಾನದಂಡದ ಪ್ರಕಾರ ಜನಸಂಖ್ಯಾವಾರು ಇರಬೇಕಾದ ಪ್ರತಿಶತ ಪೊಲೀಸ್ ಸಿಬ್ಬಂದಿಯ ಸಂಖ್ಯೆ ಎಷ್ಟು;

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಪೇದೆಗಳು ಹಾಗೂ ಇತರೆ ವರ್ಗದ ಅಧಿಕಾರಿಗಳ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಈ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಅಪರಾಧಗಳನ್ನು ನಿಯಂತ್ರಿಸಲು ಈಗಿರುವ ಕಡಿಮೆ ಸಿಬ್ಬಂದಿಗಳಿಂದ ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಇದನ್ನು ಸರಿಪಡಿಸಲು ತೆಗೆದುಕೊಂಡು ಕ್ರಮಗಳೇನು?



## ರಾಜಕಾಲುವೆಗಳ ನಿರ್ವಹಣೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೦ (೧೧೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ರಾಜಕಾಲುವೆಗಳ ನಿರ್ವಹಣೆಗೆ ಸರ್ಕಾರ ಕಳೆದ ೨ ವರ್ಷಗಳಿಂದ ವೆಚ್ಚ ಮಾಡಿರುವ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ನಗರದ ರಾಜಕಾಲುವೆಗಳಲ್ಲಿ ತ್ಯಾಜ್ಯವನ್ನು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಯಾವ ಪ್ರದೇಶಗಳಲ್ಲಿ ಈ ರೀತಿಯ ತ್ಯಾಜ್ಯವನ್ನು ರಾಜಕಾಲುವೆಗೆ ಸುರಿಯಲಾಗುತ್ತಿದೆ ;

(ಈ) ತ್ಯಾಜ್ಯವನ್ನು ರಾಜಕಾಲುವೆಗೆ ಸುರಿಯಲು ಪಾಲಿಕೆಯ ನಿಯಮಗಳಲ್ಲಿ ಅವಕಾಶ ಇದೆಯೇ ;

(ಉ) ಇಲ್ಲದಿದ್ದಲ್ಲಿ, ತ್ಯಾಜ್ಯವನ್ನು ರಾಜಕಾಲುವೆಗೆ ಹಾಕುತ್ತಿರುವ ಎಷ್ಟು ಜನರ ವಿರುದ್ಧ ಶಿಸ್ತು ಕ್ರಮ ಜರುಗಿಸಿದೆ ; (ಹೆಸರು ಮತ್ತು ವಿಳಾಸ ನೀಡುವುದು)

(ಊ) ಸರ್ಕಾರ ಈ ರೀತಿಯ ತ್ಯಾಜ್ಯವನ್ನು ತೆಗೆಸಲು ಪ್ರತಿ ವರ್ಷ ಖರ್ಚು ಮಾಡುತ್ತಿರುವ ಮೊತ್ತ ಎಷ್ಟು ;

(ಋ) ಸರ್ಕಾರದ ಹಣ ದುಂದು ವೆಚ್ಚ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಶಿಸ್ತು ಕ್ರಮ ಜರುಗಿಸಿದೆಯೇ ;

(ಎ) ಹಾಗಿದ್ದಲ್ಲಿ, ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಿದೆ ? (ವಿವರ ನೀಡುವುದು)

## ಖಜಾನೆ ಇಲಾಖೆಯಲ್ಲಿ ಭ್ರಷ್ಟಾಚಾರ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೧ (೧೧೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಜಾನೆ ಇಲಾಖೆಯಲ್ಲಿರುವ ನೌಕರರ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಖಜಾನೆ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಅಧಿಕಾರಿ ಹಾಗೂ ನೌಕರರ ವಿರುದ್ಧ ಸರ್ಕಾರ ಕ್ರಮ ಜರುಗಿಸಿದೆ ?

## ಪಾದಚಾರಿ ಮಾರ್ಗಗಳಲ್ಲಿ ಅಳವಡಿಸಿದ ಕಲ್ಲುಗಳ ಬದಲಾವಣೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೨ (೧೧೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಬರುವ ಪಾದಚಾರಿ ಮಾರ್ಗದ ಕಲ್ಲುಗಳನ್ನು ಅಳವಡಿಸಲು ಸರ್ಕಾರ ಕಳೆದ ಒಂದು ವರ್ಷದಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಆ) ಪಾದಚಾರಿ ಮಾರ್ಗಗಳಲ್ಲಿ ಅಳವಡಿಸಲಾಗುತ್ತಿರುವ ಕಲ್ಲುಗಳು ಕಾಮಗಾರಿ ತುಂಬಾ ಕಳಪೆ ಮಟ್ಟದಲ್ಲಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ಹಾಗಿದ್ದಲ್ಲಿ, ನಗರದ ಯಾವ ಯಾವ ಸ್ಥಳಗಳಲ್ಲಿ ಈ ರೀತಿಯ ಕಳಪೆ ಕಾಮಗಾರಿ ನಡೆದಿದೆ ; ಕಳಪೆ ಮಟ್ಟದ ಕಾಮಗಾರಿಯನ್ನು ನಡೆಸಿರುವ ಎಷ್ಟು ಗುತ್ತಿಗೆದಾರರ ವಿರುದ್ಧ ಸರ್ಕಾರ ಕ್ರಮ ಜರುಗಿಸಿದೆ;

(ಈ) ಹೊಸ ಕಲ್ಲುಗಳನ್ನು ಅಳವಡಿಸಿದ ನಂತರ ಹಳೆ ಕಲ್ಲುಗಳನ್ನು ತೆಗೆದು ಅವುಗಳನ್ನು ಹರಾಜು ಮಾಡಲಾಗಿದೆಯೇ ;

(ಉ) ಹಾಗಿದ್ದಲ್ಲಿ, ಹರಾಜಿನಲ್ಲಿ ಹಳೆ ಕಲ್ಲುಗಳಿಂದ ಬಂದ ಆದಾಯ ಎಷ್ಟು ? (ವಿವರ ನೀಡುವುದು)

## ಕಾನೂನು ಸುವ್ಯವಸ್ಥೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೩ (೧೧೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಕಳೆದ ಒಂದು ವರ್ಷದಿಂದ ನಡೆದಿರುವ ಕೊಲೆ, ದರೋಡೆ, ಕಳ್ಳತನ, ಡಕಾಯಿತಿ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಪತ್ತೆ ಹಚ್ಚಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಪತ್ತೆ ಹಚ್ಚಬೇಕಾದ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು ಎಲ್ಲೆಲ್ಲಿ ; (ಪ್ರತ್ಯೇಕ ವಿವರ ನೀಡುವುದು)

(ಇ) ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಖೋಟಾ ನೋಟುಗಳ ಚಲಾವಣೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೪ (೧೧೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚುತ್ತಿರುವ ಖೋಟಾ ನೋಟುಗಳ ಚಲಾವಣೆಯಿಂದ ಅಮಾಯಕ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ಸರ್ಕಾರ ಗಮನಿಸಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಖೋಟಾ ನೋಟುಗಳ ಹಾವಳಿಯನ್ನು ತಪ್ಪಿಸಲು ಕೈಗೊಂಡ ಕ್ರಮಗಳೇನು ;

(ಇ) ಖೋಟಾ ನೋಟುಗಳ ಬೆರೆಕೆಯಿಂದ ಸಾರ್ವಜನಿಕರು ತಮಗೆ ಅರಿವಿಲ್ಲದೆ ಸ್ವೀಕರಿಸುವ ಖೋಟಾ ನೋಟುಗಳಿಂದ ತೊಂದರೆಗೆ ಒಳಗಾಗಿ ಪೊಲೀಸರಿಂದ ವಿಚಾರಣೆ ಎದುರಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಮುಜರಾಯಿ ಇಲಾಖೆಯ ದೇವಸ್ಥಾನಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೫ (೧೧೩೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ, ಮುಜರಾಯಿ ಇಲಾಖಾ ವ್ಯಾಪ್ತಿಯಲ್ಲಿನ ದೇವಾಲಯಗಳ ಸಂಖ್ಯೆ ಎಷ್ಟು ;



(ಆ) ಸದರಿ ದೇವಾಲಯಗಳ ಜೀರ್ಣೋದ್ಧಾರಕ್ಕಾಗಿ ಯಾವ ಯಾವ ಯೋಜನೆಗಳಲ್ಲಿ ಹಣ ಬಿಡುಗಡೆ ಮಾಡಲಾಗುತ್ತಿದೆ ;

(ಇ) ಸದರಿ ಯೋಜನೆಯ ಮಾನದಂಡಗಳೇನು ; (ವಿವರ ಸಲ್ಲಿಸುವುದು)

(ಈ) ಕಳೆದ ೩ ವರ್ಷಗಳಿಂದ ಬಿಡುಗಡೆ ಮಾಡಿರುವ ಹಣ ಎಷ್ಟು;

(ಉ) ಕಾಮಗಾರಿಯು ಯಾವ ಹಂತದಲ್ಲಿದೆ ?

## ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೯೭೬ (೧೧೩೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

ಆ) ಸುಮಾರು ವರ್ಷಗಳಿಂದ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ "ಸಿ" ಮತ್ತು "ಡಿ" ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಾದರೆ, ಖಾಲಿ ಇರುವ ಹುದ್ದೆಗಳನ್ನು ಖಾಯಂ ಆಗಿ ತುಂಬಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ;

ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಿಕೊಳ್ಳಲಾಗುವುದು ?

## ಕೈಗಾರಿಕಾ ಪ್ರದೇಶಗಳ ವಿವರ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೭ (೧೧೩೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಮೈಸೂರು, ಹಾಸನ, ಮಂಡ್ಯ ಹಾಗೂ ಚಾಮರಾಜನಗರ ಜಿಲ್ಲಾ ವ್ಯಾಪ್ತಿಯ ಕೈಗಾರಿಕಾ ಪ್ರದೇಶದ ವಿಸ್ತೀರ್ಣವೆಷ್ಟು; (ವಿವರ ಸಲ್ಲಿಸುವುದು)

ಆ) ಸದರಿ ವಿಸ್ತೀರ್ಣದಲ್ಲಿ ಎಷ್ಟು ಕೈಗಾರಿಕಾ ನಿವೇಶನಗಳನ್ನು ಮಾಡಲಾಗಿದೆ;

ಇ) ಇದುವರೆವಿಗೆ ಹಂಚಿಕೆ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; (ವಿವರಗಳೊಡನೆ)

ಈ) ಹಂಚಿಕೆ ಮಾಡಿರುವ ನಿವೇಶನಗಳಲ್ಲಿ ಎಷ್ಟು ಕಾರ್ಖಾನೆಗಳನ್ನು ಪ್ರಾರಂಭಿಸಲಾಗಿದೆ;

ಉ) ಹಂಚಿಕೆ ಆಗದೆ ಉಳಿದಿರುವ ಖಾಲಿ ನಿವೇಶನಗಳೆಷ್ಟು ?

## ಬಿ.ಬಿ.ಎಂ.ಪಿ ವ್ಯಾಪ್ತಿಯ ಕಾಮಗಾರಿಗಳು.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೮ (೧೧೩೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ೨ ವರ್ಷಗಳಿಂದ ಬಿ.ಬಿ.ಎಂ.ಪಿ ವತಿಯಿಂದ ವಿವಿಧ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಇಲ್ಲಿಯವರೆಗೂ ಹಣವನ್ನು ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



ಆ) ಹಾಗಾದರೆ, ಎಷ್ಟು ಬಾಕಿ ಹಣವನ್ನು ಪಾವತಿಸಬೇಕಾಗಿದೆ ; (ವಾರ್ಡ್‌ವಾರು ವಿವರ ನೀಡುವುದು)

ಇ) ಯಾವ ಕಾಲಮಿತಿಯಲ್ಲಿ ಸದರಿ ಹಣವನ್ನು ಪಾವತಿಸಲಾಗುವುದು ?

## ದೇಶಿ ತಳಿಯ ಗೋವು ಸಂತತಿ ಕ್ಷೀಣಿಸುತ್ತಿರುವ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೯ (೧೧೩೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇಶಿ ತಳಿಯ ಗೋವು ಸಂತತಿ ಕ್ಷೀಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಗೋವುಗಳು ಕ್ಷೀಣಿಸುತ್ತಿರುವುದಕ್ಕೆ ಕಾರಣಗಳೇನು ;

(ಇ) ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ತಾಳಬೆಟ್ಟದಲ್ಲಿ ಬಡಜನರನ್ನು ಒಕ್ಕಲೆಬ್ಬಿಸುತ್ತಿರುವ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೮೦ (೧೧೩೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಚಾಮರಾಜನಗರ ಜಿಲ್ಲೆ ಕೊಳ್ಳೆಗಾಲ ತಾಲ್ಲೂಕು, ತಾಳಬೆಟ್ಟ ಪ್ರದೇಶದಲ್ಲಿ ಹಲವಾರು ವರ್ಷಗಳಿಂದ ವಾಸಿಸುತ್ತಿರುವ ಬಡವರು ಹಾಗೂ ಸಣ್ಣಪುಟ್ಟ ವ್ಯಾಪಾರಸ್ಥರ ಗುಡಿಸಲು, ಅಂಗಡಿ ಹಾಗೂ ವಸತಿಯನ್ನು ಖಾಲಿ ಮಾಡಿಸುತ್ತಿರುವುದು ನಿಜವೆ;

ಆ) ಇವರುಗಳು ಎಷ್ಟು ವರ್ಷಗಳಿಂದ ಈ ಸ್ಥಳದಲ್ಲಿ ವಾಸ ಹಾಗೂ ಅಂಗಡಿ ನಡೆಸುತ್ತಿದ್ದಾರೆ;

ಇ) ಸದರಿ ಜಾಗಕ್ಕೆ ಅನೇಕ ವರ್ಷದಿಂದ ತೆರಿಗೆ ಕಟ್ಟಿದ್ದರೂ ಇದರ ಬಗ್ಗೆ ಕ್ರಮಕೈಗೊಂಡಿರಲು ಕಾರಣವೇನು ;

ಈ) ವಸತಿ ರಹಿತ ಹಾಗೂ ಅಂಗಡಿ ಇರುವ ಕುಟುಂಬಗಳಿಗೆ ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೆ ;

ಉ) ಇಲ್ಲದಿದ್ದಲ್ಲಿ, ಯಾವಾಗ ಮಾಡಲಾಗುವುದು; ಹೊಸ ಅಂಗಡಿ, ಮಳಿಗೆಗಳನ್ನು ಇವರೆಲ್ಲರಿಗೆ ಉಚಿತವಾಗಿ ಅಥವಾ ತುಂಬಾ ಕಡಿಮೆ ದರದಲ್ಲಿ ಅವಕಾಶ ಮಾಡಲಾಗುವುದೆ ?

## ಬಡ ನೇಕಾರರಿಗೆ ಬಿಡಿಎ ಯಿಂದ ಹೊಸ ಬಡಾವಣೆ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೮೧ (೧೧೩೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ಇತ್ತೀಚೆಗೆ ನೇಕಾರರಿಗೆ ಹೊಸದಾಗಿ ನೇಕಾರಿಕೆ ಮಾಡಲು ಅನುಮತಿ ನಿರಾಕರಿಸಿರುವ ಹಿನ್ನೆಲೆಯಲ್ಲಿ ಬಿಡಿಎ ವತಿಯಿಂದ ಹೊಸ ವಲಯಗಳಲ್ಲಿ ನೇಕಾರಿಕೆ ಕಾಲೋನಿ ಮಾಡಲು ಸರ್ಕಾರ ಚಿಂತಿಸಿದೆಯೇ;

(ಆ) ಹಿಂದಿನಿಂದಲೂ ನೇಕಾರಿಕೆ ಮಾಡಿಕೊಂಡಿರುವವರ ಮೇಲೆ ಇತ್ತೀಚಿನ ದಿನಗಳಲ್ಲಿ ಆ ಉದ್ಯಮ ಬಂದ್ ಮಾಡಿಸುತ್ತಿರುವ ಹಿನ್ನೆಲೆಯಲ್ಲಿ ನೇಕಾರರ ಉದ್ಯಮಕ್ಕೆ ಅನುಕೂಲ ಮಾಡುವ ದೃಷ್ಟಿಯಿಂದ ಈ ಯೋಜನೆ ತರಲು ಯೋಚಿಸಿದೆಯೇ;



(ಇ) ಹಾಗಿದ್ದಲ್ಲಿ, ಯಾವ ಯಾವ ಜಾಗದಲ್ಲಿ ನೇಕಾರಿಕೆ ಉದ್ಯಮದ ಬಡಾವಣೆ ಮಾಡಲಾಗುವುದು;

(ಈ) ಈ ವರ್ಷದ ಆಯ–ವ್ಯಯದಲ್ಲಿ ಬೆಂಗಳೂರಿನಲ್ಲಿ ವಾಸ ಮಾಡುವ ಬಡ ನೇಕಾರರಿಗೆ ಅನುಕೂಲ ಮಾಡಲು ಮುಂದಾಗುವುದೇ?

## ರೇಷ್ಮೆ ಬೆಳೆ ಅಭಿವೃದ್ಧಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೮೨ (೧೧೩೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ರೇಷ್ಮೆ ಬೆಳೆ ಕಡಿಮೆಯಾಗಿ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರೇಷ್ಮೆ ಬೆಳೆಯನ್ನು ಅಭಿವೃದ್ಧಿಪಡಿಸಲು ರೈತರಿಗೆ ಸಂಪೂರ್ಣ ಸಹಕಾರ ನೀಡದಿರಲು ಕಾರಣವೇನು;

(ಇ) ರೈತರನ್ನು ಹುರಿದುಂಬಿಸಿ ಹೆಚ್ಚಿನ ರೇಷ್ಮೆ ಬೆಳೆಯಲು ಸರ್ಕಾರ ಹೊಸ ಕಾರ್ಯಕ್ರಮ ರೂಪಿಸಿದೆಯೇ;

(ಈ) ರೇಷ್ಮೆ ಕೊರತೆಗೆ ಬೇರೆ ಮಾರ್ಪಾಡು ಮಾಡಲಾಗಿದೆಯೇ; ರೇಷ್ಮೆ ಕೊರತೆಯಿಂದ ರಾಜ್ಯದ ನೇಕಾರರು ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ನೇಕಾರರಿಗೆ ರೇಷ್ಮೆಯನ್ನು ಯಾವ ರೀತಿ ಒದಗಿಸಲಾಗುವುದು?

## ತುಮಕೂರು ಜಿಲ್ಲೆಯ ಕೈಗಾರಿಕೆಗಳ ವಿವರ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೮೩ (೧೧೩೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿರುವ ಬೃಹತ್ ಹಾಗೂ ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ಜಿಲ್ಲೆಯ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟೆಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ; ಇನ್ನು ಎಷ್ಟು ಕೈಗಾರಿಕೆಗಳಿಗೆ ಬೇಡಿಕೆ ಇದೆ; (ವಿವರ ನೀಡುವುದು)

(ಇ) ಮುಂದಿನ ದಿನಗಳಲ್ಲಿ ಹೊಸ ಕೈಗಾರಿಕೆಗಳಿಗೆ ಉತ್ತೇಜನ ನೀಡಲಾಗುವುದೇ;

(ಈ) ಹೊಸ ಕೈಗಾರಿಕೆಗಳಿಗೆ ಭೂಮಿಯನ್ನು ಯಾವ ಮಾರ್ಗಸೂಚಿ ಆಧಾರದಲ್ಲಿ ನೀಡಲಾಗುವುದು?

## ಬೆಂಗಳೂರಿನಲ್ಲಿ ವಾಸಿಸುವ ಬಡವರಿಗೆ ಕೂಲಿ ಕಾರ್ಮಿಕರಿಗೆ ನಿವೇಶನ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೮೪ (೧೧೩೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಇದುವರೆಗೆ ಮಾಡಿರುವ ಒಟ್ಟು ಬಡಾವಣೆಗಳು ಎಷ್ಟು; ಯಾವುವು;

(ಆ) ಯಾವ ಯಾವ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ರಚಿಸಲಾಗಿದೆ;



(ಇ) ಬೆಂಗಳೂರಲ್ಲಿ ವಾಸಿಸುವ ಬಡವರಿಗೆ ಯಾವ ಮಾನದಂಡದಲ್ಲಿ ನಿವೇಶನ ನೀಡಲಾಗಿದೆ; ಎಷ್ಟು; ಬಡವರಿಗೆ ಉಚಿತವಾಗಿ ನೀಡಲಾಗಿದೆ;

(ಈ) ಬಡವರಿಗೆ ಉಚಿತ ನಿವೇಶನ ನೀಡಲು ಹೊಸ ಬಡಾವಣೆಗಳನ್ನು ಮಾಡಲು ಯೋಚಿಸಲಾಗಿದೆಯೇ; ಎಲ್ಲೆಲ್ಲಿ; ಯಾವಾಗ ಮಾಡಲಾಗುವುದು;

(ಉ) ಬಡವರನ್ನು ಗುರುತಿಸಲು ಈಗಾಗಲೇ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆಯೇ?

## ಭಾರತದ ಸಂವಿಧಾನ ತಿದ್ದುಪಡಿ ೩೭೧(ಜೆ) ಅಡಿಯಲ್ಲಿ ಸಚಿವಾಲಯದ ವಿವಿಧ ವೃಂದಗಳ ಮುಂಬಡ್ತಿ ತಡೆಹಿಡಿದಿರುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರು (ಶಿಕ್ಷಕರ ಕ್ಷೇತ್ರ) :–**

೯೮೫ (೧೧೪೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಚಿವಾಲಯದಲ್ಲಿನ ರಾಜ್ಯ ಮಟ್ಟದ ಸ್ಥಳೀಯ ವೃಂದ ಆಯ್ಕೆ ಮಾಡಿಕೊಂಡ ಪ್ರತಿಶತ ೮ ಮುಂಬಡ್ತಿಗೆ ಸಂಬಂಧಿಸಿದಂತೆ ಕೆಲವು ತಿಂಗಳುಗಳಿಂದ ತಡೆಯಾಜ್ಞೆ ಇದ್ದರೂ ಸಹ ಉಳಿದ ಶೇಕಡ ೯೨ರಷ್ಟು ನೌಕರರು/ಅಧಿಕಾರಿಗಳಿಗೆ ಷರತ್ತುಬದ್ಧ ಮುಂಬಡ್ತಿ ನೀಡಿರುವ ಬಗ್ಗೆ ವೃಂದವಾರು ವಿವರಗಳು ನೀಡುವುದು ; ಇದೇ ರೀತಿ ಹೈದ್ರಾಬಾದ್ ಕರ್ನಾಟಕ ಸ್ಥಳೀಯ ವೃಂದಕ್ಕೆ ಸೇರಿದ ಸಚಿವಾಲಯದ ನೌಕರರ/ಅಧಿಕಾರಿಗಳಿಗೆ ಷರತ್ತುಬದ್ಧ ಮುಂಬಡ್ತಿ ನೀಡದಿರಲು ಕಾರಣವೇನು ;

(ಆ) ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿನ ಅರ್ಜಿ ಸಂಖ್ಯೆ: ೪೩೬೮/೨೦೧೪ರನ್ವಯ ಸಚಿವಾಲಯದಲ್ಲಿನ ಶೇ.೮ ಮುಂಬಡ್ತಿಯಲ್ಲಿ ಹೈದ್ರಾಬಾದ್–ಕರ್ನಾಟಕ ಮೀಸಲಾತಿಗೆ ತಡೆಯಾಜ್ಞೆ ಬಂದಿದ್ದು, ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರದ ವತಿಯಿಂದ ಯಾವ ಯಾವ ಕ್ರಮವನ್ನು ತೆಗೆದುಕೊಳ್ಳಲಾಗಿದೆ ; ಅದರಂತೆ, ತಡೆಯಾಜ್ಞೆ ತೆರವುಗೊಳಿಸಲು ದೀರ್ಘವಿಳಂಬಕ್ಕೆ ಕಾರಣಗಳೇನು ಹಾಗೂ ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು ;

(ಇ) ಹೈದ್ರಾಬಾದ್–ಕರ್ನಾಟಕ ವಿಶೇಷ ಸ್ಥಾನ ನೀಡುವ ೩೭೧(ಜೆ) ಯ ಅನುಷ್ಠಾನಗೊಳಿಸಲು ಮುಂಬಡ್ತಿಯ ಮೀಸಲಾತಿ ಅಧಿಸೂಚನೆಯಲ್ಲಿ ಕೆಲವೊಂದು ತಿದ್ದುಪಡಿಗಳನ್ನು ಮಾಡಬೇಕಾಗಿದ್ದು, ಸಚಿವ ಸಂಪುಟದ ಉಪ ಸಮಿತಿಯಿಂದ ಇದುವರೆಗೆ ೩೭೧(ಜೆ) ಯಾವ ಯಾವ ತಿದ್ದುಪಡಿ ವಿಧೇಯಕಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ; ಅದರಂತೆ, ಸಲ್ಲಿಸದಿದ್ದರೆ, ಕಾರಣಗಳೇನು ; ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು ?

## ಮೈಸೂರು ಸಿಲ್ಕ್ ಸೀರೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೯೮೬(೧೧೫೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ಅಂತರ್‌ರಾಷ್ಟ್ರೀಯ ಗುಣಮಟ್ಟದ ಮೈಸೂರು ಸಿಲ್ಕ್ ಸೀರೆಗಳಿಗೆ ದೇಶಿ ಮತ್ತು ವಿದೇಶಿ ಮಾರುಕಟ್ಟೆಗಳನ್ನು ಅಧಿಕವಾಗಿ ಸೃಷ್ಟಿಸಿ, ಮಾರುಕಟ್ಟೆಯನ್ನು ವಿಸ್ತರಿಸುವ ವಿಷಯವಾಗಿ (KSIC)., ಪ್ರಚಾರ ಕೈಗೊಳ್ಳಲು ಸಂಸ್ಥೆ ಮಾಡಿರುವ ಮತ್ತು ಮಾಡುತ್ತಿರುವ ಕೆಲಸಗಳ ಬಗ್ಗೆ ತಿಳಿಸುವುದು ;



(ಆ) ಸಾರಿಗೆ ಸಂಸ್ಥೆ ಮತ್ತಿತರೆ ಸರ್ಕಾರಿ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಮಹಿಳೆಯರಿಗೆ ಈ ಮೈಸೂರು ಸಿಲ್ಕ್ ಸೀರೆಗಳನ್ನು ಉಚಿತವಾಗಿ ಅಥವಾ ಕಡಿಮೆ ದರದಲ್ಲಿ ವಿತರಿಸಲು ಅಥವಾ ಸಮವಸ್ತ್ರದ ರೂಪದಲ್ಲಿ ಒದಗಿಸಲು ಸರ್ಕಾರ ಚಿಂತಿಸುವುದೇ ?

## ಕೆ.ಎಸ್.ಎಸ್.ಐ.ಡಿ.ಸಿರವರ ಕೈಗಾರಿಕಾ ನಿವೇಶನ/ಶೆಡ್‌ಗಳು

**ಶ್ರೀ ಎಂ.ಬಿ. ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು):–**

೯೮೭(೧೦೦೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ತುಮಕೂರು ಜಿಲ್ಲೆ ತಿಪಟೂರು ತಾಲ್ಲೂಕಿನಲ್ಲಿ ಕೆ.ಎಸ್.ಎಸ್.ಐ.ಡಿ.ಸಿ. ರವರು ಎಷ್ಟು ಎಕರೆ ಪ್ರದೇಶದಲ್ಲಿ ಕೈಗಾರಿಕಾ ನಿವೇಶನ/ಶೆಡ್‌ಗಳನ್ನು ಅಭಿವೃದ್ಧಿಪಡಿಸಿರುತ್ತಾರೆ; (ವಿವರ ಒದಗಿಸುವುದು)

(ಆ) ಸದರಿ ಕೈಗಾರಿಕಾ ನಿವೇಶನ/ಶೆಡ್‌ಗಳನ್ನು ಅಭಿವೃದ್ಧಿಪಡಿಸಿರುವ ಮೂಲ ನಕ್ಷೆಯನ್ನು ನೀಡುವುದು;

(ಇ) ಕೈಗಾರಿಕಾ ನಿವೇಶನ/ಶೆಡ್‌ಗಳನ್ನು ಅಭಿವೃದ್ಧಿಪಡಿಸಿರುವ ಪ್ರದೇಶದಲ್ಲಿ ರಸ್ತೆ, ನೀರಿನ ಟ್ಯಾಂಕ್ ಇನ್ನಿತರೆ ಸಾರ್ವಜನಿಕ ಸೌಲಭ್ಯ ಪ್ರದೇಶಗಳನ್ನು ಮಾರಾಟ ಮಾಡಲು ಅವಕಾಶವಿದೆಯೇ;

(ಈ) ಇಲ್ಲದಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ?

## ರಕ್ತಚಂದನ ಮರಗಳ ಕಳ್ಳ ಸಾಗಣೆ.

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ):–**

೯೮೮(೧೦೬೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ರಾಜ್ಯದಲ್ಲಿ ರಕ್ತಚಂದನ ಮರಗಳನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈವರೆಗೆ ಎಷ್ಟು ಟನ್ ರಕ್ತಚಂದನ ಮರಗಳನ್ನು ವಶಪಡಿಸಿಕೊಳ್ಳಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಈ ರೀತಿಯ ಕಳ್ಳ ಸಾಗಾಣಿಕೆ ಘಟನೆಯಲ್ಲಿ ಎಷ್ಟು ಜನರನ್ನು ಬಂಧಿಸಲಾಗಿದೆ ; (ಆರೋಪಿಗಳ ವಿವರ, ರಾಷ್ಟ್ರೀಯತೆ ಕುರಿತು ಮಾಹಿತಿ ನೀಡುವುದು)

(ಈ) ಇದುವರೆಗೆ ವಶಪಡಿಸಿಕೊಂಡ ರಕ್ತಚಂದನ ಮರಗಳನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಖಾದಿ ಗ್ರಾಮೋದ್ಯೋಗಕ್ಕೆ ನೀಡುವ ಸೌಲಭ್ಯಗಳು.

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೯೮೯(೧೦೧೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ಗ್ರಾಮೀಣ ಕೈಗಾರಿಕೆಗಳಿಗೆ ಸರ್ಕಾರವು ನೀಡುತ್ತಿರುವ ಪ್ರೋತ್ಸಾಹಗಳೇನು;

(ಆ) ರಾಜ್ಯದಲ್ಲಿನ ಕುಶಲಕರ್ಮಿಗಳಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳಾವುವು;



(ಇ) ಖಾದಿ ಗ್ರಾಮೋದ್ಯೋಗಕ್ಕೆ ಸರ್ಕಾರವು ನೀಡುತ್ತಿರುವ ಸೌಲಭ್ಯಗಳೇನು ?

## ಬೆಂಗಳೂರು ಉಗ್ರರ ನೆಲೆ.

**ಶ್ರೀ ಜಗ್ಗೇಶ್ (ನಾಮನಿರ್ದೇಶನ):–**

೯೯೦(೧೦೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ಬೆಂಗಳೂರು ಮಹಾನಗರ ಉಗ್ರರ ನೆಲೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಉಗ್ರರಿಂದ ಸಂಭವಿಸಬಹುದಾದ ಅವಘಡಗಳನ್ನು ತಪ್ಪಿಸುವಲ್ಲಿ ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ;

(ಇ) ಈವರೆಗೆ ಎಷ್ಟು ಜನ ಉಗ್ರರನ್ನು ಬಂಧಿಸಲಾಗಿದೆ ?

## ಬೆಂಗಳೂರು ನಗರದ ಹಸಿರು ವಲಯದಲ್ಲಿ ವಸತಿ ನಿರ್ಮಾಣ.

**ಶ್ರೀ ಜಗ್ಗೇಶ್ (ನಾಮನಿರ್ದೇಶನ):–**

೯೯೧(೧೦೨೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ;

(ಅ) ಬೆಂಗಳೂರು ನಗರದ ಸುತ್ತಮುತ್ತ ಹಸಿರುವಲಯ ವ್ಯಾಪ್ತಿಯೆಂದು ಗುರುತಿಸಿರುವ ಪ್ರದೇಶಗಳು ಯಾವುವು ; ಅವುಗಳ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಹಸಿರು ವಲಯ ಪ್ರದೇಶಗಳಲ್ಲಿ ಬಡಾವಣೆಗಳು, ವಸತಿಗಳು ನಿರ್ಮಾಣಗೊಳ್ಳುತ್ತಿದ್ದು, ಇದನ್ನು ಸಕ್ರಮಗೊಳಿಸಲಾಗುವುದೇ ; ಸಕ್ರಮಾತಿಗೆ ಸರ್ಕಾರದಲ್ಲಿ ಇರುವ ನಿಯಮಗಳೇನು ;

(ಇ) ಮುಂದೆ ಯಾವ ಯಾವ ಪ್ರದೇಶಗಳು ಹಸಿರು ವಲಯದ ವ್ಯಾಪ್ತಿಗೆ ಸೇರಲಿವೆ ?

## ಮೈಲಾರ ಮಲ್ಲಣಾ ದೇವಸ್ಥಾನ ಅಭಿವೃದ್ಧಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೯೨ (೧೦೪೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿನ ದೇವಸ್ಥಾನಗಳ ಅಭಿವೃದ್ಧಿ ಮತ್ತು ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ಮತ್ತು ದೇವಸ್ಥಾನಗಳವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ದೇವಸ್ಥಾನದ ನಿರ್ಮಾಣ ಕಾರ್ಯ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ; (ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಮೈಲಾರ ಮಲ್ಲಣಾ (ಖಂಡೂಬಾ) ದೇವಸ್ಥಾನದ ಅಭಿವೃದ್ಧಿ ಪಡಿಸದೆ ಸುಮಾರು ವರ್ಷಗಳಿಂದ ಇರುವುದಕ್ಕೆ ಕಾರಣಗಳೇನು; ಕೂಡಲೇ ಅಭಿವೃದ್ಧಿ ಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು? (ಮಾಹಿತಿ ನೀಡುವುದು)



## ಪೊಲೀಸ್ ಸಿಬ್ಬಂದಿಗಳಿಗೆ ಸರಿಯಾಗಿ ಆಹಾರ ಧಾನ್ಯ ವಿತರಿಸುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೯೩ (೧೦೪೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ – ಕಲ್ಬುರ್ಗಿ ಜಿಲ್ಲೆಗಳಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ಸರಿಯಾಗಿ ಆಹಾರ ಧಾನ್ಯ ವಿತರಣೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಕಾರಣಗಳಿಗಾಗಿ ವಿತರಣೆಯನ್ನು ತಡೆಹಿಡಿಯಲಾಗಿದೆ; (ವಿವರ ನೀಡುವುದು)

(ಇ) ಸರ್ಕಾರವು ಪೊಲೀಸ್ ಸಿಬ್ಬಂದಿಗಳಿಗೆ ಆಹಾರ ವಿತರಣೆ ಮಾಡುವುದನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ; ಪ್ರತಿ ತಿಂಗಳಿಗೆಷ್ಟು, ಮತ್ತು ಪ್ರತಿ ವರ್ಷ ಎಷ್ಟು ಪ್ರಮಾಣದಲ್ಲಿ ಆಹಾರ ಧಾನ್ಯ ವಿತರಿಸಲಾಗುವುದು ? (ಮಾಹಿತಿ ನೀಡುವುದು)

## ಮುಖ್ಯ ಮಂತ್ರಿಗಳ ಪರಿಹಾರ ನಿಧಿಗೆ ಕೋರಿ ಬಂದ ಅರ್ಜಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೯೪ (೧೦೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಮುಖ್ಯ ಮಂತ್ರಿಯವರ ಪರಿಹಾರ ನಿಧಿಗೆ ೨೦೧೪ನೇ ಸಾಲಿನಲ್ಲಿ ಪರಿಹಾರ ಕೋರಿ ಬಂದ ಅರ್ಜಿಗಳೆಷ್ಟು;

(ಆ) ಈ ಪೈಕಿ ಬೀದರ್ ಜಿಲ್ಲೆಯಿಂದ ಬಂದ ಪರಿಹಾರ ಅರ್ಜಿಗಳೆಷ್ಟು; ಇದರಲ್ಲಿ ಎಷ್ಟು ಅರ್ಜಿದಾರರಿಗೆ ಎಷ್ಟು ಮೊತ್ತದ ಪರಿಹಾರ ವಿತರಿಸಲಾಗಿದೆ;

(ಇ) ಪರಿಹಾರ ವಿತರಿಸಿರುವ ಸಂಬಂಧ ವಿಭಾಗವಾರು ಹಾಗೂ ಜಿಲ್ಲಾವಾರು ಫಲಾನುಭವಿಗಳ ಸಂಖ್ಯೆ ಮತ್ತು ಪರಿಹಾರದ ಮೊತ್ತ ಎಷ್ಟು; (ಕಾರಣ ಸಹಿತ ವಿವರ ನೀಡುವುದು)

(ಈ) ಈ ಪರಿಹಾರ ಪಡೆಯಲು ಇರುವ ಅರ್ಹತೆ ಅಥವಾ ಮಾನದಂಡಗಳೇನು ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೯೫ (೧೦೪೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಸ್ಥಾಪನೆಯಾಗಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; ಆ ಪೈಕಿ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು;

(ಆ) ಈ ಕೈಗಾರಿಕೆಗಳು ಎಷ್ಟು ಜನರಿಗೆ ನೇರ ಮತ್ತು ಪರೋಕ್ಷ ಉದ್ಯೋಗ ನೀಡಿರುತ್ತವೆ;

(ಇ) ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ರೂಪಿಸಿರುವ ವಿಶೇಷ ಪ್ರೋತ್ಸಾಹ ಯೋಜನೆಗಳಾವುವು ? (ವಿವರ ನೀಡುವುದು)



## ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿ ಏಷಿಯನ್ ಪೇಂಟ್ಸ್ ಕಾರ್ಖಾನೆಗೆ ಭೂಮಿ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೬ (೧೦೩೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ತಾಲ್ಲೂಕಿನ, ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿ ಏಷಿಯನ್ ಪೇಂಟ್ಸ್ ಕಾರ್ಖಾನೆಗೆ ಸರ್ಕಾರ ೧೭೫ ಎಕರೆ ಜಮೀನು ಮಂಜೂರು ಮಾಡಿದೆಯೇ ಅಥವಾ ಮಾಡಲು ಉದ್ದೇಶಿಸಿರುವುದು ನಿಜವೇ ; ಏಕ ಘಟಕ ಸಂಕೀರ್ಣ ಯೋಜನೆ ಅಡಿಯಲ್ಲಿ ಯಾವ ದರದಲ್ಲಿ ಭೂಮಿಯನ್ನು ಈ ಕಾರ್ಖಾನೆಗೆ ನೀಡಲಾಗುತ್ತಿದೆ ;

(ಆ) ಒಂದು ವೇಳೆ ಕಾರ್ಖಾನೆಯು ಉತ್ಪಾದನೆಯನ್ನು ಪ್ರಾರಂಭಿಸಿದ್ದಲ್ಲಿ ಬಣ್ಣ ತಯಾರಿಕೆಗೆ ಬಳಸುವ ಸೀಸ (ಲೆಡ್)ನಿಂದ ಉತ್ಪನ್ನವಾಗುವ ರಾಸಾಯನಿಕವು ನದಿಯನ್ನು ಸೇರಿ ನದಿಯ ನೀರು ವಿಷಯುಕ್ತವಾಗಿ ಜನ, ಜಾನುವಾರುಗಳಿಗೆ, ಜಲಚರಗಳಿಗೆ ತೊಂದರೆ ಆಗುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಈ ಜಮೀನಿಗೆ ಬದಲಾಗಿ ನದಿಗೆ ದೂರದಲ್ಲಿ ಒಣಭೂಮಿಯಲ್ಲಿ ಈ ಕಾರ್ಖಾನೆಗೆ ಸ್ಥಳಾವಕಾಶ ಮಾಡಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಮರಳಿನ ಅಭಾವ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೯೭ (೧೦೩೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಾವೇರಿ ಕಪಿಲಾ ನದಿಗಳಲ್ಲಿ ಮರಳು ಗಣಿಗಾರಿಕೆಯನ್ನು ನಿಷೇಧಿಸಲಾಗಿದೆಯೇ; ಇದಕ್ಕೆ ಕಾರಣಗಳೇನು;

(ಆ) ಈ ಜಿಲ್ಲೆಗಳಲ್ಲಿ ಕಳೆದ ವರ್ಷ ಅಕ್ರಮ ಮರಳುಗಾರಿಕೆ ಮೇಲೆ ಎಲ್ಲೆಲ್ಲಿ ದಾಳಿಗಳನ್ನು ನಡೆಸಲಾಗಿದೆ; ಎಷ್ಟು ಮರಳು, ಲಾರಿ, ಟ್ರ್ಯಾಕ್ಟರ್, ಟಿಪ್ಪರ್, ಎತ್ತಿನಗಾಡಿ, ಕೊಪ್ಪರಿಕೆ ಇವುಗಳನ್ನು ವಶಪಡಿಸಿಕೊಳ್ಳಲಾಗಿದೆ; (ಪ್ರತಿಯೊಂದು ಪ್ರಕರಣದ ವಿವರ ಒದಗಿಸುವುದು)

(ಇ) ಇದರಿಂದ ಈ ಜಿಲ್ಲೆಗಳಲ್ಲಿ ಕೃತಕ ಮರಳು ಅಭಾವ ಉಂಟಾಗಿದ್ದು, ಸರ್ಕಾರಿ ಹಾಗೂ ಖಾಸಗಿ ಕಟ್ಟಡ ಕಾಮಗಾರಿಗಳು ಸ್ಥಗಿತವಾಗಿರುವುದು ಮತ್ತು ಮರಳು ಮಾಫಿಯಾದವರು ಇದನ್ನು ದುರುಪಯೋಗ ಪಡಿಸಿಕೊಂಡು ಹೆಚ್ಚಿನ ಬೆಲೆಗೆ ಮರಳು ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸಾರ್ವಜನಿಕರ ಮರಳಿನ ಬೇಡಿಕೆಯನ್ನು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಚಾಮರಾಜನಗರ ನಗರಾಭಿವೃದ್ಧಿ ಪ್ರಾಧಿಕಾರ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೯೮ (೧೦೩೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ನಗರಾಭಿವೃದ್ಧಿ ಪ್ರಾಧಿಕಾರ ಯಾವಾಗ ರಚನೆ ಆಯಿತು ; ಈ ಪ್ರಾಧಿಕಾರಕ್ಕೆ ಮಂಜೂರಾಗಿರುವ ಸಿಬ್ಬಂದಿ ಸಂಖ್ಯೆ ಎಷ್ಟು ; ಖಾಲಿಯಿರುವ ಸಿಬ್ಬಂದಿ ಸಂಖ್ಯೆ ಎಷ್ಟು ;ಪೂರ್ಣ ಪ್ರಮಾಣದ ಸಿಬ್ಬಂದಿ ನೇಮಕಕ್ಕೆ ಕ್ರಮ ಜರುಗಿಸಲಾಗುವುದೇ ;

(ಆ) ಪ್ರಾಧಿಕಾರಕ್ಕೆ ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಈ ಪ್ರಾಧಿಕಾರದ ಮೂಲಕ ಯಾವ ಯಾವ ಬಡಾವಣೆಗಳನ್ನು ನಿರ್ಮಿಸಲಾಗಿದೆ ; ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; ನಿರ್ಮಿಸಲು ಉದ್ದೇಶಿಸಿರುವ ಬಡಾವಣೆಗಳು ಯಾವುವು ; ಈ ಬಡಾವಣೆಗಳ ನಿರ್ಮಾಣ ಯಾವ ಹಂತದಲ್ಲಿದೆ ?

## ಮಹಾನಗರ ಪಾಲಿಕೆ ಮತ್ತು ಪಾಲಿಕೆಯಿಂದ ಬರುವ ಆಸ್ತಿ ಕರದ ಆದಾಯ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೯೯೯ (೧೧೪೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಮಹಾನಗರ ಪಾಲಿಕೆಗಳ ಸಂಖ್ಯೆ ಎಷ್ಟು ;

(ಆ) ಪ್ರತಿಯೊಂದು ಮಹಾನಗರ ಪಾಲಿಕೆಗಳಿಂದ ಸಂಗ್ರಹವಾಗುವ ಆದಾಯವೆಷ್ಟು ? (೨೦೧೧ ರಿಂದ ೨೦೧೪ ರವರೆಗಿನ ೩ ವರ್ಷದ ಪ್ರತಿಯೊಂದು ಮಹಾನಗರ ಪಾಲಿಕೆಗಳ ವಿವರ ಒದಗಿಸುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ. 0 3491/ 1500 ಪ್ರತಿಗಳು/10–2–15